ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 67
26–8–2025 ಮಂಗಳವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 67

‘ಧರ್ಮದ ಉಳಿವಿಗೆ ಧರ್ಮ ಯುದ್ಧ’

ಬೆಂಗಳೂರು: ದಕ್ಷಿಣ ಬೆಂಗಳೂರು ಬಿಜೆಪಿ ಜಿಲ್ಲಾ ಘಟಕದ ವತಿಯಿಂದ ಸೋಮವಾರ ‘ಧರ್ಮದ ಉಳಿವಿಗೆ ಧರ್ಮ ಯುದ್ಧ’ ಎಂಬ ಶೀರ್ಷಿಕೆಯಡಿ ‘ಧರ್ಮಸ್ಥಳ ಚಲೋ’ ಯಾತ್ರೆ ಆರಂಭವಾಯಿತು. ಯಾತ್ರೆಯಲ್ಲಿ ಅಪಾರ ಸಂಖ್ಯೆಯ ಕಾರ್ಯಕರ್ತರು ಮತ್ತು ನಾಯಕರ ದೊಡ್ಡ ಗುಂಪೇ ಸೇರಿತ್ತು.

ಜಯನಗರ ಶಾಸಕ ಸಿಕೆ ರಾಮಮೂರ್ತಿ ನೇತೃತ್ವದ ಯಾತ್ರೆಯು ಜಯನಗರ 4ನೇ ಬ್ಲಾಕ್‌ನಲ್ಲಿರುವ ಶ್ರೀ ವಿನಾಯಕ ದೇವಸ್ಥಾನದಲ್ಲಿ ಪೂಜೆ ಸಲ್ಲಿಸುವ ಮೂಲಕ ಪ್ರಾರಂಭವಾಯಿತು.

ಬೆಂಗಳೂರು ದಕ್ಷಿಣ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ ಮತ್ತು ಬಸವನಗುಡಿ ಶಾಸಕ ರವಿ ಸುಬ್ರಹ್ಮಣ್ಯ ಅವರು ಯಾತ್ರೆಗೆ ಚಾಲನೆ ನೀಡಿದರು.

ಇಂದು ನೈಸ್ ರಸ್ತೆಯ ಲಿಂಕ್ ರಸ್ತೆ ಜಂಕ್ಷನ್‌ನಲ್ಲಿ ಬಿಜೆಪಿಯ ಬೆಂಗಳೂರು ದಕ್ಷಿಣ ಘಟಕ ಕೈಗೊಂಡಿರುವ ಧರ್ಮಸ್ಥಳ ಚಲೋ ಯಾತ್ರೆಯಲ್ಲಿ ಭಾಗವಹಿಸಿದ್ದೆವು. ನಮ್ಮ ನೆಲದ ಹೆಮ್ಮೆಯ ಪೂಜ್ಯ ಆಧ್ಯಾತ್ಮಿಕ ಕೇಂದ್ರವಾದ ಶ್ರೀ ಕ್ಷೇತ್ರ ಧರ್ಮಸ್ಥಳವು ಈಗ ಸಂಘಟಿತ ಪಿತೂರಿಗೆ ಸಿಲುಕಿದೆ’ ಎಂದು ಸೂರ್ಯ ‘ಎಕ್ಸ್’ನಲ್ಲಿ ಪೋಸ್ಟ್ ಮಾಡಿದ್ದಾರೆ.

ಧರ್ಮಸ್ಥಳದ ಪವಿತ್ರ ದೇವಾಲಯದ ವಿರುದ್ಧ ಹರಡುತ್ತಿರುವ ಸುಳ್ಳು ಪ್ರಚಾರವನ್ನು ಬಿಜೆಪಿ ಸ್ಪಷ್ಟವಾಗಿ ಖಂಡಿಸುತ್ತದೆ. ದೇವಾಲಯ ಮತ್ತು ಅದರ ಆಡಳಿತ ಮಂಡಳಿ ವಿರುದ್ಧ ನಡೆದ ದೊಡ್ಡ ಪಿತೂರಿಯನ್ನು ಬಯಲು ಮಾಡಲು ನಾವು ಸಿಬಿಐ ತನಿಖೆಯನ್ನು ಒತ್ತಾಯಿಸುತ್ತೇವೆ. ಯಾತ್ರೆಗೆ ಚಾಲನೆ ನೀಡುವ ಸಮಯದಲ್ಲಿ ನಮ್ಮೊಂದಿಗೆ ಸಾವಿರಾರು ಕಾರ್ಯಕರ್ತರು ಸೇರಿಕೊಂಡರು’ ಎಂದು ಅವರು ಹೇಳಿದರು.

ಬಿಜೆಪಿಯ ಬೆಂಗಳೂರು ದಕ್ಷಿಣ ಜಿಲ್ಲಾ ಘಟಕದ ಉಪಾಧ್ಯಕ್ಷ ಉಮೇಶ್ ಶೆಟ್ಟಿ ಭಾಗವಹಿಸಿದ್ದರು.

ವಾಹನಗಳಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಧರ್ಮಸ್ಥಳವನ್ನು ತಲುಪಿದ ನಂತರ, ನಾಯಕರು ಒಂದು ಕಿಲೋಮೀಟರ್ ನಡೆದುಕೊಂಡು ಹೋಗಿ ಮಂಜುನಾಥ ಸ್ವಾಮಿ ದೇವಸ್ಥಾನಕ್ಕೆ ಪ್ರಾರ್ಥನೆ ಸಲ್ಲಿಸಲಿದ್ದಾರೆ ಮತ್ತು ಬಳಿಕ ದೇವಾಲಯದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ಅವರನ್ನು ಭೇಟಿ ಮಾಡಲಿದ್ದಾರೆ.

ಧರ್ಮಸ್ಥಳದಲ್ಲಿ ಲೈಂಗಿಕ ದೌರ್ಜನ್ಯದ ಗುರುತುಗಳನ್ನು ಹೊಂದಿರುವ ಮಹಿಳೆಯರ ಶವಗಳು ಸೇರಿದಂತೆ ಹಲವಾರು ಶವಗಳನ್ನು ಹೂಳಲಾಗಿದೆ ಎಂದು ದೂರುದಾರರು ಹೇಳಿದ ನಂತರ ವಿವಾದ ಭುಗಿಲೆದ್ದಿತು.

ಸಿದ್ದಗಂಗಾ ಶಾಲೆಯ ಪರಿಸರಸ್ನೇಹಿ ಪೇಪರ್ ಗಣಪತಿ

ದಾವಣಗೆರೆ: ನಗರದ ಸಿದ್ದಗಂಗಾ ಶಾಲೆಯ ವಿದ್ಯಾರ್ಥಿಗಳು ಪರಿಸರ ಸಂರಕ್ಷಣೆ ದೃಷ್ಟಿಯಿಂದ 12 ಅಡಿ ಎತ್ತರದ ಪರಿಸರ ಸ್ನೇಹಿ ಪೇಪರ್ ಗಣಪತಿ ಮೂರ್ತಿ ಯನ್ನು ತಯಾರಿ ಸುತ್ತಿದ್ದು, ಕಳೆದ ಹತ್ತು ವರ್ಷಗಳಿಂದಲೂ ಶಾಲೆಯಲ್ಲಿ ಪೇಪರ್ ಗಣೇಶ ಮೂರ್ತಿಯ ಪ್ರತಿಷ್ಠಾಪನೆ ನಡೆದುಕೊಂಡು ಬರುತ್ತಿದೆ.

ಇಂದಿನ ಪ್ಲಾಸ್ಟರ್ ಆಫ್ ಪ್ಯಾರಿಸ್ ಹಾಗೂ ರಾಸಾಯನಿಕ ಬಣ್ಣಗಳಿಂದ ತಯಾರಾಗುವ ಗಣೇಶ ಮೂರ್ತಿಗಳ ಪರಿಣಾಮವಾಗಿ ಪರಿಸರ ಮಾಲಿನ್ಯ ಸೇರಿದಂತೆ ಗಂಭೀರ ಸಮಸ್ಯೆಯಾಗುತ್ತಿದ್ದು, ಇದಕ್ಕೆ ವ್ಯತಿರಿಕ್ತ ಎನ್ನುವಂತೆ ಸಿದ್ದಗಂಗಾ ಶಾಲೆಯ ವಿದ್ಯಾರ್ಥಿಗಳು ಪರಿಸರ ಸ್ನೇಹಿ ಗಣಪನನ್ನು ಕಳೆದ ಹತ್ತು ವರ್ಷಗಳಿಂದ ತಯಾರಿಸುತ್ತಿದ್ದಾರೆ. ಗಣಪತಿ ಮೂರ್ತಿಯು 30 ಕೆ.ಜಿ. ಹಳೆಯ ನ್ಯೂಸ್ ಪೇಪರ್, 10 ಕೆ.ಜಿ. ಮೈದಾ ಅಂಟನ್ನು ಬಳಸಿ, ಹಾಗೂ ಬಿದಿರಿನಿಂದ ನಿರ್ಮಿಸಲಾಗಿದೆ. ವಿದ್ಯಾರ್ಥಿಗಳು ಹತ್ತು ದಿನಗಳ ಕಾಲ ಅಹರ್ನಿಶಿ ಶ್ರಮಿಸಿದ್ದಾರೆ. ಹಂತ ಹಂತವಾಗಿ ಕಾಗದಗಳನ್ನು ಅಂಟಿಸಿ, ಆಕರ್ಷಕವಾಗಿ ಆಕಾರ ನೀಡಿದ ನಂತರ ಮೂರ್ತಿಗೆ ನೈಸರ್ಗಿಕ ಬಣ್ಣಗಳಿಂದ ಅಲಂಕಾರ ಮಾಡಲಾಗಿದೆ. ಯಾವುದೇ ರಾಸಾಯನಿಕ ಬಣ್ಣಗಳನ್ನು ಬಳಸದೆ, ಪ್ರಕೃತಿಗೆ ಹಾನಿಯಾಗದಂತೆ ತಯಾರಿಸಿರುವುದು ಈ ಮೂರ್ತಿಯ ಪ್ರಮುಖ ವಿಶೇಷತೆ. ಸಾಂಪ್ರದಾಯಿಕ ವೇಷಭೂಷಣಗಳಲ್ಲಿ ನಂದಿಕೋಲು, ಕುದುರೆ ಮುಂತಾದ ಜನಪದ ಕಲೆಗಳನ್ನು ಪ್ರದರ್ಶಿಸಲಿದ್ದಾರೆ. ಶಾಲೆಯ ಕಾರ್ಯದರ್ಶಿ ಡಾ. ಜಯಂತ್ ಅವರ ಕಲ್ಪನೆ, ಶಾಲೆಯ ಡ್ರಾಯಿಂಗ್ ಶಿಕ್ಷಕರ ಸಹಕಾರ ಹಾಗೂ ಡಾ. ಜಸ್ಟಿನ್ ಡಿಸೌಜ ಅವರ ಮಾರ್ಗದರ್ಶನ, ಇದು ಕಳೆದ ಹತ್ತು ವರ್ಷಗಳಿಂದ ನಡೆದುಕೊಂಡು ಬರುತ್ತಿದ್ದು ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದೆ.

ಆನ್‌ಲೈನ್ ಗೇಮಿಂಗ್ ಬ್ಯಾನ್; ಎಪಿಜಿಪಿ ಸ್ವಾಗತ

ದಾವಣಗೆರೆ: ಆನ್ಲೈನ್ ಗೇಮಿಂಗ್ ನಿಷೇಧಿಸಿರುವ ಕೇಂದ್ರಸರ್ಕಾರದ ನಿರ್ಧಾರವನ್ನು ಅಖಿಲ ಭಾರತೀಯ ಗ್ರಾಹಕ ಪಂಚಾಯತ್ (ಎಪಿಜಿಪಿ) ಸ್ವಾಗತಿಸಿದೆ.

ಆನ್ಲೈನ್ ಗೇಮ್ಸ್‌ಗಳಿಂದ ಬಹಳಷ್ಟು ಕುಟುಂಬಗಳು ನಾಶವಾಗಿವೆ. ವಿದ್ಯಾರ್ಥಿಗಳು ಆನ್ಲೈನ್ ಗೀಳಿಗೆ ಬಿದ್ದು ಆರ್ಥಿಕವಾಗಿ ಮಾತ್ರವಲ್ಲ ವಿದ್ಯಾಭ್ಯಾಸದಲ್ಲಿ ಕೂಡ ತೀವ್ರ ಹಾನಿಗೊಳಗಾಗಿದ್ದಾರೆ. ಈ ದಿಶೆಯಲ್ಲಿ ಆ ಕಳೆದ ನಾಲ್ಕು ವರ್ಷಗಳಿಂದ ಸತತವಾಗಿ ಎಪಿಜಿಪಿ ಕೇಂದ್ರ ಸರ್ಕಾರ–ಕ್ಕೆ ಆನ್ಲೈನ್ ಗೇಮ್ಸ್ ನಿಷೇಧಿಸುವಂತೆ ಮನವಿ ಸಲ್ಲಿಸುತ್ತಾ ಬಂದಿತ್ತು ಎಂದು ಜಿಲ್ಲಾ ಕಾನೂನು ಸಲಹೆಗಾರರಾದ ಹಂಪಾಲಿ ನಾಗಮಣಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ರೀತಿಯ ಅವಶ್ಯಕ ನಿರ್ಧಾರಗಳಿಂದ ಸಮಾಜದಲ್ಲಿ ಬದಲಾವಣೆಗಳನ್ನು ತರಲು ಸಾಧ್ಯ. ಇದು ನಿರಂತರವಾಗಿ ಸಾಗಲು ಸಮಾಜದ ಜನತೆಯೂ ಗ್ರಾಹಕ ಪಂಚಾಯತಿಯೊಂದಿಗೆ ಕೈ ಜೋಡಿಸಿಕೊಳ್ಳುವುದು ಅವಶ್ಯಕ. ಆದ್ದರಿಂದ ಜನರು ಗ್ರಾಹಕ ಪಂಚಾಯತ್‌ನ ಸದಸ್ಯರಾಗಿ ಸಮಾಜದಲ್ಲಿ ಸೂಕ್ತ ಗ್ರಾಹಕ ಹಿತ ನಿರ್ಣಯಗಳಲ್ಲಿ ಸಹಭಾಗಿಗಳಾಗುವಂತೆ ಅವರು ಕೋರಿದ್ದಾರೆ.

ರಾಜ್ಯ ಸಂಘಟನಾಧ್ಯಕ್ಷರಾಗಿ ಡಾ.ಬಿ.ವಾಸುದೇವ ಆಯ್ಕೆ

ದಾವಣಗೆರೆ: ಕರ್ನಾಟಕ ರಾಜ್ಯ ವೃತ್ತಿ ನಿರತ ಪತ್ರಕರ್ತರ ಸಂಘದ ರಾಜ್ಯ ಸಂಘಟನಾಧ್ಯಕ್ಷರಾಗಿ ವಿಸ್ಮಯವಾಣಿ ದಿನ ಪತ್ರಿಕೆ ಸಂಪಾದಕ ಡಾ.ಬಿ. ವಾಸುದೇವ ಅವರು ಆಯ್ಕೆಯಾಗಿದ್ದಾರೆ.

ಕರ್ನಾಟಕ ರಾಜ್ಯ ವೃತ್ತಿ ನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಪ್ರಸಾದ ಜಿ (ಸೂರ್ಯಾಗ್ನಿ ಶಿವು) ಇವರು ವಿಸ್ಮಯವಾಣಿ ದಿನ ಪತ್ರಿಕೆ ಸಂಪಾದಕ ಡಾ.ಬಿ.ವಾಸುದೇವ ಇವರನ್ನು ಕರ್ನಾಟಕ ರಾಜ್ಯ ವೃತ್ತಿ ನಿರತ ಪತ್ರಕರ್ತರ ಸಂಘದ ರಾಜ್ಯ ಸಂಘಟನಾಧ್ಯಕ್ಷರಾಗಿ ನೇಮಕ ಮಾಡಿದ್ದಾರೆ. ರಾಜ್ಯ ವ್ಯಾಪಿ ಕರ್ನಾಟಕ ರಾಜ್ಯ ವೃತ್ತಿ ನಿರತ ಪತ್ರಕರ್ತರ ಸಂಘದ ಬೆಳವಣಿಗೆಗೆ ಸಹಕಾರಿಯಾಗುವಂತ ಕಾರ್ಯ ಚಟುವಟಿಕೆಗಳಲ್ಲಿ ಭಾಗವಹಿಸುವ ಮೂಲಕ ಸಂಘವನ್ನು ಸಂಘಟಿಸುವಂತೆ ಪತ್ರಿಕಾ ಪ್ರಕಟಣೆಯಲ್ಲಿ ಸಂಘದ ರಾಜ್ಯ ಅಧ್ಯಕ್ಷ ರಾಜ್ಯಾಧ್ಯಕ್ಷ ಶಿವಪ್ರಸಾದ ಜಿ (ಸೂರ್ಯಾಗ್ನಿ ಶಿವು) ಇವರು ತಿಳಿಸಿದ್ದಾರೆ.

ಕೃತಿ ಲೋಕಾರ್ಪಣೆ

ದಾವಣಗೆರೆ: ಅಕ್ಕಮಹಾದೇವಿ ಸಮಾಜ ಹಾಗೂ ಮಹಿಳಾ ಸೇವಾ ಸಮಾಜ ಇವರ ಸಂಯುಕ್ತಾಶ್ರಯದಲ್ಲಿ ಶ್ರೀ ಅಕ್ಕಮಹಾದೇವಿ ಸಮಾಜದ ಮಾಜಿ ಅಧ್ಯಕ್ಷರಾದ ಲಿಂ. ಎಂ.ಸಿ. ಗಿರಿಜಮ್ಮನವರ ಪುತ್ರಿ ರೇಣುಕಾ ಶಿವಾನಂದಪ್ಪ ಅವರು ರಚಿಸಿರುವ ‘ನನ್ನಮ್ಮ ಗಿರಿಜಮ್ಮ’ ಕೃತಿಯ ಲೋಕಾರ್ಪಣೆ ಕಾರ್ಯಕ್ರಮವು ಆ.28ರಂದು ಮಧ್ಯಾಹ್ನ 12:30ಕ್ಕೆ ಇಲ್ಲಿನ ಮೋತಿ ಚನ್ನಬಸಮ್ಮ ವೀರಪ್ಪ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ.

ಹೊನ್ನಾಳಿಯಲ್ಲಿ ಅನಧಿಕೃತ ಶೆಡ್‌ಗಳ ತೆರವು

ಹೊನ್ನಾಳಿ : ಹೊನ್ನಾಳಿ ಪಟ್ಟಣದ ಖಾಸಗಿ ಬಸ್ ನಿಲ್ದಾಣದಲ್ಲಿ ಪುರಸಭೆಯ ಮಳಿಗೆಗಳ ಮುಂಭಾಗ ಅನಧಿಕೃತವಾಗಿ ಚಾಚು ಕೊಂಡಿ–ದ್ದ ತಗಡಿನ ಶೆಡ್‌ಗಳನ್ನು ಪೊಲೀಸ್ ರಕ್ಷಣೆಯಲ್ಲಿ ಸೋಮವಾರ ಬೆಳಗ್ಗೆ ತೆರವು ಕಾರ್ಯ ಮಾಡಲಾಯಿತು ಎಂದು ಪುರಸಭೆ ಮುಖ್ಯಾಧಿಕಾರಿ ಲೀಲಾವತಿ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ಕಳೆದ ಎರಡು ತಿಂಗಳಿನಿಂದ ನಮ್ಮ ಪುರಸಭೆಗೆ ಸೇರಿದ್ದ ಮಳಿಗೆಯ ಬಾಡಿಗೆದಾರರಿಗೆ ಮುಂದೆ ಚಾಚಿರುವ ತಗಡಿನ ಶೆಡ್‌ಗಳನ್ನು ತೆಗೆಯಿರಿ ಎಂದು ಹೇಳುತ್ತಿದ್ದರೂ ಯಾರೂ ಸಹ ತೆರವು ಮಾಡಿರಲಿಲ್ಲ, ಹಾಗಾಗಿ ನಾವು ಪೊಲೀಸರ ರಕ್ಷಣೆ ಪಡೆದು ಪುರಸಭೆಗೆ 8 ಮಳಿಗೆ ಮುಂಭಾಗ ಚಾಚಿದ್ದ ತಗಡಿನ ಶೆಡ್‌ಗನ್ನು ತೆರವುಗೊಳಿಸಿದ್ದೇವೆ ಎಂದು ವಿವರಿಸಿದರು.

ಖಾಸಗಿ ಬಸ್ ನಿಲ್ದಾಣದಲ್ಲಿ ಪ್ರತಿನಿತ್ಯ ನೂರರು ಪ್ರಯಾಣಿಕರು ಬಸ್ಸಿಗಾಗಿ ಕಾಯ್ದು ನಂತರ ಬಸ್ ಹತ್ತುತ್ತಿದ್ದರು, ಆದರೆ ಅಲ್ಲಿ ಅನಧಿಕೃತವಾಗಿ ಮುಂದಕ್ಕೆ ಚಾಚಿದ್ದರಿಂದ ಅಲ್ಲಿ ಪ್ರಯಾಣಿಕರು ನಿಲ್ಲಲು ಸ್ಥಳ ಇಲ್ಲದಂತಾಗಿತ್ತು, ಅಲ್ಲದೆ ಹಲವು ಬಾರಿ ಮಳಿಗೆ ವ್ಯಾಪ್ತಿ ಬಿಟ್ಟು ಮುಂದಕ್ಕೆ ಚಾಚಬೇಡಿ ಎಂದು ಹೇಳಿದ್ದರೂ ಕೆಲವು ನಮ್ಮ ಮಾತಿಗೆ ಸೊಪ್ಪು ಹಾಕಿರಲಿಲ್ಲ, ಸಾರ್ವಜನಿಕರಿಂದ ದೂರು ಹೆಚ್ಚಾಯಿತು. ಸಾರ್ವಜನಿಕರ ಹಿತದೃಷ್ಟಿಯಿಂದ ಅನಧಿಕೃತವಾಗಿ ಚಾಚಿದ್ದ ಶೆಡ್‌ಗಳನ್ನಷ್ಟೇ ತೆರವುಗೊಳಿಸಿದ್ದೇವೆ ಎಂದು ಹೇಳಿದರು.

ಖಾಸಗಿ ಬಸ್ ನಿಲ್ದಾಣದಲ್ಲಿ ದ್ವಿಚಕ್ರವಾಹನಗಳನ್ನು ಎಲ್ಲೆಂದರಲ್ಲಿ ನಿಲ್ಲಿದದರೆ ಅಂತಹ ದ್ವಿಚಕ್ರವಾಹನಗಳಿಗೆ ದಂಡ ವಿಧಿಸಲಾಗುವುದು ಈಗಲಾದರು ದ್ವಿಚಕ್ರ ವಾಹನ ಸವಾರರು ಸುರಕ್ಷಿತ ಸ್ಥಳಗಳಲ್ಲಿ ಮಾತ್ರ ತಮ್ಮ ದ್ವಿಚಕ್ರ ವಾಹನಗಳನ್ನು ನಿಲ್ಲಿಸಬೇಕು ಎಂದು ಸಾರ್ವಜನಿಕರಲ್ಲಿ ಅವರು ಮನವಿ ಮಾಡಿದರು.

ಪಟ್ಟಣದ ಸಂತೆ ಮೈದಾನದಲ್ಲಿಯೂ ಸಹ ರಸ್ತೆ ಪಕ್ಕದಲ್ಲಿ ತರಕಾರಿ ಹಾಗೂ ಸೊಪ್ಪು ವ್ಯಾಪಾರ ಮಾಡುತ್ತಿದ್ದವರೂ ಮೈದಾನದಲ್ಲಿ ಮಾತ್ರ ವ್ಯಾಪಾರ ಮಾಡಬೇಕು,

ಮಂಗಳವಾರದಿಂದ ಮತ್ತೆ ರಸ್ತೆ ಪಕ್ಕದಲ್ಲಿ ವ್ಯಾಪಾರ ಮಾಡುತ್ತ ಪಾದಚಾರಿಗಳಿಗೆ ತೊಂದ–ರೆ ಮಾಡಿದರೆ ಕಾನೂನಿನ ಪ್ರಕಾರ ನಾವು ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ಅವರಿಗೂ ತಿಳಿಸಿದ್ದೇವೆ ಎಂದು ಹೇಳಿದರು.

ಇನ್ನೂ ಮುಂದೆ ರಸ್ತೆ ಇಕ್ಕೆಲಗಳಲ್ಲಿ ಅಥವಾ ಖಾಸಗಿ ಬಸ್ ನಿಲ್ದಾಣದಲ್ಲಿ ಅನಧಿಕೃತವಾಗಿ ತಮ್ಮ ಮಳಿಗೆಯಿಂದ ಮುಂದಕ್ಕೆ ಚಾಚಿ ಶೆಡ್ ನಿರ್ಮಾಣ ಮಾಡಿದರೆ ಅಂತಹವರ ವಿರುದ್ಧ ನಿರ್ಧಾಕ್ಷಿಣವಾಗಿ ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ತಿಳಿಸಿದರು.

ಪೊಲೀಸ್ ಇನ್ಸ್‌ಪೆಕ್ಟರ್ ಸುನಿಲ್‌ಕುಮಾರ್ ಮಾತನಾಡಿ, ಸಾರ್ವಜನಿಕರು ರಸ್ತೆ ಇಕ್ಕೆಲಗಳಲ್ಲಿ ತಮ್ಮ ವಾಹನಗಳನ್ನು ಅಡ್ಡಾದಿಡ್ಡಿಯಾಗಿ ನಿಲ್ಲಿಸಬೇಡಿ, ಇದರಿಂದ ಸಂಚಾರಿ ವ್ಯವಸ್ಥೆಗೆ ದಕ್ಕೆ ಯಾಗುತ್ತದೆ, ಇನ್ನು ಮುಂದೆ ತಮ್ಮ ವಾಹನಗಳನ್ನು ಮನಸ್ಸಿಗೆ ಬಂದ ರೀತಿಯಲ್ಲಿ ನಿಲ್ಲಿಸಿದರೆ ನಮ್ಮ ಸಿಬ್ಬಂಧಿಗಳು ದಂಡ ವಿಧಿಸುತ್ತಾರೆ, ಅದಕ್ಕೆ ಯಾರೂ ಅವಕಾಶ ಮಾಡಿಕೊಡಬೇಡಿ, ಈಗಾಗಲೆ ನಿರ್ಧರಿಸಿರುವ ರಸ್ತೆಯ ಮಗ್ಗುಲಲ್ಲಿ ನಿಲ್ಲಿಸಿ ಎಂದರು.

ಪೊಲಿಸ್ ಬಂದೋಬಸ್ತ್ ; ಅನಧಿಕೃತ ಶೆಡ್‌ಗಳ ತೆರವು ವೇಳೆ ಪೊಲಿಸ್ ಇನ್ಸ್‌ಪೆಕ್ಟರ್ ಸುನಿಲ್‌ಕುಮಾರ್ ನೇತೃತ್ವದಲ್ಲಿ ಬಿಗಿ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿತ್ತು.

ಪಿಎಸ್ಸೈ ನಿರ್ಮಲ, ಎಎಸ್ಸೈಗಳಾದ ಅಶೋಕರೆಡ್ಡಿ, ತೀರ್ಥಲಿಂಗಪ್ಪ, ಪುರಸಭೆ ಹಿರಿಯ ನಿರೀಕ್ಷಕ ಪರಮೇಶ್‌ನಯ್ಕ್, ರಾಮಚಂದ್ರ ಹಾಗೂ ವೆಂಕಟೇಶ್, ಹಿರಿಯ ಪೌರ ಕಾರ್ಮಿಕ ರಾಜಪ್ಪ, ಇದ್ದರು.

ಮೈಸೂರು: ಲಾಡ್ಜ್‌ನಲ್ಲಿ ಗೃಹಿಣಿ ಬರ್ಬರ ಹತ್ಯೆ; ಬಾಯಿಗೆ ‘ಜಿಲೆಟಿನ್ ಕಡ್ಡಿ’ ಇಟ್ಟು ಸ್ಫೋಟಿಸಿದ್ದಾ ಪ್ರಿಯಕರ!

ಮೈಸೂರು: ಮೈಸೂರಿನ ಸಾಲಿಗ್ರಾಮನ ಭೇರ್ಯ ಗ್ರಾಮದ ಲಾಡ್ಜ್‌ವೊಂದರಲ್ಲಿ 20 ವರ್ಷದ ವಿವಾಹಿತ ಮಹಿಳೆ ಬರ್ಬರವಾಗಿ ಹತ್ಯೆಯಾಗಿದ್ದು ಪ್ರಿಯಕರನೇ ಈ ದುಷ್ಕೃತ್ಯ ಎಸಗಿದ್ದಾನೆ. ಮೃತ ಮಹಿಳೆಯನ್ನು ಗೆರಸನಹಳ್ಳಿ ಗ್ರಾಮದ ರಕ್ಷಿತಾ ಎಂದು ಗುರುತಿಸಲಾಗಿದೆ. ಪ್ರಿಯಕರ ಸಿದ್ದರಾಜು ಎಂಬಾತ ರಕ್ಷಿತಾ ಬಾಯಿಗೆ ಜಿಲೆಟಿನ್ ಕಡ್ಡಿ ಇಟ್ಟು ಸ್ಫೋಟಿಸಿ ಕೊಂದಿರುವುದಾಗಿ ತಿಳಿದುಬಂದಿದೆ. ಪ್ರಕರಣ ಸಂಬಂಧ ಸಾಲಿಗ್ರಾಮದ ಪೊಲೀಸರು ಸಿದ್ದರಾಜುನನ್ನು ಬಂಧಿಸಿದ್ದಾರೆ.

ಕೇರಳ ಮೂಲದ ಯುವಕನನ್ನು ರಕ್ಷಿತಾ ಮದುವೆಯಾಗಿದ್ದರೂ ಸಿದ್ದರಾಜು ಜೊತೆ ಅನೈತಿಕ ಸಂಬಂಧ ಹೊಂದಿದ್ದರು ಎನ್ನಲಾಗಿದೆ. ಕಪ್ಪಡಿ ಕ್ಷೇತ್ರಕ್ಕೆ ಹೋಗೋಣ ಅಂತ ಸಿದ್ದರಾಜು ರಕ್ಷಿತಾಳನ್ನು ಕರೆಸಿಕೊಂಡಿದ್ದಾನೆ. ನಂತರ ಲಾಡ್ಜ್‌ಗೆ ಕ–ರೆದುಕೊಂಡು ಹೋಗಿ ಸಿದ್ದರಾಜು ಬಾಯಿಗೆ ಜಿಲೆಟಿನ್ ಕಡ್ಡಿ ಇಟ್ಟು ಸ್ಫೋಟಿಸಿ ಕೊಲೆ ಮಾಡಿ ನಂತರ ಸಿದ್ದರಾಜು ಮೊದಲು ಮೊಬೈಲ್ ಬ್ಲಾಸ್ಟ್ ಕಥೆ ಕಟ್ಟಿದ್ದನು. ಆದರೆ ತನಿಖೆಯ ನಂತರ ಅಸಲಿ ಸಂಗತಿ ಬಯಲಿಗೆ ಬಂದಿದೆ.

ಕ್ಷೇತ್ರ ಧರ್ಮಸ್ಥಳ ಹೆಸರಿಗೆ ಅಪಪ್ರಚಾರ ಖಂಡಿಸಿ ಬಿಜೆಪಿಯಿಂದ ಪ್ರತಿಭಟನೆ

ಜಗಳೂರು : ಶ್ರೀ ಕ್ಷೇತ್ರ ಧರ್ಮಸ್ಥಳದ ಹೆಸರಿಗೆ ಅಪಪ್ರಚಾರ ಮಾಡುತ್ತಿರುವುದನ್ನು ಖಂಡಿಸಿ ಪ್ರವಾಸಿ ಮಂದಿರದಿಂದ ಹಳೆ ಗಾಂಧಿ ವೃತ್ತ , ಹೊಸ ಬಸ್ ನಿಲ್ದಾಣದ ಅಂಬೇಡ್ಕರ್ ವೃತ್ತದ ಮೂಲಕ ತಾಲೂಕು ಕಚೇರಿಗೆ ಆಗಮಿಸಿ ಭಾರತೀಯ ಜನತಾ ಪಾರ್ಟಿಯ ಜಗಳೂರು ಮಂಡಲದ ವತಿಯಿಂದ ಪ್ರತಿಭಟನೆ ನಡೆಸಿ ಸೋಮವಾರ ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಿದರು.

ಮಾಜಿ ಶಾಸಕ ಎಚ್. ಪಿ . ರಾಜೇಶ್ ಮಾತನಾಡಿ ಹಿಂದುಗಳಿಗೆ ಪ್ರಮುಖ ಹಾಗೂ ಪವಿತ್ರ ಶ್ರದ್ಧಾ ಕೇಂದ್ರ ಶ್ರೀ ಕ್ಷೇತ್ರ ಧರ್ಮಸ್ಥಳಕ್ಕೆ ಅವಲ ಕರ್ನಾಟಕವಲ್ಲದೆ ದೇಶದ ಅತ್ಯಂತ ಕೋಟ್ಯಾಂತರ ಸಮೂಹ ಹೊಂದಿದೆ. ಪ್ರತಿನಿತ್ಯ ಲಕ್ಷಾಂತರ ಭಕ್ತರು ಆಗಮಿಸುತ್ತಿದ್ದು ಸಾವಿರಾರು ಜನಗಳಿಗೆ ನಿರಂತರ ಅನ್ನದಾಸೋಹ ನಡೆಯುತ್ತಿದೆ. ಹಿಂದುಗಳ ಧಾರ್ಮಿಕ ಭಾವನೆಗೆ ಧಕ್ಕೆತರುವ ಹುನ್ನಾರದಿಂದ ಕೆಲ ಕಿಡಿಗೇಡಿಗಳು, ಹಾಗೂ ಎಡಚರರು ಸುಳ್ಳು ಅಪಪ್ರಚಾರವನ್ನು ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಅನಾಮಿಕ ವ್ಯಕ್ತಿ ಹಬ್ಬ ಯಾವುದೇ ಆಧಾರಗಳಿಲ್ಲದೆ ಮಾಡಿದ ಆರೋಪಕ್ಕೆ ರಾಜ್ಯ ಸರ್ಕಾರ ಲಕ್ಷಾಂತರ ರೂಪಾಯಿ ಹಣವನ್ನು ವೆಚ್ಚ ಮಾಡಿ ಸಾರ್ವಜನಿಕ ತೆರಿಗೆ ಹಣವನ್ನು ಎಸ್‌ಐಟಿ ನೆಪದಲ್ಲಿ ವ್ಯಯಮಾಡುತ್ತಿದೆ. ಧರ್ಮಸ್ಥಳ ಟ್ರಸ್ಟ್‌ನಡಿ 6ಲಕ್ಷಕ್ಕೂ ಅಧಿಕ ಸ್ವಸಹಾಯ ಸಂಘಗಳು ಸಾಲಪಡೆದು ಮಹಿಳೆಯರು

ಇಂದಿನ ರಾಶಿ ಭವಿಷ್ಯ

ಮೇಷ ರಾಶಿ

ನಿಮ್ಮ ಭರವಸೆ ಒಂದು ಸಮೃದ್ಧ, ಸೂಕ್ಷ್ಮ ಪರಿಮಳಯುಕ್ತ ಮತ್ತು ಬೆರಗುಗೊಳಿಸುವ ಹೂವಿನ ಹಾಗೆ ಅರಳುತ್ತದೆ. ನಿಮ್ಮ ಹಣವನ್ನು ಸಂಗ್ರಹಿಸಿದಾಗ ಮಾತ್ರ ಹಣ ನಿಮ್ಮ ಕೆಲಸಕ್ಕೆ ಬರುತ್ತದೆ. ಇದನ್ನು ನೀವು ಚೆನ್ನಾಗಿ ಅರ್ಥಮಾಡಿಕೊಳ್ಳಿ ಇಲ್ಲದಿದ್ದರೆ ನೀವು ಮುಂಬರುವ ಸಮಯದಲ್ಲಿ ವಿಷಾದಿಸಬೇಕಾಗುತ್ತದೆ. ನಿಮ್ಮ ಮನೆಯ ಪರಿಸ್ಥಿತಿ ಸ್ವಲ್ಪ ಅನಿರೀಕ್ಷಿತವಾಗಿರುತ್ತದೆ.

ವೃಷಭ ರಾಶಿ

ನಿಮ್ಮ ಮಗುವಿನಂಥ ಸ್ವಭಾವ ಕಾಣಿಸಿಕೊಳ್ಳುತ್ತದೆ ಮತ್ತು ನೀವು ಒಂದು ಆಹ್ಲಾದಕಾರಿ ಮನಸ್ಥಿತಿಯಲ್ಲಿರುತ್ತೀರಿ. ಯಾವುದೇ ಅಪರಿಚಿತ ವ್ಯಕ್ತಿಯ ಸಲಹೆಯಿಂದ ಎಲ್ಲಾದರೂ ಹೂಡಿಕೆ ಮಾಡಿರುವ ಜನರಿಗೆ, ಇಂದು ಆ ಹೂಡಿಕೆಯಿಂದ ಪ್ರಯೋಜನವನ್ನು ಪಡೆಯುವ ಪೂರ್ತಿಸಾಧ್ಯತೆ ಇದೆ. ನಿಮ್ಮ ಮಕ್ಕಳ ಚಿಂತೆಗಳನ್ನು ಬೆಂಬಲಿಸುವುದು ಅಗತ್ಯ. ಪ್ರೇಮ ವೈಫಲ್ಯದ ನೋವಿಗೆ ಇವತ್ತು ನಿದ್ರಿಸಲು ಸಾಧ್ಯವಾಗುವುದಿಲ್ಲ.

ಮಿಥುನ ರಾಶಿ

ನಿಮ್ಮ ಹಠಾತ್ ಮತ್ತು ಹಠಮಾರಿ ಪ್ರವೃತ್ತಿಯನ್ನು ವಿಶೇಷವಾಗಿ ಪಾರ್ಟಿಗಳಲ್ಲಿ ನಿಯಂತ್ರಿಸಲು ಪ್ರಯತ್ನಿಸಿ ಏಕೆಂದರೆ ಇದು ಪಕ್ಷದ ಮೂಡ್ ಹಾಳು ಮಾಡಬಹುದು. ನೀವು ನಿಮ್ಮನ್ನು ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು–ಇದು ನಿಮಗೆ ಆರ್ಥಿಕ ಲಾಭವನ್ನೂ ತರುತ್ತದೆ. ಸ್ನೇಹಿತರು ಇಂದು ರಾತ್ರಿ ರೋಮಾಂಚಕವಾದದ್ದನ್ನೇನಾದರೂ ಯೋಜಿಸಿ ನಿಮಗೆ ಆನಂದ ತರುತ್ತಾರೆ. ಪ್ರಣಯ ಸಂಬಂಧದಲ್ಲಿ ನಿಮ್ಮನ್ನು ತಪ್ಪಾಗಿ ತಿಳಿದುಕೊಳ್ಳುವ ಸಾಧ್ಯತೆಯಿದೆ.

ಕರ್ಕ ರಾಶಿ

ಇಂದು ಧಾರ್ಮಿಕ ಮತ್ತು ಆಧ್ಯಾತ್ಮಿಕ ಆಸಕ್ತಿಗಳನ್ನು ಅನುಸರಿಸಲೂ ಒಂದು ಒಳ್ಳೆಯ ದಿನ. ಜೀವನದ ವಾಹನವನ್ನು ಚೆನ್ನಾಗಿ ಚಲಾಯಿಸಲು ಬಯಸುತ್ತಿದ್ದರೆ, ಇಂದು ನೀವು ಹಣದ ಬಗ್ಗೆ ವಿಶೇಷ ಗಮನ ಹರಿಸಬೇಕು. ಸಣ್ಣ ಮಕ್ಕಳು ನಿಮ್ಮನ್ನು ವ್ಯಸ್ತವಾಗಿರಿಸುತ್ತಾರೆ ಮತ್ತು ನಿಮಗೆ ಸಂತೋಷ ತರುತ್ತಾರೆ. ನೀವು ಯಾವಾಗಲೂ ಪರಸ್ಪರ ಪ್ರೀತಿಯಲ್ಲಿದ್ದೀರೆಂದು ಅನಿಸುವುದರಿಂದ ಭೌತಿಕ ಅಸ್ತಿತ್ವಕ್ಕೆ ಯಾವುದೇ ಮಹತ್ವವಿರುವುದಿಲ್ಲ.

ಸಿಂಹ ರಾಶಿ

ಸ್ವಲ್ಪ ವ್ಯಾಯಾಮದೊಂದಿಗೆ ನಿಮ್ಮ ದಿನವನ್ನು ಪ್ರಾರಂಭಿಸಿ ನಿಮ್ಮ ಬಗ್ಗೆ ನೀವೇ ಒಳ್ಳೆಯ ಅಭಿಪ್ರಾಯ ಇಟ್ಟುಕೊಳ್ಳುವುದು ಮುಖ್ಯ ಇದನ್ನು ದಿನವೂ ಮಾಡುವುದನ್ನು ರೂಢಿ ಮಾಡಿಕೊಳ್ಳಿ ಹಾಗೂ ಅದನ್ನು ಕಟ್ಟುನಿಟ್ಟಾಗಿ ಅನುಸರಿಸಿ. ಇಂವು ನಿಮಗೆ ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ ನಿಮ್ಮ ಕುಟುಂಬದ ಸದಸ್ಯರ ಅಗತ್ಯಗಳ ಮೇಲೆ ಗಮನ ಹರಿಸುವುದು ಇಂದು ನಿಮ್ಮ ಆದ್ಯತೆಯಾಗಿರಬೇಕು.

ಕನ್ಯಾ ರಾಶಿ

ನಿಮ್ಮ ಹಠಾತ್ ಮತ್ತು ಹಠಮಾರಿ ಪ್ರವೃತ್ತಿಯನ್ನು ವಿಶೇಷವಾಗಿ ಪಾರ್ಟಿಗಳಲ್ಲಿ ನಿಯಂತ್ರಿಸಲು ಪ್ರಯತ್ನಿಸಿ ಏಕೆಂದರೆ ಇದು ಪಕ್ಷದ ಮೂಡ್ ಹಾಳು ಮಾಡಬಹುದು. ನೀವು ಉಳಿಸಿರುವ ಹಣ ಇಂದು ನಿಮ್ಮ ಕೆಲಸಕ್ಕೆ ಬರಬಹುದು. ಇದರೊಂದಿಗೆ ಇದರ ಹೋಗುವ ದುಃಖವು ನಿಮಗೆ ಆಗುತ್ತದೆ. ಒಂದು ಅಂಚೆಯ ಮೂಲಕ ಬಂದ ಪತ್ರ ಇಡೀ ಕುಟುಂಬಕ್ಕೆ ಸಂತೀಓಷದ ಸುದ್ದಿ ತರುತ್ತದೆ. ಇಂದು ನಿಮ್ಮ ಪ್ರೇಮಿಯನ್ನು ನಿರಾಸೆಗೊಳಿಸಬೇಡಿ ಇದು ನಂತರ ನಿಮ್ಮನ್ನು ಪಶ್ಚಾತ್ತಾಪಗೊಳ್ಳುವಂತೆ ಮಾಡುತ್ತದೆ.

ತುಲಾ ರಾಶಿ

ಏನಾದರೂ ಆಸಕ್ತಿದಾಯಕವಾದದ್ದನ್ನು ಓದುವ ಮೂಲಕ ಮಾನಸಿಕ ವ್ಯಾಯಾಮ ಮಾಡಿ. ಹಣಕಾಸಿನಲ್ಲಿ ಸುಧಾರಣೆ ದೀರ್ಘಕಾಲದಿಂದ ಬಾಕಿಯಿರುವ ನಿಮ್ಮ ಬಾಕಿಗಳು ಮತ್ತು ಬಿಲ್ಲುಗಳನ್ನು ಪಾವತಿಸುವುದನ್ನು ಅನುಕೂಲಕರವಾಗಿಸುತ್ತದೆ. ನಿಮ್ಮ ಜ್ಞಾನ ಮತ್ತು ಒಳ್ಳೆಯ ಹಾಸ್ಯ ನಿಮ್ಮ ಬಳಿಯಿರುವ ಜನರನ್ನು ಆಕರ್ಷಿಸಬಹುದು. ಪ್ರೀತಿಪಾತ್ರರೊಡನೆ ಸಹಿತಿಂಡಿ ಮತ್ತು ಮಿಠಾಯಿ ಹಂಚಿಕೊಳ್ಳುವ ಸಾಧ್ಯತೆಯಿದೆ. ಸಹೋದ್ಯೋಗಿಗಳು ಮತ್ತು ಹಿರಿಯರ ಸಂಪೂರ್ಣ ಸಹಕಾರದಿಂದ ಕಛೇರಿಯಲ್ಲಿ ಕೆಲಸ ಬೇಗ ಮುಗಿಯುತ್ತದೆ.

ವೃಶ್ಚಿಕ ರಾಶಿ

ತುಂಬಾ ಚಿಂತೆ ಮಾನಸಿಕ ಶಾಂತಿಗೆ ಭಂಗ ತರಬಹುದು. ಆತಂಕ, ಉದ್ವೇಗದ ಪ್ರತೀ ತುಣುಕೂ ದೇಹದ ಮೇಲೆ ಪ್ರತಿಕೂಲ ಪರಿಣಾಮ ಬೀರುವುದರಿಂದ ಇದನ್ನು ತಡೆಯಿರಿ. ಈ ರಾಶಿಚಕ್ರದ ದೊಡ್ಡ ಉದ್ಯಮಿಗಳು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹಣದ ಹೂಡಿಕೆ ಮಾಡುವ ಅಗತ್ಯವಿದೆ. ಅನಿರೀಕ್ಷಿತ ಜವಾಬ್ದಾರಿಗಳು ನಿಮ್ಮ ದಿನದ ಯೋಜನೆಗಳಿಗೆ ಅಡ್ಡಿಪಡಿಸುತ್ತವೆ ನೀವು ಇತರರಿಗೆ ಹೆಚ್ಚು ಮತ್ತು ನಿಮಗಾಗಿ ಕಡಿಮೆ ಮಾಡಿಕೊಳ್ಳುತ್ತೀರಿ.

ಧನು ರಾಶಿ

ಇತ್ತೀಚಿಗೆ ನಿಮಗೆ ಹತಾಶೆಯೆನಿಸುತ್ತಿದ್ದಲ್ಲಿ ಇಂದು ಸರಿಯಾದ ಆಲೋಚನೆಗಳು ಹಾಗೂ ಕಾರ್ಯಗಳು ನಿಮಗೆ ಅಗತ್ಯವಿರುವ ಸಮಾಧಾನವನ್ನು ತರುತ್ತವೆ ಎಂದು ನೀವು ನೆನಪಿಡಬೇಕು. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ. ನೀವು ನಿಮ್ಮದೇ ರೀತಿಯ ಸಂವೇದನೆ ಹೊಂದಿರುವ ಜನರ ಸಂಪರ್ಕಕ್ಕೆ ಬರಲು ನಿಮಗೆ ಸಹಾಯ ಮಾಡುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು.

ಮಕರ ರಾಶಿ

ನೀವು ಭಯವೆಂಬ ದೈತ್ಯನ ಜೊತೆ ಹೊರಾಡಲು ಸಿದ್ಧವಾಗುತ್ತಿದ್ದ ಹಾಗೆ ನಿಮ್ಮ ಆಲೋಚನೆಗಳನ್ನು ಸಕಾರಾತ್ಮಕವಾಗಿ ರೂಪಿಸಿಕೊಳ್ಳಿ. ಇಲ್ಲದಿದ್ದಲ್ಲಿ ನೀವು ಈ ರಾಕ್ಷಸನಿಗೆ ಒಬ್ಬ ಜಡ ಮತ್ತು ನಿಷ್ಕರುಣೆಯ ಬಲಿಯಾಗುತ್ತೀರಿ. ಹಿಂದಿನ ಬಂಡವಾಳದಿಂದ ಆದಾಯವನ್ನು ನಿರೀಕ್ಷಿಸಿದ್ದಲ್ಲಿ. ರಾತ್ರಿಯನ್ನು ವಿಶೇಷವಾಗಿಸಲು ಮೊಂಬತ್ತಿಯ ಬೆಳಕಿನಲ್ಲಿ ನಿಮ್ಮ ಕುಟುಂಬದೊಂದಿಗೆ ಭೋಜನ ಮಾಡಿ ಹಾಗೂ ರಾತ್ರಿಯನ್ನು ಆನಂದಿಸಿ.

ಕುಂಭ ರಾಶಿ

ಬೆಂಬಲ ನೀಡುವ ಸ್ನೇಹಿತರು ನಿಮ್ಮನ್ನು ಸಂತೋಷವಾಗಿರಿಸುತ್ತಾರೆ. ದಿನದ ಆರಂಭದಲ್ಲಿ ಇಂದು ನೀವು ಯಾವುದೇ ಆರ್ಥಿಕ ನಷ್ಟವನ್ನು ಹೊಂದಿರಬಹುದು.ಇದರಿಂದ ನಿಮ್ಮ ಪೂರ್ತಿ ದಿನ ಹದಗೆಡಬಹುದು. ನಿಮ್ಮ ಮಕ್ಕಳಿಗಾಗಿ ಯೋಜನೆಗಳು ಮಾಡಲು ಅತ್ಯುತ್ತಮ ದಿನ. ವೈಯಕ್ತಿಕ ಸಂಬಂಧಗಳು ಸೂಕ್ಷ್ಮ ಹಾಗೂ ಸಂವೇದನಾಶೀಲವಾಗಿವೆ.

ಮೀನ ರಾಶಿ

ಅನಗತ್ಯ ಆಲೋಚನೆಗಳು ನಿಮ್ಮ ಮನಸ್ಸನ್ನು ಆಕ್ರಮಿಸಿಕೊಳ್ಳಲು ಬಿಡಬೇಡಿ. ಶಾಂತವಾಗಿ ಮತ್ತು ಒತ್ತಡ ಮುಕ್ತವಾಗಿ ಉಳಿಯಲು ಪ್ರಯತ್ನಿಸಿ ಹಾಗೂ ಅದು ನಿಮ್ಮ ಮಾನಸಿಕ ದೃಢತೆಯನ್ನು ಹೆಚ್ಚಿಸುತ್ತದೆ. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ. ಒಂದು ಅಂಚೆಯ ಮೂಲಕ ಬಂದ ಪತ್ರ ಇಡೀಕುಟುಂಬಕ್ಕೆ ಸಂತೋಷದ ಸುದ್ದಿ ತರುತ್ತದೆ.

ಸಾಲಿಗ್ರಾಮ ಗಣೇಶ್ ಶೆಣೈಯವರನ್ನು "ಭಾರತೀಯ ಸೇವಾ ರತ್ನ" ಅಂತರಾಷ್ಟ್ರೀಯ ಪ್ರಶಸ್ತಿಗೆ ಆಯ್ಕೆ

ದಾವಣಗೆರೆ: ಬೆಂಗಳೂರಿನ ರಂಗಭೂಮಿ ಕಲಾವಿದರ ಒಕ್ಕೂಟ, ಸೋಶಿಯಲ್ ವರ್ಕಸ್ ಅಸೋಸಿಯೇಷನ್ ಸಂಯುಕ್ತಾಶ್ರಯದಲ್ಲಿ ನಡೆಯುವ ಸಮಾರಂಭದಲ್ಲಿ "ದಾವಣಗೆರೆಯ ಸಾಂಸ್ಕೃತಿಕ ರಾಯಭಾರಿ" ಎಂಬ ಬಿರುದಿನೊಂದಿಗೆ ಯಕ್ಷಗಾನ ಸೇರಿದಂತೆ ಕಲೆ, ಸಾಹಿತ್ಯ, ಸಂಗೀತ ಹೀಗೆ ವಿವಿಧ ಕ್ಷೇತ್ರಗಳಲ್ಲಿ ಕಳೆದ ನಾಲ್ಕು ದಶಕಗಳಿಂದ ನಿರಂತರವಾಗಿ ಕಠಿಣ ಪರಿಶ್ರಮದಿಂದ ಸಾಧನೆ ಮಾಡಿದ್ದನ್ನು ಗುರುತಿಸಿ ಸಾಲಿಗ್ರಾಮ ಗಣೇಶ್ ಶೆಣೈಯವರನ್ನು "ಭಾರತೀಯ ಸೇವಾ ರತ್ನ" ಅಂತರಾಷ್ಟ್ರೀಯ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಬೆಂಗಳೂರಿನ ರಂಗಭೂಮಿ ಕಲಾವಿದರ ಒಕ್ಕೂಟದ ಸಂಸ್ಥಾಪಕರಾದ ಸಾಗರ ಆರ್.ಕಲಾದಗಿ ತಿಳಿಸಿದ್ದಾರೆ.ಶೆಣೈಯವರು ವಿದ್ಯಾಭ್ಯಾಸಕ್ಕೆ ಪ್ರಾಥಮಿಕ ಶಾಲೆಗೆ ಸೀಮಿತಿವಾದರೂ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆ, ಯಕ್ಷರಂಗ ಸೇರಿದಂತೆ ವಿವಿಧ ಸಂಘಟನೆಗಳನ್ನು ಸೃಷ್ಟಿಸಿ ಯಾವುದೇ ಸ್ವಾರ್ಥವಿಲ್ಲದೇ ಸಂಕುಚಿತ ಭಾವನೆ ಬಿಟ್ಟು ವಿಶಾಲವಾದ ಸೇವಾ ಮನೋಭಾವನೆಯೊಂದಿಗೆ ಸಾಧನೆಗೈದ ಶೆಣೈಯವರಿಗೆ ಸೋಶಿಯಲ್ ವರ್ಕಸ್ ಅಸೋಸಿಯೇಷನ್ ಸಂಸ್ಥೆಯ ಸಂಸ್ಥಾಪಕರಾದ ಸೋಮಶೇಖರ್ ಪಿ. ಯಾದವ್ ಅಭಿಮಾನದಿಂದ ಅಭಿನಂದಿಸಿದ್ದಾರೆ.

ಚುಟುಕು ಸಾಹಿತ್ಯ ಹಳೆ ಬೇರು ಹೊಸ ಚಿಗುರು ಕಾರ್ಯಕ್ರಮ

ಹಾಸನ : ಹಾಸನ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ವತಿಯಿಂದ ಆಚಾರ್ಯ ವಾಣಿಜ್ಯ ವಿದ್ಯಾ ಸಂಸ್ಥೆಯಲ್ಲಿ ವಿನೂತನ ಹಳೇಬೇರು ಹೊಸ ಚಿಗುರು ಕಾರ್ಯಕ್ರಮವನ್ನು ಸೆ.6 ಶನಿವಾರದಂದು ಏರ್ಪಡಿಸಲಾಗಿದೆ.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರತಿಭಾನ್ವಿತ ಸಾಹಿತ್ಯಾಸಕ್ತ ವಿದ್ಯಾರ್ಥಿಗಳು ಸ್ವ ರಚಿತ ಚುಟುಕು ವಾಚನ ಮಾಡುವುದರೊಂದಿಗೆ ರಾಜ್ಯಾಧ್ಯಂತ ಸಾಕಷ್ಟು ಜಿಲ್ಲೆಗಳಿಂದ ಸಾಧಕ ಚುಟುಕು ಸಾಹಿತ್ಯ ಕವಿಗಳು ಆಗಮಿಸಲಿದ್ದಾರೆ. ಚುಟುಕು ಸಾಹಿತ್ಯದ ಗಮ್ಯತೆ ಹಾಗೂ ಪ್ರಭಾವ ವಿಷಯದ ಕುರಿತು ಉಪನ್ಯಾಸ ಕಾರ್ಯಕ್ರಮದೊಂದಿಗೆ ರಾಜ್ಯ ಮಟ್ಟದ ಚುಟುಕು ಕವಿಗೋಷ್ಠಿ ಏರ್ಪಡಿಸಲಾಗಿದೆ ಎಂದು ಆಚಾರ್ಯ ವಾಣಿಜ್ಯ ವಿದ್ಯಾ ಸಂಸ್ಥೆಯ ಪ್ರಾಚಾರ್ಯ ಡಾ. ಹೆಚ್. ಆರ್.ಆದರ್ಶ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವ್ಯಾಪಾರದ ಜೊತೆಗೆ ಸಮಾಜಮುಖಿ ಕಾರ್ಯದಲ್ಲಿ ನಲ್ಲೂರು ಮನೆತನ ಮುಂದೆ : ಓಂಕಾರ ಶ್ರೀ

ದಾವಣಗೆರೆ: ನಲ್ಲೂರು ಮನೆತನದ ಶ್ರೀಮತಿ ಗೌರಮ್ಮ ನರಹರಿ ಶೇಠ್ ಪ್ರತಿಷ್ಠಾನವು ತಮ್ಮ ಚಿನ್ನ ಬೆಳ್ಳಿ ಆಭರಣ ವ್ಯಾಪಾರದ ಜೊತೆಗೆ ಹತ್ತು ಹಲವಾರು ಸಮಾಜಮುಖಿ ಕಾರ್ಯಗಳಿಗೆ ನೆರವು ನೀಡುತ್ತಾ ಬಂದಿದೆ ಎಂದು ಆವರಗೊಳ್ಳ ಪುರವರ್ಗ ಹಿರೇಮಠದ ಶ್ರೀ ಓಂಕಾರ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು.

ಶ್ರೀಮತಿ ಗೌರಮ್ಮ ನರಹರಿ ಶೇಟ್ ಪ್ರತಿಷ್ಠಾನದಿಂದ ಶನಿವಾರ ಇಲ್ಲಿನ ವಿನೋಬನಗರದ 1ನೇ ಮುಖ್ಯ ರಸ್ತೆಯಲ್ಲಿರುವ ಶ್ರೀಮತಿ ಗೌರಮ್ಮ ನರಹರಿ ಶೇಟ್ ಕಲ್ಯಾಣ ಮಂಟಪದ ಬೆಳ್ಳಿ ಹಬ್ಬದ ಸಂಭ್ರಮದ ಸಮಾರಂಭ ಹಾಗೂ 80ನೇ ವರ್ಷದ ಶ್ರೀ ಸತ್ಯನಾರಾಯಣ ಸ್ವಾಮಿ ಪೂಜಾ ಕಾರ್ಯಕ್ರಮದ ಸಾನಿಧ್ಯ ವಹಿಸಿ ಶ್ರೀಗಳು ಮಾತನಾಡಿದರು.

ನಲ್ಲೂರು ಮನೆತನ ಸಮಾಜ ಸೇವೆ ಜೊತೆಗೆ ಹಲವಾರು ಸಂಘ ಸಂಸ್ಥೆಗಳನ್ನು ಕಟ್ಟಿಕೊಂಡು ಸಮಾಜಕ್ಕೆ, ದೈವಜ್ಞ ಸಮಾಜದ ಯಾರಾದರೂ ದೀನ ದುರ್ಬಲರು, ಬಡವರು ಬಂದರೆ ಅವರ ಮಕ್ಕಳ ಶಿಕ್ಷಣಕ್ಕೆ, ಆರೋಗ್ಯ ಸಮಸ್ಯೆಗೆ, ಶುಭ ಕಾರ್ಯಗಳಿಗೆ ಏನಾದರೂ ಆರ್ಥಿಕವಾಗಿ ಬಂದರೆ ಅಂತಹವರಿಗೆ ಸಹಕಾರ ನೀಡುತ್ತಾ ಬಂದಿದ್ದಾರೆ. ಜಿಲ್ಲೆಯ ಎಲ್ಲಿಯೇ ಯಾವುದೇ ಸಾಮೂಹಿಕ ವಿವಾಹ ಕಾರ್ಯಕ್ರಮ ಇದ್ದರೆ ಸಾಕು ಅಲ್ಲಿ ಈ ಸಂಸ್ಥೆ ಸಹಾಯ ಹಸ್ತ ಸದಾ ಇದ್ದೇ ಇರುತ್ತದೆ. ಸಹಸ್ರಾರು ಕುಟುಂಬಗಳ ಬದುಕಿಗೆ ಬದುಕನ್ನು ಕಟ್ಟಿಕೊಡುವ ದಿಸೆಯಲ್ಲಿ ಇಂತಹ ಸೇವಾ ಕಾರ್ಯ ಮಾಡುತ್ತಿದ್ದಾರೆ. ಆ ರೀತಿಯಾಗಿ ಜನಮಾನಸದಲ್ಲಿ ಅವರ ಹಿರಿಯರು ಹೆಸರು ಉಳಿಸಿ ಹೋಗಿದ್ದಾರೆ. ಅಂತಹ ನಲ್ಲೂರು ಕುಟುಂಬದ ಎಲ್ಲಾ ಸಹೋದರರೂ ಅದನ್ನು ಉಳಿಸಿ ಬೆಳೆಸಿಕೊಂಡು ಹೋಗುತ್ತಿದ್ದಾರೆ ಎಂದರು.

ಮನುಷ್ಯ ಎಷ್ಟೇ ಎತ್ತರಕ್ಕೆ ಬೆಳೆಯಲಿ ನಮ್ಮ ಆಚಾರ, ವಿಚಾರ, ಧರ್ಮ, ಪರಂಪರೆ, ಸಂಸ್ಕೃತಿ, ಸಂಸ್ಕಾರಗಳನ್ನು ಮೈಗೂಡಿಕೊಂಡು ಆ ಧರ್ಮದ ಕಟ್ಟುಪಾಡುಗಳನ್ನು ಮೊದಲು ಅವರು ಮೈಗೂಡಿಸಿಕೊಂಡು ಮನನ ಮಾಡಿಕೊಂಡು ಆಚರಣೆಯಾಗಿಸಿಕೊಂಡು ಅದೇ ನಮ್ಮ ರಕ್ಷಣೆ ಎಂದು ಅದನ್ನು ಉಳಿಸಿಕೊಂಡು ಬೆಳೆಸಿಕೊಂಡು ಹೋದಾಗ ಮಾತ್ರ ನಮ್ಮ ಜೀವನ ಸಾರ್ಥಕವಾಗುತ್ತದೆ. ನಮ್ಮ ಮನೆಯಲ್ಲಿ ಮಕ್ಕಳಿಗೆ ಇಂತಹ ಸಂಸ್ಕೃತಿಯನ್ನು ತಿಳಿ ಹೇಳಬೇಕು ಎಂದರು.

ಪ್ರತಿಷ್ಠಾನದ ಅಧ್ಯಕ್ಷ ನಲ್ಲೂರು ಬಿ.ಎನ್.ನಾಗರಾಜ ರೇವಣಕರ್ ಅಧ್ಯಕ್ಷತೆಯಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಪ್ರತಿಷ್ಠಾನದ ಸಂಸ್ಥಾಪಕ ಡಾ.ನಲ್ಲೂರು ಅರುಣಾಚಲ ಎನ್. ರೇವಣಕರ್, ಕಲ್ಯಾಣ ಮಂಟಪದ ಆಡಳಿತ ಮಂಡಿಯ ಎನ್.ಶಿವಾನಂದ ರೇವಣಕರ್, ನಲ್ಲೂರು ಎಸ್.ರಾಜಕುಮಾರ, ನಲ್ಲೂರು ಕುಟುಂಬದವರು, ಭಾಗವಹಿಸಿದ್ದರು.

ಪ್ರಮೀಳಾ ನಾಗರಾಜ ಪ್ರಾರ್ಥಿಸಿದರೆ, ಸ್ನೇಹಾ ರೋಷನ್ ರೇವಣಕರ್ ಸ್ವಾಗತಿಸಿದರು. ಸಾಲಿಗ್ರಾಮ ಗಣೇಶ ಶೆಣೈ ಪ್ರಾಸ್ತಾವಿಕವಾಗಿ ಮಾತನಾಡಿ ಕಾರ್ಯಕ್ರಮ ನಿರೂಪಿಸಿದರು. ನಲ್ಲೂರು ಲಕ್ಷ್ಮಣ ರಾವ್ ವಂದಿಸಿದರು.

ಯಶಸ್ವಿಯಾಗಿ ಜರುಗಿದ ಭಾರತೀಯ ಜೀವ ವಿಮಾ ನಿಗಮದ ಕ್ರೀಡಾಕೂಟ

ಶಿವಮೊಗ್ಗ : ನಿನ್ನೆಯಿಂದ ರಾವ್ಸ್ ಸ್ಪೋರ್ಟ್ಸ್ ಅರೆನಾದಲ್ಲಿ ನಡೆದ ಭಾರತೀಯ ಜೀವ ವಿಮಾ ನಿಗಮ, ದಕ್ಷಿಣ ಮಧ್ಯ ವಲಯ ಮಟ್ಟದ ಪುರುಷರ ಹಾಗೂ ಮಹಿಳೆಯರ ಬ್ಯಾಡ್ಮಿಂಟನ್ ಮತ್ತು ಟೇಬಲ್ ಟೆನಿಸ್ ಕ್ರೀಡಾಕೂಟ ಅತ್ಯಂತ ಯಶಸ್ವಿಯಾಗಿ ನಡೆಯಿತು. ಕರ್ನಾಟಕ, ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳಿಂದ ಬಂದಿದ್ದ ಎಪ್ಪತ್ತು ಕ್ರೀಡಾಪಟುಗಳ ನಡುವೆ ನಡೆದ ತೀವ್ರ ಗತಿಯ ಹಣಾಹಣಿ ನೋಡುಗರ ಮನಸೂರೆಗೊಂಡಿತು.

ಮಹಿಳೆಯರ ಬ್ಯಾಡ್ಮಿಂಟನ್ ಸ್ಪರ್ಧೆಯಲ್ಲಿ ಚೈತ್ರ ರವರು ಪ್ರಥಮ ಸ್ಥಾನವನ್ನು ಜೋತಿರ್ಮಯಿರವರು ದ್ವಿತೀಯ ಸ್ಥಾನವನ್ನು ಪಡೆದರು. ಹಾಗೆಯೇ ಟೇಬಲ್ ಟೆನಿಸ್ ಸ್ಪರ್ಧೆಯಲ್ಲಿ ಜ್ಯೋತ್ಸ್ನಾರವರು ಪ್ರಥಮ ಸ್ಥಾನವನ್ನು ಸ್ಫೂರ್ತಿ ಕೊಟ್ಯಾನ್ ರವರು ದ್ವಿತೀಯ ಸ್ಥಾನವನ್ನು ಪಡೆದರು.

ಪುರುಷರ ಬ್ಯಾಡ್ಮಿಂಟನ್ ಸ್ಪರ್ಧೆಯಲ್ಲಿ ಕೆ. ಕಿಶೋರ್ ಕುಮಾರ್ ರವರು ಪ್ರಥಮ ಸ್ಥಾನವನ್ನು ನಾಗವಿನಾಯಕ್ ರವರು ದ್ವಿತೀಯ ಸ್ಥಾನವನ್ನು ಪಡೆದರು. ಅಂತೆಯೇ ಟೇಬಲ್ ಟೆನಿಸ್ ಸ್ಪರ್ಧೆಯಲ್ಲಿ ಕಾರ್ತಿಕ್ ರವರು ಪ್ರಥಮ ಸ್ಥಾನವನ್ನು ಸಿಂಗರಾಜುರವರು ದ್ವಿತೀಯ ಸ್ಥಾನವನ್ನು ಪಡೆದು ರಾಷ್ಟ್ರಮಟಕ್ಕೆ ಆಯ್ಕೆಯಾಗಿದ್ದಾರೆ.

ವಿಜೇತರಿಗೆ ಬಹುಮಾನ ವಿತರಿಸಿ ಮಾತನಾಡಿದ ಶ್ರೀಮತಿ ಸತ್ಯವಾಣಿ ಪ್ರಾಂತೀಯ

ವ್ಯವಸ್ಥಾಪಕಿ (ಮಾನವ ಸಂಪನ್ಮೂಲ)ರವರು ಅಂತಾರಾಷ್ಟ್ರೀಯ ಮಟ್ಟದಲ್ಲಿ ಕ್ರೀಡಾಕೂಟವನ್ನು ಬಹಳ ಅಚ್ಚುಕಟ್ಟಾಗಿ ಆಯೋಜಿಸಿ ಯಾವುದೇ ಲೋಪದೋಷಗಳು ಇಲ್ಲದಂತೆ ನಡೆಸಿಕೊಟ್ಟ ಶಿವಮೊಗ್ಗ ವಿಭಾಗದ ಪ್ರತಿಯೊಬ್ಬರಿಗೂ ಹೃತ್ಪೂರ್ವಕ ವಂದನೆಗಳನ್ನು ಸಲ್ಲಿಸಿ ಮುಂದಿನ ಹಂತಕ್ಕೆ ಅರ್ಹರಾದ ಕ್ರೀಡಾಪಟುಗಳಿಗೆ ಶುಭ ಹಾರೈಸಿದರು.

ಯಕ್ಷಗಾನದಿಂದ ವಾಣಿಜ್ಯನಗರಿ ದಾವಣಗೆರೆ ಸಾಂಸ್ಕೃತಿಕ ನಗರಿಯಾಗುತ್ತಿದೆ– ಎಸ್.ಟಿ.ವೀರೇಶ್

ದಾವಣಗೆರೆ: ದಾವಣಗೆರೆಯಲ್ಲಿ ನಿರಂತರವಾಗಿ ಯಕ್ಷಗಾನ ಪ್ರದರ್ಶನಗಳಿಂದ ವಾಣಿಜ್ಯನಗರಿ ದಾವಣಗೆರೆ ಸಾಂಸ್ಕೃತಿಕ ನಗರಿಯಾಗುತ್ತಿರುವುದು ಶ್ಲಾಘನೀಯ. ಕಳೆದ ನಾಲ್ಕು ದಶಕಗಳಿಂದ ಯಕ್ಷಗಾನ ಮೊಟ್ಟ ಮೊದಲು ಪರಿಚಯಿಸಿದ ದಾವಣಗೆರೆಯ ಯಕ್ಷರಂಗ ಸಂಸ್ಥೆ ನಿಜಕ್ಕೂ ಅಚ್ಚು ಮೆಚ್ಚಿನ ಸಾಧನೆ ಎಂದು ಪ್ರೇರಣಾ ಸಂಸ್ಥೆಯ

ಅಧ್ಯಕ್ಷರು, ಮಾಜಿ ಮಹಾನಗರ ಪಾಲಿಕೆ ಮಹಾಪೌರರಾದ ಎಸ್.

ಆ.25 ರಿಂದ ಆಧಾರ್ ಸೀಡಿಂಗ್ ಅಭಿಯಾನ

ಚಿತ್ರದುರ್ಗ : ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನವನ್ನು ಮಂಜೂರು ಮಾಡಲು ಬ್ಯಾಂಕ್ ಖಾತೆಗೆ ಆಧಾರ್ ಜೋಡಣೆಯಾಗದೇ ಬಾಕಿ ಇರುವ ಅರ್ಜಿಗಳಿಗೆ ಆಧಾರ್ ಸೀಡಿಂಗ್ ಮಾಡುವ ಕಾರ್ಯವನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ಇದೇ ಆಗಸ್ಟ್ 25 ರಿಂದ ಸೆಪ್ಟೆಂಬರ್ 7 ರವರೆಗೆ ಆಧಾರ್ ಸೀಡಿಂಗ್ ಅಭಿಯಾನ ಕೈಗೊಳ್ಳಲಾಗಿದೆ.

ಪರಿಶಿಷ್ಟವರ್ಗಗಳ ವಿದ್ಯಾರ್ಥಿಗಳ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಯೋಜನೆಗಳನ್ನು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಮೂಲಕ ಅನುಷ್ಠಾನಗೊಳಿಸಲಾಗಿದ್ದು, ನೇರ ನಗದು ವರ್ಗಾವಣೆ ತಂತ್ರಾಂಶದ ಮೂಲಕ ಅರ್ಹ ವಿದ್ಯಾರ್ಥಿಗಳ ಆಧಾರ್ ಜೋಡಿತ ಬ್ಯಾಂಕ್ ಖಾತೆಗೆ ನೇರವಾಗಿ ವಿದ್ಯಾರ್ಥಿ ವೇತನ ಪಾವತಿಸಲಾಗುತ್ತಿದೆ. ಆಧಾರ್ ಸೀಡಿಂಗ್ ಆಗದೇ ಇರುವ ಕೆಲ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರಿಗೆ ತಾಂತ್ರಿಕ ಅಡೆತಡೆ ಉಂಟಾಗಿದೆ. ಈ ಹಿನ್ನಲೆಯಲ್ಲಿ ಎಲ್ಲಾ ಅರ್ಹ ವಿದ್ಯಾರ್ಥಿಗಳು ಆಧಾರ್ ಸೀಡಿಂಗ್ ಮಾಡಿಸಿಕೊಳ್ಳುವಂತಾಗಲು ಆಗಸ್ಟ್ 25 ರಿಂದ ಸೆಪ್ಟೆಂಬರ್ 7 ರವರೆಗೆ ವಿಶೇಷ ಆಧಾರ್ ಸೀಡಿಂಗ್ ಅಭಿಯಾನವನ್ನು ಜಿಲ್ಲಾ, ತಾಲ್ಲೂಕು ಮಟ್ಟದಲ್ಲಿ ಹಮ್ಮಿಕೊಳ್ಳುವಂತೆ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ನಿರ್ದೇಶಕರು ಸೂಚಿಸಿದ್ದಾರೆ. ಈ ಹಿನ್ನಲೆಯಲ್ಲಿ ಚಿತ್ರದುರ್ಗ ತಾಲ್ಲೂಕು ವ್ಯಾಪ್ತಿಯ ಪ್ರಾಥಮಿಕ, ಪ್ರೌಢಶಾಲೆಗಳಲ್ಲಿ ಹಾಗೂ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ವರ್ಗಗಳ ವಿದ್ಯಾರ್ಥಿಗಳ ಆಧಾರ್ ಸೀಡಿಂಗ್ ಮಾಡಿಸಿಕೊಳ್ಳುವಂತಾಗಿಸಲು ವಿಶೇಷ ಆಧಾರ್ ಸೀಡಿಂಗ್ ಅಭಿಯಾನವನ್ನು ಎಲ್ಲ ಶಾಲೆ, ಕಾಲೇಜುಗಳು ಹಾಗೂ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿಗಳ ಆಧಾರ್ ಸೀಡಿಂಗ್ ಮಾಡಿಸಿ, ನಿಗಧಿತ ಸಮಯದೊಳಗೆ ಪೂರ್ಣಗೊಳಿಸಲು ಸೂಚಿಸಿದೆ.

ಕಾಡುಗೋಡಿ ಒತ್ತುವರಿ ತೆರವು: ದಲಿತರನ್ನಷ್ಟೇ ಹೊರಹಾಕಿದ್ದಾರೆ

ಛಲವಾದಿ ನಾರಾಯಣಸ್ವಾಮಿ ಆರೋಪ

ಬೆಂಗಳೂರು: ಕಾಡುಗೋಡಿ ಪ್ಲಾಂಟೇಷನ್‌ನ ಸರ್ವೆ ನಂಬರ್ 1ರಲ್ಲಿ ಒತ್ತುವರಿ ತೆರವು ಕಾರ್ಯಾಚರಣೆ ವೇಳೆ ದಲಿತರನ್ನಷ್ಟೇ ಹೊರಹಾಕಿದ್ದಾರೆಂದು ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಮಂಗಳವಾರ ಆರೋಪಿಸಿದ್ದಾರೆ.

ಪರಿಷತ್ತಿನಲ್ಲಿ ಈ ವಿಚಾರ ಪ್ರಸ್ತಾಪಿಸಿದ ಅವರು, ಸ್ವಾತಂತ್ರ್ಯಪೂರ್ವದಲ್ಲಿ (1901) ಕಾಡುಗೋಡಿಯ 711 ಎಕರೆಯನ್ನು ಮೀಸಲು ಅರಣ್ಯ ಪ್ರದೇಶ ಎಂದು ಘೋಷಿಸಲಾಗಿತ್ತು. 6–7 ದಶಕಗಳ ಹಿಂದೆಯೇ ಇಲ್ಲಿ ಹಲವರಿಗೆ ಜಮೀನು ಮಂಜೂರು ಮಾಡಲಾಗಿತ್ತು. ರೈತರಿಗೆ ಪರಿಹಾರ ನೀಡಿ 153 ಎಕರೆಯನ್ನು ಭೂಸ್ವಾಧೀನಪಡಿಸಿಕೊಂಡಿದ್ದ ಕೆಐಎಡಿಬಿ, ಕೈಗಾರಿಕೆಗಳಿಗೆ ನೀಡಿದೆ. ರೈಲ್ವೆಯೋಜನೆಗೆ 228 ಎಕರೆ ನೀಡಲಾಗಿದೆ. ರಿಯಲ್ ಎಸ್ಟೇಟ್‌ಗೆ, ಬೆಂಗಳೂರು ಜಲ ಮಂಡಳಿಗೆ, ಮೆಟ್ರೊ ರೈಲು ಯೋಜನೆಗೂ ಜಮೀನು ನೀಡಲಾಗಿದೆ.

ವ್ಯವಸಾಯ ಸೇವಾ ಸಹಕಾರ ಸಂಘ, ಗೃಹ ನಿರ್ಮಾಣ ಸಂಘಗಳ ಮೂಲಕ ಸಾವಿರಾರು ಜನರು ಮನೆಗಳನ್ನು ನಿರ್ಮಾಣ ಮಾಡಿಕೊಂಡು ವಾಸ ಮಾಡುತ್ತಿದ್ದಾರೆ. ಆದರೆ, ಅರಣ್ಯ ಇಲಾಖೆ 2016ರ ನಂತರದ ನಿಯಮಗಳನ್ನು ಬಳಸಿಕೊಂಡು ಬಡವರನ್ನು ತೆರವುಗೊಳಿಸಿದ್ದಾರೆ. ಆದರೆ, ದೊಡ್ಡ ಬಿಲ್ಡರ್ ಗಳ ಕಚೇರಿಗಳು, ಕೈಗಾರಿಕೆಗಳು ಹಾಗೂ ಇತರೆ ನಿರ್ಮಾಣಗಳನ್ನು ಮುಟ್ಟಿಲ್ಲ ಎಂದು ಕಿಡಿ–ಕಾರಿದರು.

ಇದಕ್ಕೆ ಉತ್ತರಿಸಿದ ಅರಣ್ಯ ಸಚಿವ ಈಶ್ವರ ಖಂಡ್ರೆ, ಅರಣ್ಯ ಕಾನೂನು, ಕೋರ್ಟ್ ಆದೇಶಗಳ ಪ್ರಕಾರವೇ ಕಾಡುಗೋಡಿಯಲ್ಲಿ ಒತ್ತುವರಿಯಾಗಿದ್ದ 120 ಎಕರೆ ಅರಣ್ಯ ಭೂಮಿಯನ್ನು ಮರುವಶಪಸಿಕೊಳ್ಳಲಾಗಿದೆ. ಯಾವುದೇ ಕಟ್ಟಡ, ವಾಸಸ್ಥಳ ತೆರವು ಮಾಡಿಲ್ಲ. ಒಂದು ಬಾರಿ ಅರಣ್ಯ ಎಂದು ಅಧಿಸೂಚನೆಯಾದ ಪ್ರದೇಶ ಎಂದಿಗೂ ಅರಣ್ಯ ಭೂಮಿ. ಒತ್ತುವರಿ ತೆರವು ಮಾಡಿ, ಗಡಿ ಗುರುತಿಸಲಾಗಿದೆ.

ನಶೆ ಮುಕ್ತ ಸಮಾಜ ನಿರ್ಮಾಣಕ್ಕೆ ಯುವಕರ ಸಹಕಾರ ಅಗತ್ಯ : ದಿನೇಶ್ ಕೆ.ಶೆಟ್ಟಿ ಕರೆ

ದಾವಣಗೆರೆ : ನಶೆ ಮುಕ್ತ ಸಮಾಜ ನಿರ್ಮಾಣಕ್ಕಾಗಿ ಯುವ ಜನಾಂಗ ಸರ್ಕಾರದ ಪ್ರಯತ್ನಗಳಿಗೆ ಕೈ ಜೋಡಿಸಬೇಕು ಎಂದು ದಾವಣಗೆರೆ – ಹರಿಹರ ನಗರಾಭಿವೃದ್ಧಿ ಪ್ರಾಧಿ ಕಾರದ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ ಕರೆ ನೀಡಿದ್ದಾರೆ.

ರಾಷ್ಟ್ರೀಯ ಯುವ ದಿನಾಚರಣೆ ಅಂಗವಾಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ 'ಯುವ ಸೌರಭ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಡ್ರಗ್ಸ್ ಸೇರಿದಂತೆ ಯಾವುದೇ ಮಾದಕ ವಸ್ತುಗಳ ಸೇವನೆ ಅಥವಾ ಮಾರಾಟ ಕಂಡುಬಂದರೆ ಕೂಡಲೇ ಪೊಲೀಸರಿಗೆ ಮಾಹಿತಿ ನೀಡಿ ಆರೋಗ್ಯಪೂರ್ಣ ಸಮಾಜ ನಿರ್ಮಾಣಕ್ಕೆ ಸಹಕರಿಸಬೇಕು ಎಂದು

ವಿದ್ಯಾರ್ಥಿಗಳಿಗೆ ತಿಳಿಸಿದರು.

ಹಿರಿಯ ಪತ್ರಕರ್ತ ಬಿ.ಎನ್. ಮಲ್ಲೇಶ್ ಮಾತನಾಡಿ, ವಿದ್ಯಾರ್ಥಿಗಳಿಗೆ ನಶೆ ಇರಬೇಕು, ಆದರೆ ಅದು ಓದು, ಕಲೆ, ಸಾಹಿತ್ಯ, ಸಂಗೀತ ಅಥವಾ ನಾಟಕದಂತಹ ಸೃಜನಾತ್ಮಕ ಚಟುವಟಿಕೆಗಳ ಮೇಲಿರಬೇಕು. ಇಂತಹ ನಶೆಗಳು ಬೌದ್ಧಿಕವಾಗಿ ಸದೃಢರನ್ನಾಗಿ ಮಾಡಿ ಸರ್ವಾಂಗೀಣ ಪ್ರಗತಿಗೆ ಸಹಾಯ ಮಾಡುತ್ತವೆ ಎಂದರು. ಡ್ರಗ್ಸ್ ವ್ಯಸನವು ಜೀವನವನ್ನು ನಾಶ ಮಾಡುತ್ತದೆ. ಯುವಕರು ಆದರ್ಶ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು. ದೇಶೀಯ ಜನಪದ ಕಲೆಗಳನ್ನು ಉಳಿಸಿ ಬೆಳೆಸುವ ಮೂಲಕ ಸಾಂಸ್ಕೃತಿಕ ಪರಂಪರೆಯನ್ನು ಮುಂದುವರಿಸಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ಕಸಾಪ ಅಧ್ಯಕ್ಷ ಬಿ. ವಾಮದೇವಪ್ಪ, ದೇಶಕ್ಕಾಗಿ ತ್ಯಾಗ ಮಾಡಿದ ಮಹನೀಯರ ಆದರ್ಶಗಳನ್ನು ಯುವಕರು ಜೀವನದಲ್ಲಿ ಅಳವಡಿಸಿ ಕೊಳ್ಳಬೇಕು. ಸರ್ಕಾರದ ಕಾರ್ಯಕ್ರಮ ಗಳನ್ನು ಸದುಪಯೋಗಪಡಿಸಿ ಕೊಂಡು ಆದರ್ಶ ಯುತ ಜೀವನ ನಡೆಸಬೇಕು ಎಂದು ಹೇಳಿದರು.

ರಾಷ್ಟ್ರೀಯ ಯುವ ಪ್ರಶಸ್ತಿ ಪುರಸ್ಕೃತ ಮಾಗಾನಹಳ್ಳಿ ಮಂಜುನಾಥ್, ಜಾನಪದ ಕಲೆಗಳ ಉಳಿವಿಗೆ ವಿದ್ಯಾರ್ಥಿಗಳ ಸಹಕಾರ ಅಗತ್ಯ ಎಂದರು. ಇದೇ ಕಾಲೇಜಿನಲ್ಲಿ ಅಕ್ಟೋಬರ್‌ನಲ್ಲಿ ಯುವ ಜನೋತ್ಸವ ಆಯೋಜಿಸಲಾಗಿದ್ದು, ಭಾಷಣ, ಸುಗಮ ಸಂಗೀತ ಸೇರಿದಂತೆ ಏಳು ಕಲೆಗಳಿಗೆ ಅವಕಾಶವಿದೆ. ವಿದ್ಯಾರ್ಥಿಗಳು ಇಂದಿನಿಂದಲೇ ಅಭ್ಯಾಸ ಮಾಡಿ ಭಾಗವಹಿಸಬೇಕೆಂದು ಪ್ರೋತ್ಸಾಹಿಸಿದರು.

ಕಾಲೇಜಿನ ಪ್ರಾಂಶುಪಾಲ ಬಸವರಾಜಪ್ಪ, ಪ್ರಾಧ್ಯಾಪಕ ನರೇಶ್, ಜಿಲ್ಲಾ ಅಂಗವಿಕಲರ ಕಲ್ಯಾಣಾಭಿವೃದ್ಧಿ ಇಲಾಖೆ ಅಧಿಕಾರಿ ಡಾ.ಕೆ.ಕೆ.ಪ್ರಕಾಶ್ ಉಪಸ್ಥಿತರಿದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿಚಂದ್ರ ಸ್ವಾಗತಿಸಿದರು. ಡಾ. ಶೃತಿ ಕಾರ್ಯಕ್ರಮ ನಿರೂಪಿಸಿದರು.

ರಸ್ತೆ ಗುಂಡಿಮುಚ್ಚಲು ಆಗ್ರಹಿಸಿ ಬಿಜೆಪಿ–ಜೆಡಿಎಸ್ ಜೋಳದಾಳ್‌ನಲ್ಲಿ ಪ್ರತಿಭಟನೆ

ಚಿಕ್ಕಮಗಳೂರು: ಕಾಫಿನಾಡು ಚಿಕ್ಕಮಗಳೂರು ಜಿಲ್ಲೆಯ ಮಲೆನಾಡು ಭಾಗದಲ್ಲಿ ಅತಿ ಹೆಚ್ಚು ಮಳೆ ಬಿದ್ದ ಪರಿಣಾಮ ರಸ್ತೆಗಳು ಗುಂಡಿಗಳಿಂದ ಕೂಡಿದ್ದು, ಕೂಡಲೇ ರಸ್ತೆಗಳನ್ನು ದುರಸ್ಥಿಪಡಿಸಬೇಕೆಂದು ಆಗ್ರಹಿಸಿ ಇಂದು ಬಿಜೆಪಿ ಮತ್ತು ಜೆಡಿಎಸ್ ಪಕ್ಷದ ಕಾರ್ಯಕರ್ತರು ಜೋಳದಾಳ್ ವೃತ್ತದಲ್ಲಿ ಬಾಳೆಗಿಡ ನೆಟ್ಟು ರಸ್ತೆತಡೆ ನಡೆಸಿ ವಿನೂತನ ಪ್ರತಿಭಟನೆ ನಡೆಸಿದರು.

ಬಿಜೆಪಿ ಆಲ್ದೂರು ಮಂಡಲ ಹಾಗೂ ಜೆಡಿಎಸ್ ಪಕ್ಷದ ವತಿಯಿಂದ ಇಂದು ರಸ್ತೆ ಗುಂಡಿ ಮುಚ್ಚುವಂತೆ ಆಗ್ರಹಿಸಿ ಸರ್ಕಾರದ ಗಮನ ಸೆಳೆಯಲು ಆಯೋಜಿಸಲಾಗಿದ್ದ ರಸ್ತೆ ತಡೆ ಪ್ರತಿಭಟನೆಯಲ್ಲಿ ನೂರಾರು ಗ್ರಾಮಸ್ಥರು ಹಾಗೂ ಕಾರ್ಯಕರ್ತರು ಭಾಗವಹಿಸಿ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನಾಕಾರರನ್ನುದ್ದೇಶಿಸಿ ಮಾತನಾಡಿದ ಜಿಲ್ಲಾ ಬಿಜೆಪಿ ಉಪಾಧ್ಯಕ್ಷ ಹಾಗೂ ಪರಾಜಿತ ಅಭ್ಯರ್ಥಿ ದೀಪಕ್ ದೊಡ್ಡಯ್ಯ ಸರ್ಕಾರ ಬಂದು ಎರಡೂವರೆ ವರ್ಷಗಳಾದರೂ ರಸ್ತೆಗಳ ಗುಂಡಿ ಮುಚ್ಚಿಲ್ಲ. ಶೀಘ್ರವೇ ರಸ್ತೆಗಳ ಗುಂಡಿಯನ್ನು ಮುಂಚಿ ಸಂಚಾರಕ್ಕೆ ಅನುವು

ಮಾಡಿಕೊಡಬೇಕೆಂದು ಒತ್ತಾಯಿಸಿದ ಅವರು, ಅಭಿವೃದ್ಧಿಯಲ್ಲಿ ಶೂನ್ಯ ಸಾಧನೆ ಎಂದು ಆರೋಪಿಸಿದರು.

ಪಂಚ ಗ್ಯಾರಂಟಿ ಹೆಸರಿನಲ್ಲಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಜನಪರ ಆಡಳಿತ ನೀಡುವಲ್ಲಿ ವಿಫಲವಾಗಿ ಮತದಾರರಿಗೆ ಮೋಸ ಮಾಡುತ್ತಿದೆ. ಈ ಭಾಗದಲ್ಲಿ ಕಾಡಾನೆಗಳ ಹಾವಳಿ ಜೊತೆಗೆ ಕಾಡುಪ್ರಾಣಿಗಳ ದಾಳಿಯಿಂದ ಜನಸಾಮಾನ್ಯರು ತತ್ತರಿಸಿದ್ದು, ಜೀವ ಭಯದಲ್ಲಿದ್ದಾರೆಂದರು.

ಪರಿಶಿಷ್ಟ ಜಾತಿ, ಪಂಗಡದ ಪರವಾಗಿ ಇದೆ ಎಂದು ಹೇಳುವ ಸರ್ಕಾರ ಎಸ್‌ಸಿ, ಟಿಎಸ್‌ಪಿ 39 ಸಾವಿರ ಕೋಟಿ ರೂಗಳನ್ನು

> **ಶಾಸಕರು ಮತ್ತು ಜಿಲ್ಲಾ ಸಚಿವರು ಕ್ಷೇತ್ರ ಪ್ರವಾಸ ಕೈಗೊಂಡು ಜನಸಾಮಾನ್ಯರು ಪ್ರಸ್ತುತ ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಬೆಳಕು ಚೆಲ್ಲಬೇಕು. ಇನ್ನು 15 ದಿನಗಳೊಳಗೆ ರಸ್ತೆಗಳನ್ನು ಅಭಿವೃದ್ಧಿಪಡಿಸದಿದ್ದರೆ ಇಡೀ ಕ್ಷೇತ್ರ ಬಂದ್ ಮಾಡಿ ಉಗ್ರ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಸಿದರು.**

ಅನ್ಯ ಉದ್ದೇಶಕ್ಕೆ ಬಳಸಲಾಗಿದೆ. ಇದು ಸಂವಿಧಾನ ಶಿಲ್ಪಿ ಡಾ. ಬಿ.ಆರ್ ಅಂಬೇಡ್ಕರ್‌ಗೆ ಮಾಡಿದ ಅವಮಾನ. ದಲಿತರು ಮತ್ತು ಹಿಂದುಳಿದವರಿಗೆ ಮಾಡಿದ ಅಪಮಾನ ಎಂದು ಆರೋಪಿಸಿದರು.

ಜೆಡಿಎಸ್–ಬಿಜೆಪಿ ಒಗ್ಗೂಡಿದರೆ ರಾಜ್ಯದಲ್ಲಿ ಯಾವ ಶಕ್ತಿಯೂ ತಡೆಯಲು ಸಾಧ್ಯವಿಲ್ಲ. ಪ್ರಧಾನಿ ನರೇಂದ್ರ ಮೋದಿ, ಮಾಜಿ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ, ಸಿ.ಟಿ. ರವಿ, ಎಂ.ಕೆ. ಪ್ರಾಣೇಶ್ ಉತ್ತಮ ಆಡಳಿತ ನಡೆಸಿದ್ದಾರೆ ಎಂದು ಶ್ಲಾಘಿಸಿದರು.

ಜೆಡಿಎಸ್ ಕ್ಷೇತ್ರ ಸಮಿತಿ ಅಧ್ಯಕ್ಷ ಡಿ.ಜೆ ಸುರೇಶ್ ಮಾತನಾಡಿ, ರಸ್ತೆಗಳು ಗುಂಡಿಬಿದ್ದು ಅಪಘಾತ ಸೃಷ್ಟಿಸುವತ್ತ ಪರಿವರ್ತನೆಯಾಗಿರುವುದರಿಂದ ಜನಜೀವನ ಅಸ್ತವ್ಯಸ್ತವಾಗಿದೆ. ಸರ್ಕಾರ ಪರ್ಸೆಂಟೇಜ್‌ನಲ್ಲಿ ತೊಡಗಿರುವುದರಿಂದ ಅಭಿವೃದ್ಧಿಯಲ್ಲಿ ಶೂನ್ಯವಾಗಿದೆ ಎಂದು ದೂರಿದರು.

ಸರ್ಕಾರ ಮತ್ತು ಅರಣ್ಯ ಇಲಾಖೆ ಕಾಡುಪ್ರಾಣಿಗಳ ಹಾವಳಿ ತಡೆಯುವಲ್ಲಿ ವಿಫಲವಾಗಿವೆ ಎಂದು ಆರೋಪಿಸಿದರು.

ಬಿಜೆಪಿ ಮಂಡಲ ಅಧ್ಯಕ್ಷ ರವಿ ಬಸರವಳ್ಳಿ ಮಾತನಾಡಿ, ಗುಂಡಿಯಲ್ಲಿ ರಸ್ತೆ ಹುಡುಕುವ ಕೆಲಸ ನಡೆಯುತ್ತಿದ್ದು, ಇದ–ರಿಂದ ಕೂಡಲೇ ಮುಕ್ತಿನೀಡಿ ಜನಸಾಮಾನ್ಯರ ಸಂಚಾರಕ್ಕೆ ಅನುಕೂಲ ಮಾಡಬೇಕೆಂದು ಆಗ್ರಹಿಸಿದರು. ಜಿಲ್ಲಾ ಉಸ್ತುವಾರಿ ಸಚಿವರು ಎಲಿಕ್ಯಾಪ್ಟರ್‌ನಲ್ಲಿ ಓಡಾಡುತ್ತಿರುವುದರಿಂದ ರಸ್ತೆಗಳ ದುಸ್ಥಿತಿ ಅವರಿಗೆ ಅರ್ಥವಾಗುತ್ತಿಲ್ಲ. ರಸ್ತೆಗಳಲ್ಲಿ ಓಡಾಡಿದರೆ ಮಾತ್ರ ಅದರ ಅರಿವಾಗುತ್ತದೆ. ದುರಸ್ಥಿ ವಿಳಂಭವಾದರೆ ಉಗ್ರಪ್ರತಿಭಟನೆ ಮಾಡುವುದಾಗಿ ಎಚ್ಚರಿಸಿದರು.

ಕಾಡು ಪ್ರಾಣಿ ಹಾವಳಿ ತಡೆಯದಿದ್ದರೆ ಚಳವಳಿ ತೀವ್ರ : ದಯಾಕರ್ ಎಚ್ಚರಿಕೆ

ಚಿಕ್ಕಮಗಳೂರು: ಜಿಲ್ಲೆಯ ಮಲೆನಾಡು ಭಾಗದಲ್ಲಿ ಮಾನವ–ಕಾಡುಪ್ರಾಣಿಗಳ ಸಂಘರ್ಷ ಮಿತಿಮೀರಿದೆ. ಮಾನವ ಪ್ರಾಣಹಾನಿ ಜತೆಗೆ ಬೆಳೆನಷ್ಟ ಉಂಟಾಗುತ್ತಿದ್ದು, ಕೂಡಲೇ ಸರಕಾರ ಇದಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳದಿದ್ದರೆ ಜಿಲ್ಲೆಯಲ್ಲಿ ತೀವ್ರತರದ ಹೋರಾಟ ರೂಪಿಸುವುದಾಗಿ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಗ್ರೀನ್ ಆರ್ಮಿ ಇಂಡಿಯಾ ಕಾರ್ಯಾಧ್ಯಕ್ಷ ಬಿ.ಸಿ.ದಯಾಕರ ಎಚ್ಚರಿಸಿದರು.

ಅವರು ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಮಲೆನಾಡಿನಲ್ಲಿ ಕಾಡಾನೆ ದಾಳಿಯಿಂದ ಜನ ಪ್ರಾಣ ಕಳೆದುಕೊಳ್ಳುತ್ತಿದ್ದಾರೆ. ದಿನನಿತ್ಯ ಭೀತಿಯಿಂದ ಜೀವನ ನಡೆಸುವಂತಾಗಿದೆ. ಆನೆಗಳು ದಾಂಗುಡಿ ಇಟ್ಟು ಕಾಫಿ ತೋಟವೇ ನಾಶವಾಗುತ್ತಿದೆ. ಈ ಸಮಸ್ಯೆಗೆ ಪರಿಹಾರ ಹುಡುಕಬೇಕಾದ ಅರಣ್ಯ ಅಧಿಕಾರಿಗಳು ಆನೆ ಕಾಯಲು ಆನೆ ಕಾರ್ಯಪಡೆ ಹುಡುಗರನ್ನು ಬಿಟ್ಟು ಇವರು ಎಸಿ ಕೊಠಡಿಯಲ್ಲಿ ಕುಳಿತಿದ್ದಾರೆ ಎಂದು ಆರೋಪಿಸಿದರು.

ಅರಣ್ಯ ಅಧಿಕಾರಿಗಳು ವಾಣಿಜ್ಯ ದೃಷ್ಟಿಯಿಂದ ಅಕೇಶಿಯಾ, ಸಾಗುವಾನಿ, ನೀಲಗಿರಿ ಮತ್ತಿತರೆ ಮರಗಳನ್ನು ಕಾಡಿನಲ್ಲಿ ಯತೇಚ್ಛವಾಗಿ ಬೆಳೆಸಿದ್ದು, ಆನೆಗಳ ಆಹಾರವಾಗಿರುವ ಬಾಳೆ,

ಹಲಸು, ಮಾವು, ಹೆಬ್ಬಲಸು, ವಾಟೆಬಿದಿರು ಮತ್ತಿತರೆ ಹುಲ್ಲು ಬೆಳೆಗಳನ್ನು ಇವರು ಕಾಡಿನಲ್ಲಿ ಬೆಳೆದಿಲ್ಲ. ಮಾನವ ವಾಸಿಸುವ ಕಡೆ ಇಂತಹ ಬೆಳೆಗಳು ಹೇರಳವಾಗಿ ಸಿಗುತ್ತಿರುವುದರಿಂದ ಅವು ಜನವಸತಿ ಪ್ರದೇಶಕ್ಕೆ ಲಗ್ಗೆ ಇಟ್ಟು ಪ್ರಾಣಹಾನಿ ಜತೆಗೆ ಬೆಳೆಹಾನಿಯನ್ನೂ ಮಾಡುತ್ತಿವೆ ಎಂದು ಹೇಳಿದರು.

ಆನೆಗಳನ್ನು ತಕ್ಷಣ ಕಾಡಿಗೆ ಸೇರಿಸಲು ಆನೆ ಕಾರ್ಯಪಡೆ ಹುಡುಗರ ಸಂಖ್ಯೆ ಹೆಚ್ಚಿಸಬೇಕು. ಫೋರ್‌ವ್ಹೀಲ್ ಜೀಪ್ ವ್ಯವಸ್ಥೆ ಮಾಡುವುದು, ಬ್ಯಾರಿಕೇಡ್, ಟೆಂಟಿಕಲ್ ಬೇಲಿ ಮತ್ತು ಆನೆ ಕಂದಕಗಳನ್ನು ದುರಸ್ತಿ ಗೊಳಿಸುವುದು, ಭತ್ತದ ಗದ್ದೆಗಳನ್ನು ಪ್ರತಿ ವರ್ಷ ಹಾನಿ ಮಾಡುತ್ತಿದ್ದು ಭತ್ತ ಬೆಳೆಯುವ ರೈತರಿಗೆ 25 ಸಾವಿರ ಪ್ರೋತ್ಸಾಹಧನ ನೀಡಬೇಕು. ಆನೆದಾಳಿಯಿಂದ ಜನಸಾಮಾನ್ಯರ ಪ್ರಾಣ ಹಾನಿಯಾದಲ್ಲಿ 30 ಲಕ್ಷ ರೂ. ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ಮಲೆನಾಡಿನಲ್ಲಿ ಮಳೆ ಹೆಚ್ಚಾಗಿ ಬೆಳೆ ಹಾನಿಯಾಗಿದ್ದು ಕೂಡಲೇ ಸರಕಾರ ಸಮೀಕ್ಷೆ ನಡೆಸಿ ಪರಿಹಾರ ಘೋಷಿಸಬೇಕು. ಜಿಲ್ಲೆಯ ಕಂದಾಯ ಮತ್ತು ಡೀಮ್ಡ್ ಫಾರೆಸ್ಟ್, 4(1) ಅಧಿಸೂಚನೆ ಈ ಎಲ್ಲ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕು. ಸರ್ಫೆಸಿ ಕಾಯಿದೆಯನ್ನು ನಮ್ಮ ರಾಜ್ಯದಿಂದ ತೆಗೆದುಹಾಕಬೇಕು ಇದಕ್ಕೆ ರಾಜಕಾರಣಿಗಳು ಇಚ್ಛಾಶಕ್ತಿ ತೋರಬೇಕು ಹಾಗೂ ಜಿಲ್ಲೆಯ ಎಲ್ಲ ರಸ್ತೆಗಳು ಗುಂಡಿ ಬಿದ್ದಿದ್ದು ಕೂಡಲೇ ಅಭಿವೃದ್ಧಿಪಡಿಸಬೇಕು ಎಂದು ಆಗ್ರಹಿಸಿದರು. ಈ ಎಲ್ಲ ಸಮಸ್ಯೆಗಳನ್ನು ಸರಕಾರ ಗಂಭೀರವಾಗಿ ಪರಿಗಣಿಸಿ ಪರಿಹರಿಸಬೇಕು. ಇಲ್ಲದಿದ್ದರೆ ಸರಕಾರವನ್ನು ಬಡಿದೆಬ್ಬಿಸಲು ತೀವ್ರತರದ ನಿಶಾನೆ ಮತ್ತು ಬ್ಯಾಂಡ್‌ಸೆಟ್ ಚಳವಳಿ ಮಾಡಬೇಕಾಗುತ್ತದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ರೈತ ಮುಖಂಡರಾದ ರಮೇಶ್‌ಗೌಡ, ತುಳಸೇಗೌಡ, ಸುಧೀರ್‌ಗೌಡ, ಬಸವರಾಜು ಇದ್ದರು.

ವಿಧಾನಸಭೆಯಲ್ಲಿ ಬೀದಿ ನಾಯಿಗಳ ಕಾಟದ ಬಗ್ಗೆ ಬಿಸಿಬಿಸಿ ಚರ್ಚೆ: ರಾಜ್ಯದಲ್ಲೂ ಸುಪ್ರೀಂ ಕೋರ್ಟ್ ನಿರ್ದೇಶನ ಪಾಲಿಸುವಂತೆ ಪ್ರತಿಪಕ್ಷಗಳ ಆಗ್ರಹ

ಬೆಂಗಳೂರು: ರಾಜ್ಯದಲ್ಲಿ ಬೀದಿ ನಾಯಿಗಳ ಕಾಟದ ಬಗ್ಗೆ ಬುಧವಾರ ವಿಧಾನಸಭೆ ಅಧಿವೇಶನದಲ

ಬಿತ್ತನೆ ಬೀಜ ಮಾರಾಟ ಕೇಂದ್ರಗಳಲ್ಲಿ ದರಪಟ್ಟಿ ಪ್ರದರ್ಶಿಸಲು : ಎಡಿಸಿ ಸೂಚನೆ

ತುಮಕೂರು : ರೈತರ ಅನುಕೂಲಕ್ಕಾಗಿ ಬಿತ್ತನೆ ಬೀಜ ಹಾಗೂ ಕೃಷಿ ಉಪಕರಣಗಳ ದರಪಟ್ಟಿಯನ್ನು ಜಿಲ್ಲೆಯ ಎಲ್ಲಾ ರೈತ ಸಂಪರ್ಕ ಕೇಂದ್ರ ಮತ್ತು ಬೀಜ ಮಾರಾಟ ಕೇಂದ್ರಗಳಲ್ಲಿ ಕಡ್ಡಾಯವಾಗಿ ಪ್ರದರ್ಶಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸೋಮವಾರ ಸಂಜೆ ಜಿಲ್ಲಾಧಿಕಾರಿ ಕಚೇರಿ ನ್ಯಾಯಿಕ ಸಭಾಂಗಣದಲ್ಲಿ ಮುಂಗಾರು ಹಂಗಾಮಿಗಾಗಿ ಬಿತ್ತನೆ ಬೀಜ ಮತ್ತು ರಸಗೊಬ್ಬರಗಳ ವಿತರಣೆ, ದಾಸ್ತಾನಿಗೆ ಸಂಬಂಧಿಸಿದಂತೆ ಪೂರ್ವಭಾವಿ ಸಭೆ ನಡೆಸಿ ಮಾತನಾಡಿದ ಅವರು ಜಿಲ್ಲೆಯ ಎಲ್ಲಾ ರೈತ ಸಂಪರ್ಕ ಕೇಂದ್ರಗಳಲ್ಲಿ ಬಿತ್ತನೆ ಬೀಜಗಳನ್ನು ಸರ್ಕಾರ ನಿಗಧಿಪಡಿಸಿದ ದರದಲ್ಲೇ ಮಾರಾಟ ಮಾಡಬೇಕು. ರೈತರಿಗೆ ಅಗತ್ಯ ಬಿತ್ತನೆ ಬೀಜಗಳು ಸುಲಭವಾಗಿ ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು. ಬಿತ್ತನೆ ಬೀಜ ಮಾರಾಟ ಕೇಂದ್ರಗಳಲ್ಲಿ ಬೀಜಗಳ ಕೊರತೆಯಾಗದಂತೆ ಕ್ರಮ ಕೈಗೊಳ್ಳಬೇಕೆಂದು ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಮೇ 20 ರಿಂದ ಬಿತ್ತನೆ ಬೀಜಗಳ ವಿತರಣೆ ಪ್ರಾರಂಭಿಸಲಾಗುತ್ತಿದ್ದು, ರೈತರಿಗೆ ಗುಣಮಟ್ಟದ ಬೀಜ ಒದಗಿಸುವ ದೃಷ್ಟಿಯಿಂದ ವಿತರಣೆಗೆ ಮುನ್ನ ಪ್ರತಿಯೊಂದು ಕೇಂದ್ರದಲ್ಲಿಯೂ ಬೀಜದ ತಳಿ ಹಾಗೂ ಪ್ರತಿ ಲಾಟ್‌ನಿಂದ ಬಿತ್ತನೆ ಬೀಜಗಳ ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೆ ಒಳಪಡಿಸಿ ಗುಣಮಟ್ಟವನ್ನು ಖಾತ್ರಿ ಪಡಿಸಿಕೊಂಡ ನಂತರ ವಿತರಣೆ ಕಾರ್ಯ ಕೈಗೊಳ್ಳಬೇಕು ಎಂದು ತಿಳಿಸಿದರು.

ಕೃಷಿ ಇಲಾಖೆಯ ಜಂಟಿ ನಿರ್ದೇಶಕ ರಮೇಶ್ ಮಾತನಾಡಿ, ಬಿತ್ತನೆ ಬೀಜ ಮಾರಾಟ ಮಾಡಲು ಜಿಲ್ಲೆಯಲ್ಲಿ 50 ರೈತ ಸಂಪರ್ಕ ಕೇಂದ್ರಗಳೊಂದಿಗೆ ಗುಬ್ಬಿ ತಾಲೂಕಿನ ಚೇಳೂರು; ಮಧುಗಿರಿ ತಾಲ್ಲೂಕು ಕಸಬಾ ಹಾಗೂ ಕೊಡಿಗೇನಹಳ್ಳಿ; ಪಾವಗಡ ತಾಲ್ಲೂಕು ಕಸಬಾ ಎಪಿಎಂಸಿ, ನಾಗಲಮಡಿಕೆ, ವೈ.ಎನ್.ಹೊಸಕೋಟೆ, ಲಿಂಗದಹಳ್ಳಿ, ಮಂಗಳವಾಡ; ಶಿರಾ ಎಪಿಎಂಸಿ, ತಾವರೆಕೆರೆ, ಪಟ್ಟನಾಯಕನಹಳ್ಳಿ, ಹುಲಿಕುಂಟೆ ಸೇರಿ ಒಟ್ಟು 12 ಹೆಚ್ಚುವರಿ ಮಾರಾಟ ಕೇಂದ್ರಗಳನ್ನು ತೆರೆಯಲಾಗುವುದು ಎಂದು ತಿಳಿಸಿದರು.

ರೈತ ಮುಖಂಡ ಆರಾಧ್ಯ ಮಾತನಾಡುತ್ತಾ, ಖಾಸಗಿ ರಸಗೊಬ್ಬರ ಮಾರಾಟ ಕೇಂದ್ರಗಳಲ್ಲಿ ಸರ್ಕಾರ ನಿಗಧಿಪಡಿಸಿದ ದರಕ್ಕಿಂತ ಹೆಚ್ಚಿನ ದರದಲ್ಲಿ ರಸಗೊಬ್ಬರವನ್ನು ಮಾರಾಟ ಮಾಡಲಾಗುತ್ತಿದೆ. ಜೊತೆಗೆ ರೈತರಿಗೆ ಬ್ಯಾಂಕುಗಳಲ್ಲಿ ತ್ವರಿತವಾಗಿ ಸಾಲ ಲಭ್ಯವಾಗದ ಕಾರಣ ಅವರು ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಮೊರೆ ಹೋಗಬೇಕಾದ ಪರಿಸ್ಥಿತಿ ಉಂಟಾಗುತ್ತಿದೆ. ರೈತರ ಸಮಸ್ಯೆಗಳನ್ನು ಸೂಕ್ಷ್ಮವಾಗಿ ಪರಿಗಣಿಸಿ ತಕ್ಷಣವೇ ಸೂಕ್ತ ಕ್ರಮ ಕೈಗೊಳ್ಳುವಂತೆ ಕೃಷಿ ಇಲಾಖೆಯ ಅಧಿಕಾರಿಗಳಲ್ಲಿ ಮನವಿ ಮಾಡಿದರು.

ಸಭೆಯಲ್ಲಿ ತೋಟಗಾರಿಕೆ ಇಲಾಖೆ ಉಪ ನಿರ್ದೇಶಕ ಶಾರದಮ್ಮ, ತುಮಕೂರು ಉಪ ಕೃಷಿ ನಿರ್ದೇಶಕ ಹುಲಿರಾಜ್, ಮಧುಗಿರಿ ಉಪ ಕೃಷಿ ನಿರ್ದೇಶಕ ಚಂದ್ರಕುಮಾರ್ ಎಚ್.ಎಲ್, ಸಹಾಯಕ ಕೃಷಿ ನಿರ್ದೇಶಕರು ಹಾಗೂ ವಿವಿಧ ರೈತ ಮುಖಂಡರು ಉಪಸ್ಥಿತರಿದ್ದರು.

ರೈತರಿಗೆ ಕಳಪೆ ಮತ್ತು ಕೆಳಮಟ್ಟದ ಪರಿಕರಗಳನ್ನು ಮಾರಾಟ ಮಾಡಬಾರದು

ಮೊಳಕಾಲ್ಮೂರು. ಪ್ರಸಕ್ತ ಸಾಲಿನಲ್ಲಿ ಉತ್ತಮ ಮುಂಗಾರು ಮಳೆ ನಿರೀಕ್ಷೆ ಇದ್ದು, ಯಾವುದೇ ಕಾರಣಕ್ಕೂ ರೈತರಿಗೆ ಕಳಪೆ ಮತ್ತು ಕೆಳಮಟ್ಟದ ಪರಿಕರಗಳನ್ನು ಮಾರಾಟ ಮಾಡಬಾರದೆಂದು ಸಹಾಯಕ ಕೃಷಿ ನಿರ್ದೇಶಕ ಎನ್.ವಿ.ಪ್ರಕಾಶ್ ತಿಳಿಸಿದರು.

ಪಟ್ಟಣದ ಲಕ್ಷ್ಮಿ ವೆಂಕಟೇಶ್ವರ ಅಗ್ರಿ ಮಾರ್ಟ್ ನ ಸಭಾಂಗಣದಲ್ಲಿ ಜಿ.ಪಂ. ಚಿತ್ರದುರ್ಗ, ತಾಲೂಕು ಪಂಚಾಯಿತಿ ಹಾಗೂ ಸಹಾಯಕ ಕೃಷಿ ಇಲಾಖೆ ಮೊಳಕಾಲ್ಮೂರು ಇವರೆ ಸಹಯೋಗದೊಂದಿಗೆ ತಾಲೂಕಿನ ಕೃಷಿ ಪರಿಕರ ಮಾರಾಟಗಾರರಿಗೆ "ದಾಖಲಾತಿ ನಿರ್ವಹಣೆ ಹಾಗೂ ಸುರಕ್ಷಿತ ಕೀಟನಾಶಕ ಬಳಕೆ" ಕುರಿತು ಹಮ್ಮಿಕೊಂಡಿದ್ದ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕೃಷಿ ಪರಿಕರ ಮಾರಾಟಗಾರರು ರೈತರಿಗೆ ಸಕಾಲಕ್ಕೆ ರಸಗೊಬ್ಬರ, ಕೃಷಿ ಪರಿಕರಗಳನ್ನು ಒದಗಿಸಬೇಕಾಗಿದೆ. ಕೀಟನಾಶಕ ಕಾಯಿದೆಯಡಿ ನೋಂದಣಿಯಾಗದ ಜೈವಿಕ ಕೀಟನಾಶಕಗಳ ಹೆಸರಿನಡಿ ವಿವಿಧ ಕೀಟನಾಶಕಗಳನ್ನು ಮಿಶ್ರಣಮಾಡಿ ಮಾರಾಟ ಮಾಡುತ್ತಿರುವವರ ವಿರುದ್ಧ ಸೂಕ್ತ ಕ್ರಮ ಜರುಗಿಸುವುದು. ಪಿ.ಒ.ಎಸ್. ಮಿಷನ್ ಮುಖಾಂತರ ವಹಿವಾಟು ನಡೆಸಬೇಕು. ರೈತರಿಗೆ ಅಧಿಕೃತ ರಶೀದಿ ಕೊಡಬೇಕು, ದಾಸ್ತಾನು ವಿವರ ವಾರಕ್ಕೊಮ್ಮೆ ವರದಿ ಸಲ್ಲಿಸಬೇಕು. ಕೃಷಿ ಪರಿಕರ ಮಾರಾಟಗಾರರ ನೊಂದಣಿ ಕಡ್ಡಾಯವಾಗಿ ನವೀಕರಣಗೊಳಿಸಿ ಕೊಂಡಿರಬೇಕೆಂದು ತಿಳಿಸಿದರು.

ಚಿತ್ರದುರ್ಗದ ಜಂಟಿ ಕೃಷಿ ನಿರ್ದೇಶಕರ ಕಛೇರಿಯ ಸಹಾಯಕ ಕೃಷಿ ನಿರ್ದೇಶಕರು(ಜಾರಿದಳ) ಸಂಕಾಳ ಮಲ್ಲನಗೌಡ ಮಾತನಾಡಿ ತಾಲೂಕಿನ ಕೃಷಿ ಪರಿಕರ ಮಾರಾಟಗಾರರು ಮಾರಾಟ ಮಾಡುವ ಅಧಿಕೃತ ಲೈಸನ್ಸ್ ಹೊಂದಿರುವುದು ಹಾಗು ಕಾಲ ಕಾಲಕ್ಕೆ ಮರು ನವೀಕರಣ ಮಾಡಿಕೊಳ್ಳವುದಕ್ಕೆ ಆದ್ಯತೆ ನೀಡಲು ತಿಳಿಸುತ್ತಾ, ತಪ್ಪಿದಲ್ಲಿ ತಮ್ಮ ಮಾರಾಟ ಮಳಿಗೆಯನ್ನು ತಕ್ಷಣದಿದಂದಲೆ ಸೀಜ್ ಮಾಡಲಾಗುವುದು, ರಸ ಗೊಬ್ಬರ ಮರಾಟಗಾರರು ಪಿ.ಓ.ಎಸ್. ಯಂತ್ರದ ಮೂಲಕವೇ ದಾಸ್ತಾನು ಪಡೆದು ಮಾರಾಟಮಾಡಬೇಕು, ಮಾರಾಟ ಮಾಡಿದ ಕೃಷಿ ಪರಿಕರಗಳಿಗೆ ಅಧಿಕೃತ ರಶೀದಿ ನೀಡಬೇಕು. ಕಳಪೆ ಗುಣಮಟ್ಟದ ಅಥವಾ ಅವಧಿ ಮೀರಿದ ಕೃಷಿ ಪರಿಕರಗಳನ್ನು ಮಾಡಿದ್ದು ಕಂಡುಬಂದಲ್ಲಿ ಕೃಷಿ ಪರಿಕರಗಳ ಕೃತಕ ಅಭಾವ ಸೃಷ್ಟಿಸಿದಲ್ಲಿ ನಿರ್ದಾಕ್ಷಣ್ಯವಾಗಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸುತ್ತಾ, ಈ ವರ್ಷ ಉತ್ತಮ ಮುಂಗಾರು ಮಳೆ ನಿರೀಕ್ಷೆ ಇದ್ದು, ರೈತರಿಗೆ ಸರಿಯಾದ ಸಮಯಕ್ಕೆ ರಸಗೊಬ್ಬರ, ಕೃಷಿ ಪರಿಕರಗಳನ್ನು ಒದಗಿಸಲು ಎಲ್ಲಾ ಅಧಿಕೃತ ಮಾರಾಟಗಾರರಿಗೆ ತಿಳಿಸಿದರು.

ಚಳ್ಳಕೆರೆ ವಿಭಾಗದ ಉಪ ಕೃಷಿ ನಿರ್ದೇಶಕ –2, ಬಿ.ಎನ್.ಪ್ರಭಾಕರ್ ಮಾತನಾಡಿ ಅಲ್ಪ ಪ್ರಮಾಣದ ಮೊಳಕಾಲ್ಮೂರು ಮತ್ತು ಚಳ್ಳಕೆರೆ ತಾಲೂಕುಗಳಲ್ಲಿ ಬಿದ್ದಂತ ಮಳೆಯನ್ನು ಸದ್ವಳಕೆ ಮಾಡಿಕೊಂಡು ಆ ಸಂದರ್ಭದಲ್ಲಿಯೇ ಬಿತ್ತನೆ ಮಾಡಬೇಕಾಗಿದೆ. ರೈತರಿಗೆ ಕೃಷಿ ಪರಿಕರಗಳನ್ನು ತಕ್ಷಣವೇ ಸಿಗುವಂತಾಗಬೇಕಾಗಿದೆ. ಮುಂಚಿತವಾಗಿ ದಾಸ್ತಾನು ಮಾಡಿದ ಪರಿಕರಗಳಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡುವುದು ಸಂಸ್ಕೃತಿಯಲ್ಲ. ಪ್ರತಿ ಸಂದರ್ಭದಲ್ಲಿ ಇತಿ ಮಿತಿಯೊಳಗೆ ರೈತರಿಗೆ ಶೋಷಣೆ ಮಾಡದೆ ವ್ಯವಹಾರವು ದೂರದೃಷ್ಟಿ ಹೊಂದಿರಬೇಕು. ಮಾರಾಟಗಾರರು ಅಧಿಕೃತ ಪರವಾನಗಿ ಹಾಗೂ ಧರ ಪಟ್ಟಿ ಕಾಣುವಂತೆ ಪಾರದರ್ಶಕವಾಗಿ ಪ್ರದರ್ಶಿಸಬೇಕು . ತಾಲೂಕಿನಲ್ಲಿ 64 ಡೀಲರ್ಸ್ ಗಳಿದ್ದು, ಈ ಜೊತೆಗೆ ಸೂಡೋ ಡೀಲರ್ಸ್ ಗಳಿದ್ದು, ರೈತರಿಗೆ ಸರಿಯಾದ ಸಮಯಕ್ಕೆ ರಸಗೊಬ್ಬರ, ಕೃಷಿ ಪರಿಕರಗಳನ್ನು ಒದಗಿಸಬೇಕೆಂದು ತಿಳಿಸಿದರು.

ಧ್ವಜಾರೋಹಣ ನೆರವೇರಿಸುವ ಮೂಲಕ ಸಮ್ಮೇಳನಕ್ಕೆ ಚಾಲನೆ

(1ನೇ ಪುಟದಿಂದ)

ನಾಡ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಕಸಾಪ ಮಹಿಳಾ ಘಟಕದ ಅಧ್ಯಕ್ಷೆ ವಿಜಯಲಕ್ಷ್ಮೀ, ನಾಡು–ನುಡಿಯ ಜಾಗೃತಿ ಕೆಲಸ ನಿರಂತರವಾಗಿ ನಡೆದಿದೆ. ಕನ್ನಡದ ರಥ ಸಂಚರಿಸಿದ ಬೆನ್ನಲ್ಲೇ ಸಾಹಿತ್ಯ ಸಮ್ಮೇಳನ ನಡೆಯುತ್ತಿದೆ. ಒಟ್ಟಾರೆ ಕನ್ನಡ ಜಾಗೃತಿಯ ವಾತಾವರಣ ಸಂತಸ ಮೂಡುತ್ತಿದೆ ಎಂದರು.

ಈ ಸಂದರ್ಭದಲ್ಲಿ ಕಸಾಪ ತಾಲ್ಲೂಕು ಅಧ್ಯಕ್ಷ ಮಾವಿನಕೆರೆ ದಯಾನಂದ್, ನಿಕಟಪೂರ್ವ ಅಧ್ಯಕ್ಷ ಬಿಸಲೇಹಳ್ಳಿ ಸೋಮಶೇಖರ್, ಆಹಾರ ಸಮಿತಿ ಮುಖ್ಯಸ್ಥ ಗುರುವೇಶ್, ಕಸಾಪ ಸದಸ್ಯರಾದ ರೂಪಾ ನಾಯ್ಕ್, ವೀಣಾ ಮಲ್ಲಿಕಾರ್ಜುನ್, ಆಶಾ, ಜಯಶೀಲಾ, ಜಯಂತಿ ಶಿವಾಜಿರಾವ್, ಸುಧೀರ್, ಪ್ರದೀಪ್ ಮತ್ತಿತರರು ಹಾಜರಿದ್ದರು.

ಬಾಲ್ಯ ವಿವಾಹ ಸಂತ್ರಸ್ತೆಗೆ ವಿದ್ಯಾರ್ಥಿವೇತನ ನೀಡುವಂತೆ ಸಾಮಾಜಿಕ ಕಾರ್ಯಕರ್ತರ ಒತ್ತಾಯ

ಬೆಂಗಳೂರು: ಬಾಲ್ಯ ವಿವಾಹ ವಿರೋಧಿಸಿದ ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ರೆಡ್ಡಿಹಳ್ಳಿ ಗೊಲ್ಲರಹಟ್ಟಿಯ ಅಪ್ರಾಪ್ತ ಬಾಲಕಿಯನ್ನು ಸನ್ಮಾನಿಸುವಂತೆ ಮಕ್ಕಳ ಹಕ್ಕುಗಳ ಕಾರ್ಯಕರ್ತ ನಾಗಸಿಂಹ ಜಿ ರಾವ್ ಗೃಹ ಸಚಿವರಿಗೆ

ಪತ್ರ ಬರೆದಿದ್ದಾರೆ.

ಆಕೆಯ ಧೈರ್ಯವನ್ನು ಗುರುತಿಸಿ, ಆಕೆಯ ಭವಿಷ್ಯವನ್ನು ಬೆಂಬಲಿಸಲು ಆರ್ಥಿಕ ನೆರವು ಅಥವಾ ವಿದ್ಯಾರ್ಥಿವೇತನವನ್ನು ನೀಡುವಂತೆ ರಾವ್ ಸರ್ಕಾರಕ್ಕೆ ಮನವಿ ಮಾಡಿದ್ದಾರೆ. ಗೃಹ ಸಚಿವರಿಗೆ ಬರೆದ ಪತ್ರದಲ್ಲಿ, ವಿವಾಹವನ್ನು ಆಯೋಜಿಸುವಲ್ಲಿ ತೊಡಗಿರುವವರ ವಿರುದ್ಧ ತಕ್ಷಣ ಕಾನೂನು ಕ್ರಮ ಕೈಗೊಳ್ಳಬೇಕು, ಬಾಲಕಿಯನ್ನು ಆರೈಕೆ ಮತ್ತು ರಕ್ಷಣೆ ಅಗತ್ಯವಿರುವ ಮಗುವೆಂದು ಗುರುತಿಸಬೇಕು ಮತ್ತು ಆಕೆಯ ಶಿಕ್ಷಣ, ಮಾನಸಿಕ ಆರೋಗ್ಯ ಮತ್ತು ಪುನರ್ವಸತಿಗೆ ದೀರ್ಘಾವಧಿಯ ಬೆಂಬಲ ನೀಡಬೇಕು ಎಂದು ರಾವ್ ಒತ್ತಾಯಿಸಿದ್ದಾರೆ. ಬಾಲ ನ್ಯಾಯ (ಮಕ್ಕಳ ಆರೈಕೆ ಮತ್ತು ರಕ್ಷಣೆ) ಕಾಯ್ದೆ, 2015 ರ ಅಡಿಯಲ್ಲಿ ಆಕೆಯನ್ನು "ಆರೈಕೆ ಮತ್ತು ರಕ್ಷಣೆಯ ಅಗತ್ಯವಿರುವ ಮಗು" ಎಂದು ಪರಿಗಣಿಸಬೇಕು ಮತ್ತು ಮಕ್ಕಳ ಕಲ್ಯಾಣ ಸಮಿತಿ (ಸಿಡಬ್ಲ್ಯೂಸಿ) ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮೂಲಕ ಸಮಾಲೋಚನೆ, ಪುನರ್ವಸತಿ ಮತ್ತು ಸಾಮಾಜಿಕ ಪುನರ್ವಸತಿ ಒದಗಿಸಬೇಕು ಎಂದಿದ್ದಾರೆ.

'ಸೌಲಭ್ಯ ಪಡೆಯಲು ಕಾನೂನು ಅರಿವು ಅಗತ್ಯ'

ಸಿವಿಲ್ ನ್ಯಾಯಾಧೀಶೆ ಬಿ.ಸುಜಾತಾ ಸುವರ್ಣ

ಹಿರಿಯೂರು: ಕಾರ್ಮಿಕರಿಗಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಜಾರಿಗೊಳಿಸಿರುವ ಸೌಲಭ್ಯಗಳನ್ನು ಪಡೆಯಲು ಕಾನೂನು ಅರಿವು ಅತ್ಯಗತ್ಯ ಎಂದು ಜೆಎಂಎಫ್ ಸಿ ನ್ಯಾಯಾಲಯದ ಹಿರಿಯ ಸಿವಿಲ್ ನ್ಯಾಯಾಧೀಶರಾದ ಬಿ. ಸುಜಾತಾ ಸುವರ್ಣ ಹೇಳಿದರು.

ನಗರದ ನ್ಯಾಯಾಲಯದ ಆವರಣದಲ್ಲಿ ಮಂಗಳವಾದ ತಾಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ, ಯೋಜನಾ ಹಾಗೂ ಕಾರ್ಮಿಕ ಇಲಾಖೆ ನೇತೃತ್ವದಲ್ಲಿ ಕಾರ್ಮಿಕರ ದಿನಾಚರಣೆ ಪ್ರಯುಕ್ತ ಹಮ್ಮಿಕೊಂಡಿದ್ದ ಕಾನೂನು ವು–ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ನೂನು ಅರಿವು ಇದ್ದಾಗ ಮಾತ್ರವೇ ತಮಗೆ ಏನೇನು ಸೌಲಭ್ಯಗಳಿವೆ ಎಂದು ತಿಳಿದುಕೊಳ್ಳಲು ಸಾಧ್ಯ. ಪ್ರತಿಯೊಬ್ಬರೂ ಏನೂನು ಉಲ್ಲಂಘನೆಯಾಗದಂತೆ ನಡೆದುಕೊಳ್ಳಬೇಕು. ಕಾರ್ಮಿಕರ ಹಕ್ಕು ಮತ್ತು ಸೌಲಭ್ಯಗಳು ಅವರಿಗೆ ಉಪುವಂತಾಗಲು ಕಾನೂನಿನ ಅ?ವು ಇಂದು ಹೆಚ್ಚಾಗಿದೆ. ದೇಶದ ಅಭಿವೃದ್ಧಿ ಪ್ರತಿಯೊಬ್ಬರ ಕರ್ತವ್ಯ. ಕಾರ್ಮಿಕರು ಮೈಕೆಲಸದ ಜತೆಗೆ ಉತ್ತಮ ಅರೋಗ್ಯ ಉಪಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಕಾನೂನಿನ ಅರಿವು ಅವಶ್ಯಕ. ಅದರಲ್ಲಿಯೂ ನಿತ್ಯ ಶ್ರಮವಹಿಸಿ ದುಡಿಯುವ ಕಾರ್ಮಿಕರಿಗೆ ಕಾನೂನಿನ ತಿಳಿವಳಿಕೆ ಅವಶ್ಯಕ. ಕಾರ್ಮಿಕರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವತ್ತ ಹೆಚ್ಚಿನ ಗಮನ ಕೊಡಬೇಕು' ಎಂದು ಅಧ್ಯಕ್ಷತೆ ವಹಿಸಿದ್ದ ವಕೀಲರ ಸಂಘದ ಅಧ್ಯಕ್ಷ ರಂಗೇನಹಳ್ಳಿ ರಾಮಚಂದ್ರಪ್ಪ ಸೂಚಿಸಿದರು.

'ಕಾರ್ಮಿಕರ ಹಿತದೃಷ್ಟಿಯಿಂದ ಸರ್ಕಾರ ಕಾರ್ಮಿಕರಿಗೆಂದು ಪ್ರತ್ಯೇಕ ಇಲಾಖೆ ಸ್ಥಾಪಿಸಿದೆ. ಕಾರ್ಮಿಕರ ಮೇಲಾಗುತ್ತಿರುವ ದೌರ್ಜನ್ಯ, ಶೋಷಣೆ ತಡೆಯುವುದು ಇಲಾಖೆಯ ಆದ್ಯ ಕರ್ತವ್ಯ. ಇಲಾಖೆ ಕಾರ್ಮಿಕರಿಗೆ ನೂರಾರು ಸೌಲಭ್ಯಗಳನ್ನು ಒದಗಿಸುತ್ತಿದ್ದು, ಅವುಗಳ ಸದ್ವಳಕೆ ಮಾಡಿಕೊಳ್ಳಬೇಕು' ಎಂದು ಕಾರ್ಮಿಕ ನಿರೀಕ್ಷಕ ಅಲ್ಲಾಭಕ್ ಮನವಿ ಮಾಡಿದರು.

ವಕೀಲ ಎಸ್. ಶೇಷಾದ್ರಿ ಉಪನ್ಯಾಸ ನೀಡಿದರು. ಸಹಾಯಕ ಸರ್ಕಾರಿ ಅಭಿಯೋಜಕ ಆರ್.ಜಿ. ಚಿದಾನಂದಪ್ಪ, ವಕೀಲರ ಸಂಘದ ಉಪಾಧ್ಯಕ್ಷೆ ಎಚ್. ಬೀನಾರಾಣಿ ಹಾಗೂ ಕಾರ್ಮಿಕರು ಪಾಲ್ಗೊಂಡಿದ್ದರು.

ಹೆದ್ದಾರಿ ನಿರ್ಮಾಣಕ್ಕೆ ಜಮೀನುಗಳ ಭೂ ಸ್ವಾಧೀನಕ್ಕೆ ಸರ್ಕಾರ ದರ ನಿಗದಿಗೆ ಪರಿಹಾರ : ಜಿಲ್ಲಾಧಿಕಾರಿ

ಮೊಳಕಾಲ್ಮೂರು: ತಾಲೂಕಿನ ಗಡಿ ಗ್ರಾಮಗಳಾದ ಸಂತೇಗುಡ್ಡ–ಬಾಂಡ್ರಾವಿ ಇಂದ ಸಂಡೂರು ತಾಲೂಕಿಗೆ ಸಂಪರ್ಕ ಕಲ್ಪಿಸುವ 25 ಕೋಟಿ.ರೂ.ವೆಚ್ಚದಲ್ಲಿ ಹೆದ್ದಾರಿ ನಿರ್ಮಾಣ ಕಾರ್ಯದ ವ್ಯಾಪ್ತಿಗೆ ಒಳಪಡುವ ಜಮೀನುಗಳನ್ನು ಕಡಿಮೆ ಅವಧಿಯಲ್ಲಿ ರೈತರ ಒಪ್ಪಿಗೆಯಂತೆ ಸರ್ಕಾರಿ ಹಾಗೂ ಮಾರುಕಟ್ಟೆ ಧರ ನಿಗಧಿಗೊಳಿಸಿ ಪರಿಹಾರ ನೀಡಲಾಗುವುದೆಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

ತಾಲೂಕಿನ ರಾಂಪುರ ಗ್ರಾಮ ಪಂಚಾಯಿತಿ ಕಾರ್ಯಾಲಯದ ಸಭಾಂಗಣದಲ್ಲಿ ತಾಲೂಕಿನ ಸಂತೇಗುಡ್ಡ – ಬಾಂಡ್ರಾವಿ ಯಿಂದ ಸಂಡೂರು ತಾಲೂಕಿಗೆ ಸಂಪರ್ಕ ಕಲ್ಪಿಸುವ ಹೆದ್ದಾರಿ ನಿರ್ಮಾಣಕ್ಕೆ ಜಮೀನುಗಳ ಭೂ ಸ್ವಾಧೀನಕ್ಕೆ ಜಮೀನುಗಳ ಧರ ನಿಗಧಿಯ ಸಭೆಯಲ್ಲಿ ಮಾತನಾಡಿದರು.

ಹೆದ್ದಾರಿ ನಿರ್ಮಾಣ ಕಾಮಗಾರಿಗೆ ಈ ಭಾಗದ ರೈತರ ಜಮೀನಿನಲ್ಲಿ ಹಾದು ಹೋಗಲಿದ್ದು, ರೈತರ ಒಪ್ಪಿಗೆ ಪಡೆದು ಸೂಕ್ತ ಬೆಲೆ ನಿರ್ಧಾರ ಮಾಡಿ ಭೂ ಸ್ವಾಧೀನ ಮಾಡಿಕೊಂಡು ರಸ್ತೆ ನಿರ್ಮಾಣ ಮಾಡಲಾಗುವುದು. ಗಡಿಭಾಗದ ಈ ರಸ್ತೆಯು ಈ ಭಾಗದ ಸುಮಾರು 30 ರಿಂದ 40 ರೈತರ ಜಮೀನಿನಲ್ಲಿ ಹಾದು ಹೋಗುವುದರಿಂದ ರೈತರಿಗೆ ತಕ್ಷಣವೇ ಸೂಕ್ತ ಧರದೊಂದಿಗೆ ಪರಿಹಾರ ನೀಡಲಾಗುವುದು. ಈ ವ್ಯಾಪ್ತಿಯ ರೈತರ ಜಮೀನುಗಳನ್ನು ಭೂ ಸ್ವಾಧೀನ ಮಾಡಿಕೊಳ್ಳಲು ಸರ್ಕಾರಿ ಹಾಗೂ ಮಾರುಕಟ್ಟೆ ಧರವಿದ್ದು, ಈ ಎರಡನ್ನು ಹೋಲಿಕೆ ಮಾಡಿ ಇವುಗಳಲ್ಲಿ ಯಾವುದು ಹೆಚ್ಚಿನ ಧರವಿರುವುದನ್ನು ನಿಗಧಿ ಪಡಿಸಿ ಅದಕ್ಕೆ ದ್ವಿಗುಣಗೊಳಿಸಿ ಪರಿಹಾರ ನೀಡಲಾಗುವುದು. ಭೂ ಸ್ವಾಧೀನಕ್ಕೊಳಪಡುವ ಜಮೀನುಗಳ ವಿಸ್ತೀರ್ಣ ವನ್ನು ಅಳತೆ ಮಾಡಿ ನಿಗಧಿ ಪಡಿಸಿದ ಧರದಂತೆ ಪರಿಹಾರ ನೀಡಲಾಗುವುದು. ಒಂದು ವೇಳೆ ನಿಗಧಿಪಡಿಸಿದ ಧರಕ್ಕೆ ರೈತರು ಒಪ್ಪದಿದ್ದಲ್ಲಿ ಹೆಚ್ಚಿನ ಧರ ಬೇಕೆಂದಲ್ಲಿ ನಿಗಧಿಪಡಿಸಿದ ಧರದ ಪರಿಹಾರವನ್ನು ಪಡೆದು ನ್ಯಾಯಾಲಯದಲ್ಲಿ ಧಾವೆ ಹೂಡಿ ಹೆಚ್ಚಿನ ಪರಿಹಾರವನ್ನು ಪಡೆಯಬಹುದಾಗಿದೆ ಎಂದು ತಿಳಿಸಿದರು.

ಉಪ ವಿಭಾಗಾಧಿಕಾರಿ ಮಹಮದ್ ಜುಲಾನಿ ಮಾತನಾಡಿ ತಾಲೂಕಿನ ಗಡಿ ಗ್ರಾಮದಲ್ಲಿ ರಸ್ತೆ ನಿರ್ಮಾಣಕ್ಕೆ ಬಾಂಡ್ರಾವಿ ಗ್ರಾಮದ ಸ.ನಂ.1/1 ರ ಖುಷ್ಕಿ ಜಮೀನಿನಲ್ಲಿ ಒಂದುವರೆ ಗುಂಟೆ ಸ್ವಾಧೀನವಾಗುತ್ತಿದ್ದು, ವಹಿವಾಟಿನ ಧರ ಹೊರತುಪಡಿಸಿ ಎಕರೆಗೆ ಸು.2,63,120/ರೂ.ಇದ್ದು ಇದಕ್ಕೆ 10,017/ ರೂ.ಆಗಲಿದ್ದು ಇದಕ್ಕೆ ಮಾರುಕಟ್ಟೆ ಧರದ ಎರಡರಷ್ಟು 20,034/ರೂ ಆಗಲಿದ್ದು ಇದಕ್ಕೆ ಶೇ.100 ರಷ್ಟು ಸೇರಿಸಿದ್ದಲ

Bird Flu: ಮಾಂಸ, ಮೊಟ್ಟೆ ಚೆನ್ನಾಗಿ ಬೇಯಿಸಿ ತಿಂದರೆ ಸೋಂಕು ತಗುಲುವುದಿಲ್ಲ, ಜ್ವರದ ಲಕ್ಷಣ–ಮುಂಜಾಗ್ರತೆ ಬಗ್ಗೆ ಇಲ್ಲಿದೆ ಮಾಹಿತಿ.

ಬೆಂಗಳೂರು: ನೆರೆಯ ಆಂಧ್ರಪ್ರದೇಶ. ಮಹಾರಾಷ್ಟ್ರ ಮತ್ತು ಕರ್ನಾಟಕದ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಹಕ್ಕಿ ಜ್ವರ (ಊ5ಓ1) ಪ್ರಕರಣಗಳು ಕಂಡುಬಂದಿರುವ ಹಿನ್ನೆಲೆಯಲ್ಲಿ ಎಲ್ಲೆಡೆ ಕೋಳಿ ಮಾಂಸ ಹಾಗೂ ಮೊಟ್ಟೆಯ ಸೇವನೆಯ ಬಗ್ಗೆ ಆತಂಕ ಶುರುವಾಗಿದೆ.

ಬೆಂಗಳೂರು ನಗರ ಜಿಲ್ಲಾಧಿಕಾರಿ ಜಿ. ಜಗದೀಶ ಅವರು ಮಂಗಳವಾರ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಪರಿಸ್ಥಿತಿ ಅವಲೋಕನ ನಡೆಸಿದರು. ಈ ವೇಳೆ ಹಕ್ಕಿ ಜ್ವರ ಹರಡದಂತೆ ಎಲ್ಲಾ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳುವಂತೆ ಸೂಚನೆ ನೀಡಿದರು.

ಪಕ್ಷಿಗಳು ಅಥವಾ ಕೋಳಿಗಳ ಯಾವುದೇ ಅನುಮಾನಾಸ್ಪದ, ಅಸಹಜ ಅಥವಾ ಹಠಾತ್ ಸಾವು ಕಂಡುಬಂದರೆ, ಹತ್ತಿರದ ಪಶುವೈದ್ಯಕೀಯ ಇಲಾಖೆಗೆ ತಿಳಿಸಿ ಎಂದು ತಿಳಿಸಿದರು.

ಹಕ್ಕಿ ಜ್ವರ ಪತ್ತೆಯಾದ ಸ್ಥಳದಿಂದ 10 ಕಿ.ಮೀ ವ್ಯಾಪ್ತಿಯ ಸುತ್ತಲಿನ ನಿವಾಸಿಗಳು ಶೀತ, ಕೆಮ್ಮು, ಜ್ವರ, ತಲೆನೋವು, ಮೈ–ಕೈ ನೋವು, ಗಂಟಲು ನೋವು ಮತ್ತು ಇತರ ರೋಗಲಕ್ಷಣಗಳಿಂದ ಬಳಲುತ್ತಿದ್ದರೆ, ತಕ್ಷಣ ಹತ್ತಿರದ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಬೇಕು. ಗ್ರಾಮ ಪಂಚಾಯಿತಿಗಳಲ್ಲಿ ಹಕ್ಕಿ ಜ್ವರದ ಬಗ್ಗೆ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲು ಆರೋಗ್ಯ ಇಲಾಖೆಗೆ ಈಗಾಗಲೇ ಸೂಚನೆ ನೀಡಲಾಗಿದೆ ಎಂದು ಹೇಳಿದರು.

ಏನಿದು ಹಕ್ಕಿ ಜ್ವರ?

ಹಕ್ಕಿಜ್ವರ ಸಾಂಕ್ರಾಮಿಕ ರೋಗವಾಗಿದ್ದು, ಮುನ್ನೆಚ್ಚರಿಕೆ ವಹಿಸಿದರೆ ಸೋಂಕನ್ನು ತಡೆಯಬಹುದಾಗಿದೆ. ಹೀಗಾಗಿ ಕಾಯಿಲೆಯ ಲಕ್ಷಣಗಳು ಕೋಳಿಗಳಲ್ಲಿ ಕಾಣಿಸಿಕೊಂಡ

ಕೂಡಲೇ ಹತ್ತಿರದ ಮಾಹಿತಿ ಕೇಂದ್ರ ಅಥವಾ ಪಶು ವೈದ್ಯಕೀಯ ಸಂಸ್ಥೆಗೆ ಮಾಹಿತಿ ನೀಡಬೇಕು ಎಂದು ಆರೋಗ್ಯ ಇಲಾಖೆ ಸಾರ್ವಜನಿಕರಿಗೆ ಸೂಚಿಸಿದೆ.

ಹಕ್ಕಿಜ್ವರದ ಲಕ್ಷಣಗಳೇನು?

ಹಕ್ಕಿಜ್ವರದ ಲಕ್ಷಣಗಳು ಸಾಮಾನ್ಯವಾಗಿ ಎಚ್1ಎನ್1 ಜ್ವರದ ಲಕ್ಷಣಗಳಂತೆಯೇ ಇರುತ್ತದೆ. ಜ್ವರ, ಕೆಮ್ಮು, ಶೀತ, ತಲೆನೋವು, ಗಂಟಲು ಕೆರೆತ, ನೆಗಡಿ, ಸ್ನಾಯುಗಳಲ್ಲಿ ನೋವು, ಆಯಾಸ ಕಾಣಿಸಿಕೊಳ್ಳುತ್ತದೆ. ಕೆಲವೊಮ್ಮೆ ವಾಂತಿ ಮತ್ತು ಭೇದಿಯೂ ಆಗಬಹುದು. ಉಸಿರಾಟದಲ್ಲಿ ತೊಂದರೆಯೂ ಉಂಟಾಗಬಹುದು.

ಮುನ್ನೆಚ್ಚರಿಕಾ ಕ್ರಮಗಳೇನು?

ಹಕ್ಕಿಜ್ವರ ಪೀಡಿತ ಕೋಳಿಗಳು, ಪಕ್ಷಿಗಳು ಹಾಗೂ ಬಾತುಕೋಳಿಗಳ ಸಂಪರ್ಕಕ್ಕೆ ಬರದಂತೆ ಎಚ್ಚರ ವಹಿಸಬೇಕು.

ಹಕ್ಕಿಜ್ವರ ಪೀಡಿತ ಫಾರಂಗಳಿಗೆ ಭೇಟಿ ನೀಡಬಾರದು.

ಹಕ್ಕಿಜ್ವರ ಹರಡಿರುವ ಫಾರಂನ ಸಂಪರ್ಕಕ್ಕೆ ಬಂದಲ್ಲಿ ತಕ್ಷಣ ಕೈಕಾಲು, ಮುಖ ತೊಳೆದುಕೊಂಡು ಬಟ್ಟೆ ಬದಲಾಯಿಸಿಕೊಳ್ಳಬೇಕು. ಕನಿಷ್ಠ 15 ಸೆಕೆಂಡುಗಳ ಕಾಲವಾದರೂ ಸೋಪ್ ಮತ್ತು ನೀರಿನಿಂದ ಕೈಗಳನ್ನು ತೊಳೆಯಿರಿ,

ಒಂದು ವೇಳೆ ಜ್ವರದ ಲಕ್ಷಣ ಕಾಣಿಸಿದಲ್ಲಿ ತಕ್ಷಣ ವೈದ್ಯರನ್ನು ಕಾಣಬೇಕು.

ಸೋಂಕಿತ ಸ್ಥಳದಲ್ಲಿ ಯಾವುದೇ ವಸ್ತು ಮುಟ್ಟಿದರೂ ಕೈಯನ್ನು ಸ್ವಚ್ಛಗೊಳಿಸಬೇಕು.

ಹಕ್ಕಿಜ್ವರ ಪ್ರಕರಣಗಳು ವರದಿಯಾಗಿರುವ ಪ್ರದೇಶದ 3ರಿಂದ 10 ಕಿ.ಮೀ ವ್ಯಾಪ್ತಿಯ ಪ್ರದೇಶಗಳಲ್ಲಿ ಜ್ವರ, ಶೀತ ನೆಗಡಿಯ ರೋಗ ಲಕ್ಷಣ ಇರುವ ಬಗ್ಗೆ ವಾರಕ್ಕೊಮ್ಮೆ ಸಮೀಕ್ಷೆ ಮಾಡಬೇಕು ಮತ್ತು ಸೂಕ್ತ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು.

ಕೋಳಿ ಫಾರಂಗಳಿಂದ ಕೋಳಿಗಳನ್ನು ಸಾಗಣೆ ಮಾಡುವ ವಾಹನಗಳನ್ನು ಸೋಂಕು ನಿವಾರಕ ಸಿಂಪಡಿಸಿ ಸ್ವಚ್ಛಗೊಳಿಸಬೇಕು.

ನಿಮ್ಮ ಸಾಕುಪ್ರಾಣಿಗಳಿಗೆ ಲಸಿಕೆ ಹಾಕಿಸಿ.

ಕೋಳಿ ಮತ್ತು ಜಾನುವಾರುಗಳಿರುವ ಸ್ಥಳದಲ್ಲಿ ಕೆಲಸ ಮಾಡುವಾಗ ಕೈಗವಸುಗಳು, ಮುಖವಾಡ ಮತ್ತು ಕನ್ನಡಕಗಳನ್ನು ಧರಿಸಿ,

ಆರೋಗ್ಯ ದುರ್ಬಲವಾಗಿರುವ ವ್ಯಕ್ತಿಗಳಿಗೆ ಲಸಿಕೆಗಳನ್ನು ಹಾಕಿಸಿ.

ಪ್ರತಿ ಐವರು ಭಾರತೀಯರಲ್ಲಿ ಒಬ್ಬರು ವಿಟಮಿನ್ ಡಿ ಕೊರತೆಯಿಂದ ಬಳಲುತ್ತಿದ್ದಾರೆ: ಅಧ್ಯಯನ ಬಹಿರಂಗ

ನವದೆಹಲಿ: ಭಾರತೀಯರು ಗುಪ್ತ ಆರೋಗ್ಯ ಸಮಸ್ಯೆಯ ಸಂಕಷ್ಟದಲ್ಲಿ ಸಿಲುಕಿಹಾಕಿಕೊಂಡಿದ್ದಾರೆಯೇ? ಇತ್ತೀಚಿನ ಅಧ್ಯಯನವೊಂದರ ಪ್ರಕಾರ, ಪ್ರತಿ ಐದು ಭಾರತೀಯರಲ್ಲಿ ಒಬ್ಬರು ವಿಟಮಿನ್ ಡಿ ಕೊರತೆಯಿಂದ ಬಳಲುತ್ತಿದ್ದಾರೆ ಎಂದು ತಿಳಿದುಬಂದಿದೆ. ಜನರ ಜೀವನಶೈಲಿ, ಆಹಾರ ಪದ್ಧತಿ ಮತ್ತು ನೀತಿ ನಿರೂಪಣೆಯಲ್ಲಿನ ನ್ಯೂನತೆಗಳಿಂದಾಗಿ ಆರೋಗ್ಯ ಸಮಸ್ಯೆಗಳು ಇತ್ತೀಚಿನ ವರ್ಷಗಳಲ್ಲಿ ಹೆಚ್ಚಾಗಿ ಕಾಡುತ್ತಿವೆ ಎಂಬ ಆತಂಕಕಾರಿ ಅಂಕಿಅಂಶಗಳನ್ನು ಅಧ್ಯಯನವು ತೋರಿಸಿದೆ.

ಭಾರತೀಯ ಅಂತಾರಾಷ್ಟ್ರೀಯ ಆರ್ಥಿಕ ಸಂಬಂಧಗಳ ಸಂಶೋಧನಾ ಮಂಡಳಿ ಮತ್ತು ಫೌಂಡೇಶನ್ ನಡೆಸಿದ ಸಂಶೋಧನೆ ಪ್ರಕಾರ, ದೇಶದ ನೀತಿ ನಿರೂಪಕರು, ಆರೋಗ್ಯ ವೃತ್ತಿಪರರು ಮತ್ತು ಶಿಕ್ಷಣ ತಜ್ಞರು ಸೇರಿದಂತೆ 300 ಕ್ಕೂ ಹೆಚ್ಚು ಮಂದಿ ಭಾಗವಹಿಸಿದ್ದ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ಈ ವಿಷಯ ಬಹಿರಂಗವಾಗಿದೆ.

ಭಾರತ ದೇಶದ ಪೂರ್ವ ಪ್ರದೇಶದಲ್ಲಿ ವಿಟಮಿನ್ ಡಿ ಕೊರತೆಯು ಹೆಚ್ಚಾಗಿದೆ. ಹದಿಹರೆಯದವರು, ಶಿಶುಗಳು, ವೃದ್ಧರು ಮತ್ತು ಎಲ್ಲಾ ವಯೋಮಾನದ ಮಹಿಳೆಯರು ವಿಟಮಿನ್ ಡಿ ಕೊರತೆಯಿಂದ ಹೆಚ್ಚು ಬಳಲುತ್ತಿದ್ದಾರೆ. ನಗರ ಪ್ರದೇಶದ ಜನರ ಜೀವನಶೈಲಿ ಮತ್ತು ಸೂರ್ಯನ ಬೆಳಕಿಗೆ ಸೀಮಿತ ಒಡ್ಡಿಕೊಳ್ಳುವಿಕೆಯಿಂದಾಗಿ, ಗ್ರಾಮೀಣ ಪ್ರದೇಶದವರಿಗಿಂತ ಕಾಯಿಲೆಗಳಿಗೆ ಹೆಚ್ಚಾಗಿ



ಒಳಗಾಗುತ್ತಿದ್ದಾರೆ.

ವಿಟಮಿನ್ ಡಿ ಕೊರತೆಯು ರಿಕೆಟ್ಸ್ ಮತ್ತು ಆಸ್ಟಿಯೋಮಲೇಶಿಯಾದಂತಹ ಅಸ್ಥಿಪಂಜರದ ಅಸ್ವಸ್ಥತೆಗಳನ್ನು ಮೀರಿ ಬೆಳೆಯುತ್ತದೆ ಎಂದು ತಜ್ಞರು ಎಚ್ಚರಿಸಿದ್ದಾರೆ. ಇದು ಸ್ನಾಯು

ದೌರ್ಬಲ್ಯ, ಖಿನ್ನತೆ, ಹೃದಯ ಸಂಬಂಧಿ ಕಾಯಿಲೆಗಳು, ಟೈಪ್ 2 ಮಧುಮೇಹ ಮತ್ತು ಕೆಲವು ಕ್ಯಾನ್ಸರ್ಗೆ ಕಾರಣವಾಗುತ್ತದೆ.

ವಿಟಮಿನ್ ಡಿ ಕೊರತೆಯು ಲಕ್ಷಾಂತರ ಜನರನ್ನು ಬಾಧಿಸುವ ಮೌನ ಸಾಂಕ್ರಾಮಿಕ ರೋಗವಾಗಿದೆ, ಆದರೆ ಹೆಚ್ಚಾಗಿ ಜನರು ಇದನ್ನು ಕಡೆಗಣಿಸುತ್ತಾರೆ. ಇದರ ಪರಿಣಾಮಗಳು ದುರ್ಬಲ ಮೂಳೆಗಳನ್ನು ಮೀರಿ ವಿಸ್ತರಿಸುತ್ತವೆ. ಆರೋಗ್ಯ ವ್ಯವಸ್ಥೆಯನ್ನು ಒತ್ತಡಕ್ಕೆ ಒಳಪಡಿಸುತ್ತದೆ.

ನಮ್ಮ ರಾಷ್ಟ್ರೀಯ ಆರೋಗ್ಯ ಗುರಿಗಳನ್ನು ದುರ್ಬಲಗೊಳಿಸುತ್ತದೆ ಎಂದು ಆಕಾಶ್ ಹೆಲ್ತ್ಕೇರ್ನ ವ್ಯವಸ್ಥಾಪಕ ನಿರ್ದೇಶಕ ಮತ್ತು ಅಧ್ಯಯನದ ಸಹ–ಲೇಖಕ ಡಾ. ಆಶಿಶ್ ಚೌಧರಿ ಹೇಳುತ್ತಾರೆ.

ಬಿಕ್ಕಟ್ಟನ್ನು ಪರಿಹರಿಸಲು ಹಲವಾರು ವ್ಯವಸ್ಥಿತ ಅಡೆತಡೆಗಳನ್ನು ವರದಿಯು ಗುರುತಿಸುತ್ತದೆ. ಆರೋಗ್ಯ ಕೇಂದ್ರಗಳು, ಆಸ್ಪತ್ರೆಗಳಲ್ಲಿ ಹೆಚ್ಚಿನ ಪರೀಕ್ಷಾ ವೆಚ್ಚಗಳು ಮತ್ತು ಆರೋಗ್ಯ ಪೂರಕಗಳ ಮೇಲಿನ ಶೇಕಡಾ 18ರಷ್ಟು ಜಿಎಸ್ಟಿಯು ರೋಗನಿರ್ಣಯ ಮತ್ತು ಚಿಕಿತ್ಸೆಯನ್ನು ಅನೇಕರಿಗೆ ಭರಿಸಲಾಗದಂತೆ ಮಾಡುತ್ತದೆ.

ದೃಷ್ಟಿಯನ್ನೇ ಕಸಿದುಕೊಳ್ಳುವ ಡೇಂಜರ್ ಗ್ಲುಕೋಮಾ

ಕಂಪ್ಯೂಟರ್ ವೀಕ್ಷಿಸುವುದರಿಂದ ಕಣ್ಣಿನ ಸಮಸ್ಯೆ ಸಾಮಾನ್ಯವಾಗಿದೆ. ಲ್ಯಾಪ್ ಟಾಪ್/ ಕಂಪ್ಯೂಟರ್ ಮೂಲಕ ಕೆಲಸ ಮಾಡುವುದು ಅನಿವಾರ್ಯವಾದ ಕಾರಣ ಕಣ್ಣಿನ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವುದು ಅಗತ್ಯವಾಗಿದೆ.

ವಯಸ್ಸಾದಂತೆ ಕಣ್ಣಿನ ಸಮಸ್ಯೆಗಳು ಹೆಚ್ಚಾಗುತ್ತಿರುತ್ತದೆ. ಅಂತಹ ಸಮಸ್ಯೆಗಳಲ್ಲಿ ಗ್ಲುಕೋಮಾ ಕೂಡ ಒಂದು. ಆರಂಭದಲ್ಲಿ ಗ್ಲುಕೋಮಾ ಯಾವುದೇ ತರಹದ ರೋಗ ಲಕ್ಷಣಗಳನ್ನು ತೋರುವುದಿಲ್ಲ. ಸದ್ದಿಲ್ಲದೆ ತನ್ನ ಪಾಡಿಗೆ ತಾನು ಬೆಳವಣಿಗೆ ಆಗುತ್ತಿರುತ್ತದೆ. ವಯಸ್ಸಾಗುತ್ತಾ ಹೋದಂತೆ ಕಣ್ಣಿನೊಳಗಿನ ಹೆಚ್ಚಿದ ಒತ್ತಡವು ಆಪ್ಟಿಕ್ ನರದ ಅಂಗಾಂಶಕ್ಕೆ ಹಾನಿ ಮಾಡುತ್ತದೆ. ಇದರಿಂದ ದೃಷ್ಟಿ ದುರ್ಬಲವಾಗುತ್ತದೆ. ಹಾಗೆಯೇ ಕುರುಡುತನ ಉಂಟು ಮಾಡುತ್ತದೆ. ಇದರಿಂದ ದೂರ ಇರಬೇಕಾದರೆ ಆಗಾಗ ಕಣ್ಣುಗಳನ್ನು ಪರೀಕ್ಷೆ ಮಾಡಿಸಿಕೊಳ್ಳುವುದು ಇದಕ್ಕಿರುವ ಒಂದು ಉತ್ತಮ ಮಾರ್ಗ.ವೈದ್ಯರು ರೋಗ ನಿರ್ಣಯ ಮಾಡುವ ಮೂಲಕ ಕಣ್ಣುಗಳ ನರಮಂಡಲಗಳ ಮೇಲೆ ಇರುವ ಒತ್ತಡ ಮತ್ತು ಕಣ್ಣುಗಳ ದೃಷ್ಟಿಗೆ ಸಂಬಂಧಪಟ್ಟಂತೆ ಪರೀಕ್ಷೆಗಳನ್ನು ಮಾಡುತ್ತಾರೆ. ಇದರಿಂದ ಗಂಭೀರವಾದ ದೃಷ್ಟಿ ಸಮಸ್ಯೆ ಎದುರಾಗುವ ಮುನ್ನವೇ ಸಮಸ್ಯೆಯನ್ನು ಸರಿಪಡಿಸುತ್ತಾರೆ. ಭಾರತದಲ್ಲಿ ಈ ಸಮಸ್ಯೆ 12

ಮಿಲಿಯನ್ ಜನರಲ್ಲಿ ಕಂಡುಬರುತ್ತಿದ್ದು, ಶೇ.90 ರಷ್ಟು ಗ್ಲುಕೋಮಾ ಸಮಸ್ಯೆಯು ಪತ್ತೆಯಾಗುವುದೇ ಇಲ್ಲ. ಇದರಿಂದಾಗಿ ಪ್ರತೀ ವರ್ಷ ಗ್ಲುಕೋಮಾದಿಂದ ದೃಷ್ಟಿ ಕಳೆದುಕೊಳ್ಳುವವರ ಸಂಖ್ಯೆಯು ಹೆಚ್ಚಾಗುತ್ತಲೇ ಇದೆ.

ಏನಿದು ಗ್ಲುಕೋಮಾ ಕಾಯಿಲೆ?

ಗ್ಲುಕೋಮಾ ಎಂಬುವುದು ಒಂದು ರೀತಿಯ ಕಣ್ಣಿನ ಕಾಯಿಲೆಯಾಗಿದ್ದು, ಈ ಸ್ಥಿತಿಯಲ್ಲಿ ಕಣ್ಣಿನ ದೃಷ್ಟಿನರ ನಿಧಾನವಾಗಿ ಘಾಸಿಗೊಳ್ಳುತ್ತಾ ತನ್ನ ಕ್ಷಮತೆಯನ್ನು ಕಳೆದುಕೊಳ್ಳುತ್ತಾ ಬರುತ್ತದೆ. ಇದಕ್ಕೆ ಮುಖ್ಯ ಕಾರಣ ಕಣ್ಣಿನ ಒಳಭಾಗದ ಒತ್ತಡ.

ಬಾದಾಮಿ ತಿನ್ನುವುದರಿಂದ ಚರ್ಮ, ಕೂದಲು ಮತ್ತು ಆರೋಗ್ಯಕ್ಕಗುವ ಪ್ರಯೋಜನ?

ಇದರಲ್ಲಿರುವ ವಿಟಮಿನ್ ಇ, ಆಂಟಿಆಕ್ಸಿಡೆಂಟ್ಸ್, ಆರೋಗ್ಯಕರ ಕೊಬ್ಬು ನಮ್ಮ ಚರ್ಮವನ್ನು ಕಾಪಾಡುವಲ್ಲಿ ಸಹಾಯ ಮಾಡುತ್ತದೆ. ಬಾದಾಮಿ ಚರ್ಮವನ್ನು ತೇವಗೊಳಿಸಲು ಮತ್ತು ಹೈಡ್ರೇಟ್ ಮಾಡಲು ಸಹಾಯ ಮಾಡುತ್ತದೆ, ಕೊಲ್ಯಾಜಿನ್ ಉತ್ಪಾದನೆಯನ್ನು ಉತ್ತೇಜಿಸುತ್ತದೆ ಮತ್ತು ಆಕ್ಸಿಡೇಟಿವ್ ಹಾನಿಯಿಂದ ರಕ್ಷಿಸುತ್ತದೆ.

ಬಾದಾಮಿಯು ಕೊಬ್ಬಿನಾಮ್ಲಗಳಿಂದ ತುಂಬಿದ್ದು, ಇದು ಕೂದಲಿನ ಆರೋಗ್ಯ ಹಾಗೂ ಬಲ ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಬಾದಾಮಿ ಎಣ್ಣೆಯನ್ನು ಕೂದಲಿಗೆ ಹಚ್ಚಿದರೆ, ಕೂದಲಿನ ಆರೋಗ್ಯ ಹೆಚ್ಚಾಗುವುದಲ್ಲದೆ, ಕೂದಲಿನ ಹೊಳಪು ಕೂಡ ಹೆಚ್ಚಾಗುತ್ತದೆ.

ಬಾದಾಮಿಯಲ್ಲಿ ಕಂಡುಬರುವ ಮೆಗ್ನೀಸಿಯಮ್ ಆರೋಗ್ಯಕರ ಕೂದಲನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ. ಮೆಗ್ನೀಸಿಯಮ್ ಕೊರತೆಯು ಸಾಮಾನ್ಯವಾಗಿ ಕೂದಲು ಉದುರುವಿಕೆಗೆ ಕಾರಣವಾಗುತ್ತದೆ. ಆದ್ದರಿಂದ ಬಾದಾಮಿ ಎಣ್ಣೆ ಅಥವಾ ಬೀಜಗಳನ್ನು ನಿಮ್ಮ ದಿನಚರಿಯಲ್ಲಿ ಸೇರಿಸಿಕೊಂಡರೆ, ಕೂದಲು ತೆಳುವಾಗುವುದನ್ನು ತಡೆಯಬಹುದಾಗಿದೆ.

ಬಾದಾಮಿ ಎಣ್ಣೆಯನ್ನು ನೇರವಾಗಿ ನೆತ್ತಿಗೆ ಹಚ್ಚುವ ಮೂಲಕ, ಕೂದಲಿನ ಬೇರುಗಳನ್ನು ಗಟ್ಟಿ ಮಾಡಬಹುದು.

ಇದು ಆರೋಗ್ಯಕರ ಕೂದಲು ಪಡೆಯಲು ಹಾಗೂ ಕೂದಲು ಉದುರುವಿಕೆಯನ್ನು ಕಡಿಮೆ ಮಾಡುತ್ತದೆ.

ಬಾದಾಮಿಯು ಚರ್ಮವನ್ನು ಮೃದುಗೊಳಿಸುವ ಮತ್ತು ಆರೋಗ್ಯಕರವಾಗಿರುವಂತೆ ಮಾಡುವ ಸಾಮರ್ಥ್ಯವನ್ನು ಹೊಂದಿದೆ. ಅಟೊಪಿಕ್ ಎಸ್ಜಿಮಾದಂತಹ ಒಣ ಚರ್ಮದ ಸಮಸ್ಯೆಗೆ ಚಿಕಿತ್ಸೆ ನೀಡಲು ಬಾದಾಮಿ ಎಣ್ಣೆಯನ್ನು ಹೆಚ್ಚಾಗಿ ಶಿಫಾರಸು ಮಾಡಲಾಗುತ್ತದೆ. ಗರ್ಭಾವಸ್ಥೆಯಿಂದ ಉಂಟಾಗುವ ಗುರುತುಗಳನ್ನೂ ಕಡಿಮೆ ಮಾಡಲು ಇದು ಪರಿಣಾಮಕಾರಿಯಾಗಿದೆ.

ಬಾದಾಮಿಯಲ್ಲಿ ವಿಟಮಿನ್ ಇ ಮತ್ತು ಉತ್ಕರ್ಷಣ ನಿರೋಧಕಗಳಿವೆ, ಇದು ಆರೋಗ್ಯಕರ ಚರ್ಮವನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ. ವಿಟಮಿನ್ ಇ ಚರ್ಮವನ್ನು ಆಕ್ಸಿಡೇಟಿವ್ ಒತ್ತಡದಿಂದ ರಕ್ಷಿಸಲು ಸಹಾಯ ಮಾಡುತ್ತದೆ, ಇದು ಅಕಾಲಿಕ ವಯಸ್ಸಾಗುವಿಕೆ ಮತ್ತು ಇತರ ಚರ್ಮದ ಸಮಸ್ಯೆಗಳಿಂದ ನಿಮ್ಮ ದೇಹವನ್ನು ದೂರವಿರಿಸುತ್ತದೆ. ಬಾದಾಮಿಯಲ್ಲಿರುವ ಆರೋಗ್ಯಕರ ಕೊಬ್ಬುಗಳು ಚರ್ಮದ ಆರೋಗ್ಯಕ್ಕೆ ಸಹಕಾರಿಯಾಗಿದೆ.

ಬಾದಾಮಿಯು ಮೊನೊಸಾಚುರೇಟೆಡ್ ಫ್ಯಾಟಿ ಆಸಿಡ್ (ಒಗಈಂ) ಗಳಿಂದ ತುಂಬಿದ್ದು, ಇದು ಇನ್ಸುಲಿನ್ ಸುಧಾರಿಸಲು ಮತ್ತು ಕೊಲೆಸ್ಟ್ರಾಲ್ ಮಟ್ಟವನ್ನು ಕಡಿಮೆ ಮಾಡಲು ಪ್ರಯೋಜನಕಾರಿಯಾಗಿದೆ. ಬಾದಾಮಿಯಲ್ಲಿರುವ ಹೆಚ್ಚಿನ ಫೈಬರ್ ಮತ್ತು ಆಂಟಿಆಕ್ಸಿಡೆಂಟ್ ಅಂಶವು ಚರ್ಮದ ಕ್ಯಾನ್ಸರ್ ನಿಂದ ದೇಹವನ್ನು ರಕ್ಷಿಸಲು ಮತ್ತು ಹಾನಿಕಾರಕ ಪರಿಣಾಮಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

ತೂಕವನ್ನು ನಿರ್ವಹಿಸಲು ಬಯಸುವವರಿಗೆ, ಬಾದಾಮಿ ಉತ್ತಮ ಆಯ್ಕೆಯಾಗಿದೆ. ಬಾದಾಮಿಯಲ್ಲಿರುವ ಪ್ರೋಟೀನ್, ಫೈಬರ್ ಮತ್ತು ಆರೋಗ್ಯಕರ ಕೊಬ್ಬಿನ ಸಂಯೋಜನೆಯು ಹೊಟ್ಟೆ ತುಂಬಿದ ಭಾವನೆಯನ್ನು ಉತ್ತೇಜಿಸುತ್ತದೆ ಮತ್ತು ಒಟ್ಟಾರೆ ಕ್ಯಾಲೊರಿ ಸೇವನೆಯನ್ನು ಕಡಿಮೆ ಮಾಡುತ್ತದೆ. ಬೆರಳೆಣಿಕೆಯಷ್ಟು ಬಾದಾಮಿಯನ್ನು ತಿನ್ನುವುದು ಹಸಿವನ್ನು ನಿಯಂತ್ರಿಸಲು ಮತ್ತು ಅತಿಯಾಗಿ ತಿನ್ನುವುದನ್ನು ತಡೆಯಲು ಸಹಾಯ ಮಾಡುತ್ತದೆ.

ಬಾದಾಮಿಯ ಗುಣಗಳಲ್ಲಿ ಅತ್ಯುತ್ತಮ ಪ್ರಯೋಜನವೆಂದರೆ ಮೆದುಳಿನ ಕ್ಷಮತೆ ಹೆಚ್ಚಿಸುವುದು. ಬಾದಾಮಿಯಲ್ಲಿರುವ ವಿಟಮಿನ್ ಇ ಮೆದುಳಿನ ತಾರ್ಕಿಕ, ಸ್ಮರಣಾ ಮತ್ತು ಚಿಂತನಾ ಸಾಮರ್ಥ್ಯಗಳನ್ನು ಹೆಚ್ಚಿಸುತ್ತದೆ ಹಾಗೂ ಮರೆಗುಳಿತನವನ್ನು ಇಲ್ಲವಾಗಿಸುತ್ತದೆ. ಮಕ್ಕಳಿಗೆ ಪರೀಕ್ಷಾ ಸಮಯದಲ್ಲಿ ಹೆಚ್ಚಿನ ಸ್ಮರಣ ಶಕ್ತಿಯ ಅಗತ್ಯವಿರುವ ಕಾರಣದಿಂದಲೇ ತಾಯಂದಿರುವ ಮಕ್ಕಳಿಗೆ ತಪ್ಪದೇ ಬಾದಾಮಿಯನ್ನು ತಿನ್ನಿಸುತ್ತಾರೆ.

ಬಾದಾಮಿಯನ್ನು ಒಣದಾಗಿದ್ದಾಗ ಸೇವಿಸುವುದಕ್ಕಿಂತ ನೆನೆಸಿಟ್ಟು ಸೇವಿಸಿದಾಗ ಜೀರ್ಣಿಸಿಕೊಳ್ಳುವುದು ಸುಲಭ. ನೆನೆಸಿಟ್ಟ ಬಾದಾಮಿ ಜೀರ್ಣಕ್ರಿಯೆಯನ್ನು ಉತ್ತೇಜಿಸುತ್ತದೆ. ಅಲ್ಲದೇ, ಪೋಷಕಾಂಶಗಳನ್ನು ಹೀರಿಕೊಳ್ಳಲು ಹೆಚ್ಚಿನ ಸಹಾಯ ಸಿಗುತ್ತದೆ. ಈ ಪೋಷಕಾಂಶಗಳು ಜೀರ್ಣಕ್ರಿಯೆಯನ್ನು ಉತ್ತೇಜಿಸುವ ಕಿಣ್ವಗಳ ಉತ್ಪಾದನೆಗೆ ಪ್ರಚೋದನೆ ನೀಡುತ್ತವೆ. ಪರಿಣಾಮವಾಗಿ ಜೀರ್ಣಕ್ರಿಯೆ ಸುಲಭ ಮತ್ತು ಪರಿಪೂರ್ಣವಾಗುತ್ತದೆ.

ಬಾದಾಮಿಯು ಒಮೆಗಾ–3 ಕೊಬ್ಬಿನಾಮ್ಲಗಳು ಮತ್ತು ಪಾಲಿಫಿನಾಲ್ ಉರಿಯೂತ ಕಡಿಮೆಗೊಳಿಸುವ ಸಾಮರ್ಥ್ಯ ಹೊಂದಿರುತ್ತದೆ. ನೆನೆಸಿದ ಬಾದಾಮಿ ತಿನ್ನುವುದರಿಂದ ಮುಖದ ಮೇಲೆ ಮೊಡವೆ, ಎಸ್ಜಿಮಾ, ಮತ್ತು ಸೋರಿಯಾಸಿಸ್ ನಂತಹ ಸಮಸ್ಯೆಗಳು ಸಹ ದೂರವಾಗುತ್ತದೆ. ಆರೋಗ್ಯಕರ ಕಾಂತಿಯುಕ್ತ ಚರ್ಮ ನಿಮ್ಮದಾಗುತ್ತದೆ.

ಒಂದು ದಿನಕ್ಕೆ ಸರಿಸುಮಾರು 23 ಬಾದಾಮಿಗಳನ್ನು ತಿನ್ನಬಹುದು ಎಂದು ತಜ್ಞರು ಶಿಫಾರಸು ಮಾಡುತ್ತಾರೆ. ಬಾದಾಮಿಯ ಬಹುತೇಕ ಎಲ್ಲಾ ಪೋಷಕಾಂಶಗಳು ಒಳಗಿನ ತಿರುಳಿನಲ್ಲಿದೆ ಹಾಗೂ ಸಿಪ್ಪೆಯಲ್ಲಿ ಅತ್ಯಲ್ಪ ಪ್ರಮಾಣದಲ್ಲಿವೆ. ಸಿಪ್ಪೆಯಲ್ಲಿ ಕರಗದ ನಾರು ಹೆಚ್ಚಿನ ಪ್ರಮಾಣದಲ್ಲಿದೆ. ಹಾಗಾಗಿ, ಸಿಪ್ಪೆ ಸಹಿತ ತಿನ್ನುವುದು ಉತ್ತಮವೇ ಆದರೂ ಕಡ್ಡಾಯವಲ್ಲ. ಸಿಪ್ಪೆ ನಿವಾರಿಸಿ ತಿನ್ನುವುದರಿಂದ ಹೆಚ್ಚಿನ ನಷ್ಟವೇನೂ ಇಲ್ಲದ ಕಾರಣ ಹಾಗೂ ಸಿಪ್ಪೆಯ ಮೂಲಕ ಸಿಗಬಹುದಾದ ಕರಗದ ನಾರಿನ

ಗೌರಿ–ಗಣೇಶ ಹಬ್ಬ ಶಾಂತಿ, ಸೌಹಾರ್ದತೆಯಿಂದ ಆಚರಿಸಿ– ಜಿಲ್ಲಾಧಿಕಾರಿ ಮನವಿ

ಚಿತ್ರದುರ್ಗ : ಜಿಲ್ಲೆಯಲ್ಲಿ ಈ ಬಾರಿಯ ಗೌರಿ ಗಣೇಶ ಹಬ್ಬವನ್ನು ಶಾಂತಿ, ಸೌಹಾರ್ದತೆಯಿಂದ ಆಚರಿಸೋಣ, ಇದ–ಕ್ಕೆ ಎಲ್ಲರ ಸಹಕಾರ ಅಗತ್ಯವಾಗಿದೆ ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಾರ್ವಜನಿಕ ಗಣೇಶ ಪ್ರತಿಷ್ಠಾಪನೆ ಹಾಗೂ ಹಿಂದೂ ಮಹಾ ಗಣಪತಿ ಶೋಭಾಯಾತ್ರೆ ಕುರಿತು ಅಧಿಕಾರಿಗಳು ಹಾಗೂ ಸಂಘಟಕರೊಂದಿಗೆ ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ಗಣೇಶ ಹಬ್ಬ ಹಾಗೂ ನಗರದಲ್ಲಿ ನಡೆಯಲಿರುವ ಹಿಂದೂ ಮಹಾಗಣಪತಿ ವಿಸರ್ಜನಾ ಮೆರವಣಿಗೆ ಶೋಭಾ ಯಾತ್ರೆಯನ್ನು ಶಾಂತಿ ಹಾಗೂ ಸೌಹಾರ್ಧತೆಯಿಂದ ನಡೆಸಲು ಪೊಲೀಸ್ ಇಲಾಖೆಯೊಂದಿಗೆ ಎಲ್ಲರೂ ಕೈ ಜೋಡಿಸಬೇಕು. ಈ ಬಾರಿ ಶೋಭಾಯಾತ್ರೆಯಲ್ಲಿ ಸುಮಾರು 4 ಲಕ್ಷ ಜನ ಭಾಗವಹಿಸುವ ನಿರೀಕ್ಷೆಯಿದೆ. ಪೊಲೀಸ್ ಇಲಾಖೆಯಿಂದ ಈಗಾಗಲೇ ಸೂಕ್ತ ಬಂದೋಬಸ್ತ್‌ಗೆ ಕ್ರಮ ಕೈಗೊಳ್ಳಲಾಗಿದೆ. ನಗರದ ಬಿ.ಡಿ. ರಸ್ತೆ ಹಾಗೂ ಹೊಳಲ್ಕೆರೆ ರಸ್ತೆಯಲ್ಲಿ ಸುಗಮವಾಗಿ ಮೆರವಣಿಗೆ ಹಾದು ಹೋಗುವಂತೆ ನಗರಸಭೆಯಿಂದ ಬ್ಯಾರಿಕೇಡ್‌ಗಳನ್ನು ಅಳವಡಿಸಬೇಕು. ಪೊಲೀಸರು ವೀಕ್ಷಣೆಗೆ ಅನುಕೂಲವಾಗುವಂತೆ ವಾಚ್ ಟವರ್ ನಿರ್ಮಿಸಬೇಕು. ಸ್ವಚ್ಛತೆ, ಕುಡಿಯುವ ನೀರು ಹಾಗೂ ಸಂಚಾರಿ ಶೌಚಾಲಯಗಳ ವ್ಯವಸ್ಥೆ ಮಾಡಬೇಕು. ಮೆರವಣಿಗೆ ಸಾಗುವ ರಸ್ತೆ ಹಾಗೂ ಅಸುಪಾಸಿನ ಸ್ಥಳದಲ್ಲಿ ನಿರ್ಮಾಣ ಹಂತದಲ್ಲಿರುವ ಕಟ್ಟಡಗಳ ಮೇಲೆ ಸಾರ್ವಜನಿಕರು ಹತ್ತಿ ನಿಲ್ಲದಂತೆ ನಿರ್ಬಂಧ ವಿಧಿಸಬೇಕು. ಬೆಸ್ಕಾಂ ಅಧಿಕಾರಿಗಳು ಮೆರವಣಿಗೆ ವೇಳೆ ವಿದ್ಯುತ್ ಅಡಚಣೆಯಾಗದಂತೆ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚಿಸಿದರು.

ಇದೇ ವೇಳೆ ಪಿಓಪಿ ಗಣೇಶ ಮೂರ್ತಿಗಳ ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ ಎಂದು ತಿಳಿಸಿದ ಅವರು, ಪರಿಸರ ಅಧಿಕಾರಿಗಳು

ತಂಡಗಳನ್ನು ರಚಿಸಿ ಗಣೇಶ ಮೂರ್ತಿಗಳ ಮಾರಾಟ ಸ್ಥಳಗಳಲ್ಲಿ ನಿರಂತರವಾಗಿ ಪರಿಶೀಲನೆ ನಡೆಸುವಂತೆ ನಿರ್ದೇಶನ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜ–ತ್ ಕುಮಾರ್ ಬಂಡಾರು ಅವರು ಮಾತನಾಡಿ, ಸಾರ್ವಜನಿಕ ಗಣೇಶ ಪ್ರತಿಷ್ಠಾಪನೆ ಹಾಗೂ ವಿಸರ್ಜನೆ ಮೆರವಣಿಗೆಯಲ್ಲಿ ಡಿ.ಜೆ. ಬಳಸಲು ಅನುಮತಿ ನೀಡಲಾಗುವುದಿಲ್ಲ. ಕಳೆದ ಬಾರಿ ಶೋಭಾಯಾತ್ರೆಯಲ್ಲಿ ಸುಮಾರು 3 ಲಕ್ಷಕೂ ಹೆಚ್ಚು ಜನರು ಪಾಲ್ಗೊಂಡಿದ್ದರು. ಸುಮಾರು 10ಕ್ಕೂ ಹೆಚ್ಚು ಜನರಿಗೆ ಡಿ.ಜೆ. ಶಬ್ದದಿಂದಾಗಿ ಕಿವಿಯ ತೊಂದರೆ ಉಂಟಾಗಿದೆ. ಬಂದೋಬಸ್ತ್‌ಗೆ ನಿಯೋಜಿಸಿದ್ದ ಪೊಲೀಸ್ ಸಬ್ ಇನ್ಸ್‌ಪಕ್ಟರ್ ಓರ್ವರು ಸಹ ಕಿವಿ ಸಮಸ್ಯೆಗೆ ತುತ್ತಾಗಿ ಚಿಕಿತ್ಸೆ ಪಡೆದಿದ್ದಾರೆ. ಡಿ.ಜೆ. ಶಬ್ದದಿಂದಾಗಿ ಪೊಲೀಸ್ ವೈರ್‌ಲೆಸ್ ವಾಕಿ ಟಾಕಿಗಳು ಸರಿಯಾಗಿ ಕಾರ್ಯನಿರ್ವಹಿಸದ ಕಾರಣ ಸಂವಹನದಲ್ಲಿ ಅಡೆ ತಡೆಯಾಗಿತ್ತು. ಇದರಿಂದಾಗಿ ಕಾನೂನು ಸುವ್ಯವಸ್ಥೆ ಕಾಪಾಡಲು ತೊಂದರೆಯಾಗುತ್ತದೆ. ಮೆರವಣಿಗೆಯಲ್ಲಿ ನಿಗದಿತ ಡೆಸಿಬಲ್‌ಗಿಂತ ಹೆಚ್ಚಿನ ಶಬ್ದ ಉಂಟುಮಾಡುವ ಧ್ವನಿ ವರ್ಧಕ ಸೇರಿದಂತೆ ಶಬ್ದಮಾಲಿನ್ಯ ಮಾಡುವ ಎಲೆಕ್ಟ್ರಾನಿಕ್ ಡಿವೈಸ್‌ಗಳನ್ನು ಬಳಸುವಂತಿಲ್ಲ. ಸಾರ್ವಜನಿಕರಿಗೆ ಗೊಂದಲ ಉಂಟುಮಾಡುವ ಚಟುವಟಿಕೆಗಳನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದ್ದು, ಪಟಾಕಿಗಳನ್ನು ಸಿಡಿಸುವಂತಿಲ್ಲ. ಒಂದು ವೇಳೆ ಯಾರಾದರೂ ಪಟಾಕಿ ಸಿಡಿಸಿದರೆ, ಅವರನ್ನು ಸ್ಥಳದಲ್ಲಿಯೇ ಬಂಧಿಸಲಾಗುವುದು.

ಮೆರವಣಿಗೆಯಲ್ಲಿ ಪ್ರಚೋಧನಕಾರಿ ಘೋಷಣೆಗಳನ್ನು ಕೂಗಬಾರದು. ಶೋಭಾಯಾತ್ರೆ ಮೆರವಣಿಗೆಗೆ ಸುಮಾರು 3000 ಪೊಲೀಸ್ ಸಿಬ್ಬಂದಿ ನೇಮಿಸಲಾಗುವುದು. ಬರುವ ಭಾನುವಾರ ಆಗಸ್ಟ್ 24 ರಂದು ಎಲ್ಲ ಧರ್ಮಗಳ ಮುಖಂಡರೊಂದಿಗೆ ಶಾಂತಿ ಸಭೆ ನಡೆಸಲಾಗುವುದು ಎಂದು ಪೊಲೀಸ್ ವರಿಷ್ಠಾಧಿಕಾರಿ ರಂಜತ್ ಕುಮಾರ್ ಬಂಡಾರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಎಸ್. ಆಕಾಶ್, ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಉಮೇಶ್ ಈಶ್ವರ್ ನಾಯ್ಕ್, ಜಿಲ್ಲಾ ಪರಿಸರ ಅಧಿಕಾರಿ ಆಸಿಫ್ ಖಾನ್, ನಗರಸಭೆ ಆಯುಕ್ತೆ ರೇಣುಕಾ.ಎಂ ಜಿಲ್ಲೆಯ ಎಲ್ಲಾ ವಿಭಾಗಗಳ ಪೊಲೀಸ್ ಉಪಾಧೀಕ್ಷಕರು, ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಹಿರೇಕೊಳಲೆ ಗ್ರಾ.ಪಂ ವ್ಯಾಪ್ತಿಯ ಹೊಸಪುರ ನೂತನ ಕಂದಾಯ ಗ್ರಾಮ : ಶಾಸಕ ತಮ್ಮಯ್ಯ

ಚಿಕ್ಕಮಗಳೂರು: ಜನಪರವಾದ ಆಡಳಿತದ ಮೂಲಕ ಜನರ ಮನೆಬಾಗಿಲಿಗೆ ಸರ್ಕಾರದ ಯೋಜನೆಗಳ ಸೌಲಭ್ಯಗಳನ್ನು ತಲುಪಿಸುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಶಾಸಕ ಹೆಚ್.ಡಿ. ತಮ್ಮಯ್ಯ ತಿಳಿಸಿದರು.

ಅವರು ಇಂದು ಹಿರೇಕೊಳಲೆ ಗ್ರಾ.ಪಂ ವ್ಯಾಪ್ತಿಯ ಹೊಸಪುರ ಹಾಗೂ ಅಕ್ಕಪಕ್ಕದ ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ಘೋಷಿಸಿರುವ ಹಿನ್ನೆಲೆಯಲ್ಲಿ 'ವಾಸಿಸುವವನೇ ಮನೆ ಒಡೆಯ' ಯೋಜನೆಯಡಿ ಹಕ್ಕುಪತ್ರ, ಇ–ಸ್ವತು ವಿತರಿಸಿ ಮಾತನಾಡಿದರು.

ರಾಜ್ಯದಲ್ಲಿ ಈಗಾಗಲೇ ಈ ಯೋಜನೆಯಡಿ 4 ಲಕ್ಷಕ್ಕೂ ಹೆಚ್ಚು ಜನರಿಗೆ ಹಕ್ಕುಪತ್ರ ನೀಡಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಕಂದಾಯ ಸಚಿವ ಕೃಷ್ಣಭೈರೇಗೌಡ ಈ ಯೋಜನೆಗೆ ಚಾಲನೆ ನೀಡಿದ್ದು, ಚಿಕ್ಕಮಗಳೂರು ವಿಧಾನಸಭಾ ಕ್ಷೇತ್ರದಲ್ಲಿ ಈಗಾಗಲೇ 350 ಕುಟುಂಬಗಳಿಗೆ ಹಕ್ಕುಪತ್ರ ನೀಡಲಾಗಿದ್ದು, ಒಟ್ಟು 2800 ಕುಟುಂಬಗಳಿಗೆ ಹಕ್ಕುಪತ್ರ ನೀಡಲು ಗುರಿಹೊಂದಲಾಗಿದೆ ಎಂದರು.

1977–78 ರಲ್ಲಿ ಪ್ರಧಾನಿಯಾಗಿದ್ದ ಶ್ರೀಮತಿ ಇಂದಿರಾ ಗಾಂಧಿಯವರು ಮತ್ತು ರಾಜ್ಯದಲ್ಲಿ ಮುಖ್ಯಮಂತ್ರಿಯಾಗಿದ್ದ ಡಿ.

ದೇವರಾಜ್ ಅರಸ್ ಅವರ ಅವಧಿಯಲ್ಲಿ 'ಉಳುವವನೇ ಭೂ ಒಡೆಯ' ಎಂಬ ಕಾನೂನು ಜಾರಿಗೆ ತರಲಾಗಿತ್ತು. ಈ ಮೂಲಕ ಹಲವರಿಗೆ ಭೂಮಿ ಲಭಿಸಿತು ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕೃಷಿ ಕುಟುಂಬ, ರೈತ ಕಾರ್ಮಿಕ, ಮಧ್ಯಮ ವರ್ಗದವರ ಸಾಮಾನ್ಯ ಜನರ ಪ್ರತಿನಿಧಿಯಾಗಿ ಕೆಲಸ ಮಾಡಿದ್ದು, ಅದ–ಕ್ಕೆ ಪೂರಕವಾಗಿ ನಿಮ್ಮ ಪ್ರತಿನಿಧಿಯಾಗಿದ್ದೇನೆ, ಬಡಜನರ ಕಷ್ಟ ಅರಿತು ಮುಖ್ಯಮಂತ್ರಿಗಳು 5 ಗ್ಯಾರಂಟಿ ಯೋಜನೆಗಳ ಮೂಲಕ ಆರ್ಥಿಕ ಸದೃಢರನ್ನಾಗಿಸಿಲು ಶ್ರಮಿಸುತ್ತಿದ್ದಾರೆಂದು ಶ್ಲಾಘಿಸಿದರು. ನಾಡು–ನುಡಿ, ನೆಲ–ಜಲ ಮುಂತಾದವುಗಳಿಗೆ ಮೊದಲ ಆದ್ಯತೆ ನೀಡುವುದರ ಮೂಲಕ ದೇಶಪ್ರೇಮಿಗಳಾಗಿ ಹಂತ ಹಂತವಾಗಿ ಕ್ಷೇತ್ರದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಮುಖ್ಯಮಂತ್ರಿಗಳ ವಿಶೇಷ ಅನುದಾನದಲ್ಲಿ ಕ್ಷೇತ್ರದ 34 ಗ್ರಾಮ ಪಂಚಾಯಿತಿಗಳಲ್ಲಿ ತಲಾ 60 ಲಕ್ಷ ರೂ ನೀಡುವ ಮೂಲಕ ಕಾಂಕ್ರೀಟ್ ರಸ್ತೆ ನಿರ್ಮಾಣ ಮಾಡಲಾಗಿದೆ. ಅದೇ ರೀತಿ ನಾರುಕಂತೆ ಮಠದ ರಸ್ತೆಗೆ 50 ಲಕ್ಷ ರೂ ವೆಚ್ಚದಲ್ಲಿ ಕಾಂಕ್ರೀಟ್ ರಸ್ತೆ ನಿರ್ಮಿಸಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಹಿರೇಕೊಳಲೆ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಕವಿತಾಸುನಿಲ್, ತಾಲ್ಲೂಕು ಪಂಚಾಯಿತಿ ಇಓ ವಿಜಯ್‌ಕುಮಾರ್, ಹೆಚ್.ಪಿ ಮಂಜೇಗೌಡ, ಜಯರಾಜ್ ಅರಸ್, ಪ್ರವೀಣ್, ಯಶ್ವಂತ್, ಶಿವಕುಮಾರ, ರವಿ,. ಸುರೇಶ, ಪ್ರಸನ್ನ, ಕೇಶವ, ಚಂದ್ರಮೌಳಿ ಮತ್ತಿತರರು ಉಪಸ್ಥಿತರಿದ್ದರು. ಮೊದಲಿಗೆ ಪಿಡಿಓ

ಛಲವಾದಿ ನಾರಾಯಣಸ್ವಾಮಿಗೆ ದಿಗ್ಬಂಧನ; ರಾಜ್ಯಪಾಲರ ಭೇಟಿಯಾದ ಬಿಜೆಪಿ ನಿಯೋಗ

ಸಚಿವ ಸ್ಥಾನದಿಂದ ಪ್ರಿಯಾಂಕ್ ಖರ್ಗೆ ವಜಾಕ್ಕೆ ಆಗ್ರಹ

ಬೆಂಗಳೂರು: ವಿಧಾನಪರಿಷತ್ತಿನ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರ ಮೇಲೆ ಸಚಿವ ಪ್ರಿಯಾಂಕ್ ಖರ್ಗೆ ಬೆಂಬಲಿಗರು ನಡೆಸಿರುವ ದಿಗ್ಬಂಧನ ಹಾಗೂ ಹಲ್ಲೆ ಯತ್ನಕ್ಕೆ ಬಿಜೆಪಿ ನಾಯಕರು ಭಾರೀ ಆಕ್ರೋಶ ವ್ಯಕ್ತಪಡಿಸಿದ್ದು, ರಾಜ್ಯಪಾಲ ಥಾವರ್ ಚೆಂದ್ ಗೆಹ್ಲೋಟ್ ಅವರನ್ನು ಭೇಟಿ ಮಾಡಿ ಸಚಿವ ಸ್ಥಾನದಿಂದ ಪ್ರಿಯಾಂಕ್ ಖರ್ಗೆ ಅವರನ್ನು ವಜಾ ಮಾಡಬೇಕು ಎಂದು ಮನವಿ ಮಾಡಿದ್ದಾರೆ.

ರಾಜಭವನದಲ್ಲಿ ರಾಜ್ಯಪಾಲರನ್ನು ಭೇಟಿಯಾದ ಬಿಜೆಪಿ ನಿಯೋಗ, ಘಟನೆ ಸಂಬಂಧ ರಾಜ್ಯಪಾಲರು ತಕ್ಷಣ ಮಧ್ಯಪ್ರವೇಶ ಮಾಡಬೇಕು. ಸಚಿವ ಸ್ಥಾನದಿಂದ ಪ್ರಿಯಾಂಕ್ ಖರ್ಗೆಯನ್ನು ವಜಾ ಮಾಡಬೇಕು. ಅಲ್ಲದೇ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಬೇಕು ಮನವಿ ಪತ್ರ ಸಲ್ಲಿಸಿದರು.

ಈ ವೇಳೆ ವಿಧಾನಸಭೆ ವಿಪಕ್ಷ ನಾಯಕ ಆರ್ ಅಶೋಕ್, ಚಲುವಾದಿ ನಾರಾಯಣಸ್ವಾಮಿ, ರವಿಕುಮಾರ್, ಅಶ್ವತ್ಥ್ ನಾರಾಯಣ ಸೇರಿದಂತೆ ಇತರರು ಇದ್ದರು.

ನಾರಾಯಣಸ್ವಾಮಿ ಅವರನ್ನು ಚಿತ್ತಾಪುರ

ಬಂಗಲೆಯಲ್ಲಿ ಮರಳು ಮಾಫಿಯಾದೊಂದಿಗೆ ಸಂಬಂಧ ಹೊಂದಿರುವವರು ಸೇರಿದಂತೆ ಕೆಲ ವ್ಯಕ್ತಿಗಳು ಕಾನೂನುಬಾಹಿರವಾಗಿ ಐದು ಗಂಟೆಗಳಿಗೂ ಹೆಚ್ಚು ಕಾಲ ಬಂಧನದಲ್ಲಿಟ್ಟುಕೊಂಡಿದ್ದಾರೆ. ದಾಳಿಕೋರರು ಬಲವಂತವಾಗಿ ಆವರಣಕ್ಕೆ ಬೀಗ ಹಾಕಿದರು, ದೈಹಿಕವಾಗಿ ದಾಳಿ ಮಾಡಲು ಪ್ರಯತ್ನಿಸಿದ್ದು, ಅವರನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ. ಬಿಜೆಪಿಯ ಇತರ ಸದಸ್ಯರ ಮೇಲೆ ಹಲ್ಲೆ ನಡೆಸಿದ್ದಾರೆ.

ಸ್ಥಳದಲ್ಲಿ ಪೊಲೀಸರಿದ್ದರೂ ಮೌನ ಪ್ರೇಕ್ಷಕರಾಗಿದ್ದಾರೆ. ಗಣ್ಯರನ್ನು ರಕ್ಷಿಸಲು ಮಧ್ಯಪ್ರವೇಶಿಸುವಲ್ಲಿ ವಿಫಲರಾಗಿದ್ದಾರೆ ಎಂದು. "ಇಡೀ ಜಿಲ್ಲಾ ಪೊಲೀಸ್ ಪಡೆ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರ ಸೂಚನೆಗಳನ್ನು ಪಾಲಿಸುತ್ತಿದೆ ಎಂಬುದು ಇದರಿಂದ ಸ್ಪಷ್ಟವಾಗಿದೆ ಎಂದು ಆರೋಪಿಸಿದೆ.

ರಾಜ್ಯಪಾಲರಿಗೆ ಮನವಿ ಪತ್ರ ಸಲ್ಲಿಸಿದ ಬಳಿಕ ಮಾಧ್ಯಮಗಳಿಗೆ ಪ್ರತಕಿಕ್ರಿಯಿಸಿದ ಅಶೋಕ್ ಅವರು, ನಾರಾಯಣಸ್ವಾಮಿ ಮೇಲಿನ ದಾಳಿಗೆ ಪ್ರಿಯಾಂಕ್ ಖರ್ಗೆ ಕಾರಣ ಎಂದು ರಾಜ್ಯಪಾಲರಿಗೆ ತಿಳಿಸಿರುವುದಾಗಿ ಹೇಳಿದರು.

ಕಾಂಗ್ರೆಸ್ ಕಾರ್ಯಕರ್ತರಿಗೆ ಕಾನೂನು ಕೈಗೆತ್ತಿಕೊಳ್ಳುವ ಅಧಿಕಾರ ಕೊಟ್ಟವರು ಯಾರು? ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವು ಗೂಂಡಾಗಿರಿಯಲ್ಲಿ ತೊಡಗಿದೆ. ನಾರಾಯಣಸ್ವಾಮಿಗೆ ಸೂಕ್ತ ರಕ್ಷಣೆ ನೀಡುವಂತೆ ಹಾಗೂ ಪೊಲೀಸರು ಮತ್ತು ಗೂಂಡಾಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ರಾಜ್ಯಪಾಲರಿಗೆ ಮನವಿ ಮಾಡಲಾಗಿದೆ ಎಂದು ಹೇಳಿದರು.

ನಾರಾಯಣಸ್ವಾಮಿ ಅವರ ಜೀವಕ್ಕೆ ಬೆದರಿಕೆ ಇದೆ. ಅವರಿಗೆ ಏನಾದರೂ ಆದರೆ ಅದಕ್ಕೆ ರಾಜ್ಯ ಸರ್ಕಾರ ಮತ್ತು ಪ್ರಿಯಾಂಕ್ ಅವರ ಪ್ರಚೋದನೆಯೇ ಕಾರಣ. ಅವರ ಭದ್ರತೆಯನ್ನು ಹೆಚ್ಚಿಸಬೇಕೆಂದು ಸರ್ಕಾರವನ್ನು ಒತ್ತಾಯಿಸಿದರು.

ಬಿಜೆಪಿ ನಾಯಕ ಎನ್. ರವಿ ಕುಮಾರ್ ಅವರು ಮಾತನಾಡಿ, ಕಲಬುರಗಿಯಲ್ಲಿ ಪ್ರಿಯಾಂಕ್ ಖರ್ಗೆ ಅವರ ಸರ್ವಾಧಿಕಾರದಲ್ಲಿದೆ. ಕಾಂಗ್ರೆಸ್ ಕಾರ್ಯಕರ್ತರು ತಾವು ಮಾಡಿದ್ದೇ ಕಾನೂನು ಎಂದುಕೊಂಡಿದ್ದಾರೆ. ಪೊಲೀಸರು ಅಸಹಾಯಕರಾಗಿದ್ದಾರೆಂದು ಕಿಡಿಕಾರಿದರು.

ಇದೇ ವೇಳೆ ಕರ್ತವ್ಯ ನಿರ್ವಹಿಸುವಲ್ಲಿ ವಿಫಲರಾದ ಪೊಲೀಸ್ ಅಧಿಕಾರಿಗಳನ್ನು ಅಮಾನತುಗೊಳಿಸಿ. ಅವರ ವಿರುದ್ಧ ಕಠಿಣ ಶಿಸ್ತು ಕ್ರಮ ಕೈಗೊಳ್ಳಬೇಕೆಂದು ಸರ್ಕಾರವನ್ನು ಒತ್ತಾಯಿಸಿದರು.

ಭಯೋತ್ಪಾದನೆಯಾಗಲಿ ಅಥವಾ ನಕ್ಸಲಿಸಂ ಆಗಿರಲಿ,

ನಮ್ಮದು ಶೂನ್ಯ ಸಹಿಷ್ಣುತೆ

ಪ್ರಧಾನಿ ನರೇಂದ್ರ ಮೋದಿ

ನವದೆಹಲಿ: ಭಯೋತ್ಪಾದನೆ ಮತ್ತು ನಕ್ಸಲ್‌ವಾದದ ಬಗ್ಗೆ ಶೂನ್ಯ ಸಹಿಷ್ಣುತೆ ನೀತಿಗೆ ತಮ್ಮ ಸರ್ಕಾರದ ಅಚಲ ಬದ್ಧತೆಯನ್ನು ಪ್ರಧಾನಿ ನರೇಂದ್ರ ಮೋದಿ ಪುನರುಚ್ಚರಿಸಿದ್ದಾರೆ, ಈಶಾನ್ಯ ಭಾರತ ರಾಜ್ಯಗಳ ಸಂಪೂರ್ಣ ಸಾಮರ್ಥ್ಯವನ್ನು ತೋರಿಸಲು ಶಾಂತಿ ಮತ್ತು ಭದ್ರತೆ ಅತ್ಯಗತ್ಯ ಎಂದು ಒತ್ತಿ ಹೇಳಿದರು.

'ರೈಸಿಂಗ್ ನಾರ್ತ್ ಈಸ್ಟ್ ಇನ್ವೆಸ್ಟರ್ಸ್ ಸಮ್ಮಿತ್' ಉದ್ಘಾಟನಾ ಅಧಿವೇಶನದಲ್ಲಿ ಮಾತನಾಡಿದ ಪ್ರಧಾನಿ ಮೋದಿ, ಒಂದು ಕಾಲದಲ್ಲಿ ಹಿಂಸಾಚಾರದಿಂದ ಬಳಲುತ್ತಿದ್ದ ಈ ಪ್ರದೇಶವು ಈಗ ಪರಿವರ್ತನೆ ಮತ್ತು ತ್ವರಿತ ಅಭಿವೃದ್ಧಿಯ ಹಾದಿಯಲ್ಲಿದೆ ಎಂದು ಹೇಳಿದರು.

ಕಳೆದೊಂದು ದಶಕದಲ್ಲಿ ಈಶಾನ್ಯ ಭಾಗದ 10,000 ಕ್ಕೂ ಹೆಚ್ಚು ಯುವಕರು ಹಿಂಸಾಚಾರವನ್ನು ತ್ಯಜಿಸಿದ್ದಾರೆ ಎಂದು ಅವರು ಹೇಳಿದರು, ಇದು ಬದಲಾವಣೆ ಮತ್ತು ಸ್ಥಿರತೆಯ ಪ್ರಬಲ ಸಂಕೇತವಾಗಿದೆ ಎಂದು ಶ್ಲಾಘಿಸಿದರು.

ಈಶಾನ್ಯ ಭಾರತ ದೇಶದ ಬೆಳವಣಿಗೆಯ ಹೊಸ ಕೇಂದ್ರಬಿಂದು. ಈಶಾನ್ಯ ಭಾಗವನ್ನು ಕೇವಲ ಗಡಿಭಾಗ ಎಂದು ಕರೆಯುತ್ತಿದ್ದ ಕಾಲವಿತ್ತು. ಈಗ ಅದು ಬೆಳವಣಿಗೆಯ ಮುಂಚೂಣಿಯಲ್ಲಿದೆ ಎಂದರು.

EAST ಎಂದರೆ ಸಬಲೀಕರಣ, ಕಾರ್ಯ, ಬಲವರ್ಧನೆ ಮತ್ತು ಪರಿವರ್ತನೆ, ಇದು ಪ್ರದೇಶದ ಸಮಗ್ರ ಅಭಿವೃದ್ಧಿಗಾಗಿ ಕೇಂದ್ರೀಕೃತ ಕಾರ್ಯಸೂಚಿಯನ್ನು ಪ್ರತಿಬಿಂಬಿಸುತ್ತದೆ ಎಂದು ಪ್ರಧಾನಿ ಒತ್ತಿ ಹೇಳಿದರು. ಇಂದಿನ ಶೃಂಗಸಭೆಯಲ್ಲಿ ಉನ್ನತ ಮಟ್ಟದ ಉದ್ಯಮ ನಾಯಕರಾದ ಮುಖೇಶ್ ಅಂಬಾನಿ, ಗೌತಮ್ ಅದಾನಿ, ಅನಿಲ್ ಅಗರ್ವಾಲ್ ಇತರರು ಭಾಗವಹಿಸಿದ್ದರು.

ಆದರ್ಶ ಪುರುಷರ ಆರಾಧನೆಗಿಂತ ಅವರ ತತ್ವಾದರ್ಶ ಪರಿಪಾಲಿಸಿ: ಡಾ. ಎಂ.ಬಿ. ರಾಮಚಂದ್ರಪ್ಪ ಕರೆ

ದಾವಣಗೆರೆ: ಆದರ್ಶ ಪುರುಷರನ್ನು ದೇವರಂತೆ ಆರಾಧಿಸುವುದಕ್ಕಿಂತ, ಅವರ ಆದರ್ಶಗಳನ್ನು ಪರಿಪಾಲಿಸಬೇಕು. ಅದೇ ನಾವು ಅವರಿಗೆ ನೀಡುವ ಗೌರವ ಎಂದು ಮಾನವ ಬಂಧುತ್ವ ವೇದಿಕೆಯ ರಾಜ್ಯ ಸಂಚಾಲಕ ಪ್ರೊ. ಎ.ಬಿ. ರಾಮಚಂದ್ರಪ್ಪ ಅಭಿಪ್ರಾಯಪಟ್ಟರು.

ಶುಕ್ರವಾರ ಕುವೆಂಪು ಕನ್ನಡ ಭವನದಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ(ಸಾಮಾಜಿಕ ನ್ಯಾಯಕ್ಕಾಗಿ) ವತಿಯಿಂದ ಹಮ್ಮಿಕೊಂಡಿದ್ದ ಡಾ. ಬಿ.ಆರ್. ಅಂಬೇಡ್ಕರ್, ಬಸವೇಶ್ವರ ಹಾಗೂ ಬಾಬು ಜಗಜೀವನರಾಮ್ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಬುದ್ಧ, ಬಸವಣ್ಣ, ಅಂಬೇಡ್ಕರ್ ಶೋಷಿತ ವರ್ಗಕ್ಕೆ ಆಧುನಿಕ ದೇವರುಗಳು. ಅಂದ ಮಾತ್ರಕ್ಕೆ ಗುಡಿ ಕಟ್ಟಿ ಪೂಜಿಸುವುದಲ್ಲ.

ಅಂಬೇಡ್ಕರ್ ಮತ್ತು ಬಸವಣ್ಣನ ಅನುಯಾಯಿಗಳು ವ್ಯಕ್ತಿಪೂಜೆಯಲ್ಲಿ ತೊಡಗುವುದಕ್ಕಿಂತ ಅವರ ವಿಚಾರಗಳನ್ನು ನಮ್ಮ ಅರಿವಿನ ಭಾಗವಾಗಿಸಿಕೊಳ್ಳಬೇಕು. ನಮ್ಮ ನಿಜವಾದ ಸಾಂಸ್ಕೃತಿಕ ನಾಯಕರನ್ನು ಗುರುತಿಸಬೇಕು ಎಂದು ಹೇಳಿದರು.

ದೇಶದ ಗಡಿ ಕಾಯುವ ಯೋಧರದ್ದು ನಿಜವಾದ ದೇಶಪ್ರೇಮ. ಜಾತಿವಾದ, ಕೋಮುವಾದ ದೇಶಪ್ರೇಮವಲ್ಲ. ದೇಶದಲ್ಲಿ ಪ್ರಸ್ತುತ ಯುದ್ಧದ ಕಾರ್ಮೋಡ ಆವರಿಸಿದೆ. ಆದರೆ ಯುದ್ಧದಿಂದ ಈವರೆಗೆ ಏನೂ ಸಾಧನೆಯಾಗಿಲ್ಲ. ಭಾರತ ಶಾಂತಿಯ ನಾಡು. ಪಾಕ